ಸಂಪುಟ: ೦೭/ ಸಂಚಿಕೆ: ೧೧೬/ಶುಕ್ರವಾರ ದಿನಾಂಕ : ೨೦-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ: 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 116/ FRIDAY Date : 20-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ಹೆಚ್ಚಳ

# ಸಂಪುಟ ಸಭೆಯಲ್ಲಿ ಮಹತ್ವದ ನಿರ್ಧಾರ

ಬೆಂಗಳೂರು: ರಾಜ್ಯ ಸರ್ಕಾರ ಗುತ್ತಿಗೆ ಬೆನ್ನಲ್ಲೇ ಅಲ್ಪಸಂಖ್ಯಾತರಿಗೆ ಮತ್ತೊಂದು ಯೋಜನೆಯಲ್ಲಿ ಮೀಸಲಾತಿ ಹೆಚ್ಚಳ ಮಾಡಿದ್ದು, ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿಯನ್ನು ಶೇಕಡಾ 10 ರಿಂದ 15 ಕ್ಕೆ ಹೆಚ್ಚಿಸಲು ಸಚಿವ ಸಂಪುಟ ಸಭೆ ಗುರುವಾರ ಅನುಮೋದನೆ ನೀಡಿದೆ.

ಇಂದು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಸಿದ ಸಚಿವ ಸಂಪುಟ ಸಭೆಯಲ್ಲಿ, ರಾಜ್ಯದ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತರಿಗೆ ಮೀಸಲಾತಿ ಹೆಚ್ಚಿಸುವ ಮಹತ್ವದ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್, "ರಾಜ್ಯಾದ್ಯಂತ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ವಸತಿ ಇಲಾಖೆಯು ಜಾರಿಗೆ ತರುತ್ತಿರುವ ವಿವಿಧ ವಸತಿ ಯೋಜನೆಯಲ್ಲಿ, ಅಲ್ಪಸಂಖ್ಯಾತರ ಮೀಸಲಾತಿಯನ್ನು ಶೇಕಡಾ 10 ರಿಂದ 15 ಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ" ಎಂದು ತಿಳಿಸಿದರು.

ರಾಜ್ಯದ ಅಲ್ಪಸಂಖ್ಯಾತರಲ್ಲಿ ಹೆಚ್ಚಿನ ಸಂಖ್ಯೆಯ ಜನ ವಸತಿ ರಹಿತರಾಗಿದ್ದು, ಇದನ್ನು ಗಮನಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

ಬೆಂಗಳೂರು, ಜೂನ್ 19 (ಪಿಟಿಐ) ಜೂನ್ 4 ರಂದು ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತದಲ್ಲಿ 11 ಜನರು ಸಾವನ್ನಪ್ಪಿದ ನಂತರ ಜನಸಂದಣಿ ನಿಯಂತ್ರಣ ಮತ್ತು ನಿರ್ವಹಣೆಗೆ ಸಂಬಂಧಿಸಿದ ಮಸೂದೆಯನ್ನು ಮುಂದಿನ ಸಂಪುಟ



ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ ಎಂದು ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಗುರುವಾರ ತಿಳಿಸಿದ್ದಾರೆ.

ಅಲ್ಲದೆ, ತಪ್ಪು ಮಾಹಿತಿ ಅಥವಾ ನಕಲಿ ಸುದ್ದಿಗಳ ವಿರುದ್ಧದ ಮಸೂದೆಗಳು ಮತ್ತು ದ್ವೇಷ ಭಾಷಣಗಳು ಮತ್ತು ಅಪರಾಧಗಳು ಚರ್ಚಿಸಲ್ಪಡುವ ಸಾಧ್ಯತೆಯಿದೆ.

"ಇಂದು ನಾಲ್ಕು ಮಸೂದೆಗಳನ್ನು ಪ್ರಸ್ತಾಪಿಸಲಾಯಿತು – ಕರ್ನಾಟಕ ಜನಸಂದಣಿ ನಿಯಂತ್ರಣ, ಕಾರ್ಯಕ್ರಮಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು ಮತ್ತು ಸಾಮೂಹಿಕ ಸಭೆ ನಡೆಯುವ ಸ್ಥಳ ಮಸೂದೆ, 2025; ಕರ್ನಾಟಕ ರೋಹಿತ್ ವೇಮುಲಾ ಮಸೂದೆ, 2025; ಕರ್ನಾಟಕ ತಪ್ಪು ಮಾಹಿತಿ, ನಕಲಿ ಸುದ್ದಿ ನಿಷೇಧ ಮಸೂದೆ, 2025; ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆಗಟ್ಟುವಿಕೆ ಮಸೂದೆ, 2025," ಎಂದು ಪಾಟೀಲ್ ಸಂಪುಟ ಸಭೆಯ ನಂತರ ಸುದ್ದಿಗಾರ–ರಿಗೆ ತಿಳಿಸಿದರು. "ಈ ಮಸೂದೆಗಳನ್ನು ಇಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಕೆಲವು ಮಸೂದೆಗಳ ಕುರಿತು ವಿವರವಾದ ಚರ್ಚೆಯ ಅಗತ್ಯವಿದೆ ಎಂದು ನಾನು ಉಲ್ಲೇಖಿಸಿದ್ದೇನೆ. ಮುಂದಿನ ಸಂಪುಟ ಸಭೆಗೂ ಮುನ್ನ ಸಂಬಂಧಪಟ್ಟ ಸಚಿವರು ಸಭೆ ಸೇರಿ ಚರ್ಚಿಸಿ ಮಸೂದೆಗಳನ್ನು ಸಂಪುಟದ ಮುಂದೆ ತರಬೇಕೆಂದು ನಿರ್ಧ–ರಿಸಲಾಗಿದೆ" ಎಂದು ಅವರು ಹೇಳಿದರು.

ಸಾಚಾರ್ ಕಮಿಟಿ ವರದಿಯನ್ನೂ ಕೂಡ ಈಗ ಕೇಂದ್ರ ಪರಿಗಣಿಸುತ್ತಿದೆ. ಕೇಂದ್ರದ ಸೂಚನೆಗಳನ್ನು ಗಮನಿಸಿ ಸಾಮಾಜಿ–ಕ ನ್ಯಾಯದ ಪಾಲನೆ ಮಾಡುತ್ತಿದ್ದೇವೆ. ನಿಯಮಗಳಿಗೆ ಕ್ಯಾಬಿನೆಟ್ ಅನುಮೋದನೆ ಸಾಕು. ಇದು ಎಲ್ಲ ಅಲ್ಪಸಂಖ್ಯಾತರಿಗೂ ಅನ್ವಯವಾಗುತ್ತದೆ. ಮುಸ್ಲಿಂ, ಜೈನರು, ಕ್ರಿಶ್ಚಿಯನ್ ಎಲ್ಲರೂ ಕೂಡ ಇದರಲ್ಲಿ ಒಳಗೊಳ್ಳುತ್ತಾರೆ. ಇದಕ್ಕೆ ಬೇಕಾದ ಹಲವು ಅಧ್ಯಯನ ವರದಿಗಳೂ ಕೂಡ ಇವೆ. ಬಡವರಿಗೆ ಮನೆ ಮಾಡಿಕೊಡುವುದರಲ್ಲಿ ರಾಜಕೀಯ ವಾಸನೆ ಹುಡುಕುವವರಿಗೆ ನಾವು ಉತ್ತರ ಕೊಡಲ್ಲ. ವಸತಿ ಹೀನ–ರಿಗೆ ಹೆಚ್ಚಿನ ಸೌಲಭ್ಯಗಳನ್ನು ಕೊಡಬೇಕು ಎಂಬುದು ಸರ್ಕಾರದ ಉದ್ದೇಶ ಎಂದು ಎಂದು ಹೇಳಿದರು.

ಇನ್ನು ಕಳೆದ ಜೂನ್ 4 ರಂದು ಸಂಜೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ 11 ಜನ ಸಾವನ್ನಪ್ಪಿದ ನಂತರ ಜನಸಂದಣಿ ನಿಯಂತ್ರಣ ಮತ್ತು ನಿರ್ವಹಣೆಗೆ ಸಂಬಂಧಿಸಿದ ಮಸೂದೆ ಮಂಡಿಸುವ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ ಎಂದು ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ.

"ಇಂದು ನಾಲ್ಕು ಮಸೂದೆಗಳನ್ನು ಪ್ರಸ್ತಾಪಿಸಲಾಯಿತು – ಕರ್ನಾಟಕ ಜನಸಂದಣಿ ನಿಯಂತ್ರಣ, ಕಾರ್ಯಕ್ರಮಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು ಮತ್ತು ಸಾಮೂಹಿಕ ಸಭೆ ನಡೆಯುವ ಸ್ಥಳ ಮಸೂದೆ, 2025; ಕರ್ನಾಟಕ ರೋಹಿತ್ ವೇಮುಲಾ ಮಸೂದೆ, 2025; ಕರ್ನಾಟಕ ತಪ್ಪು ಮಾಹಿತಿ, ನಕಲಿ ಸುದ್ದಿ ನಿಷೇಧ ಮಸೂದೆ, 2025; ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆಗಟ್ಟುವಿಕೆ ಮಸೂದೆ, 2025" ಎಂದು ಎಚ್ ಕೆ ಪಾಟೀಲ್ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

"ಈ ಮಸೂದೆಗಳನ್ನು ಇಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಕೆಲವು ಮಸೂದೆಗಳ ಕುರಿತು ವಿವರವಾದ ಚರ್ಚೆಯ ಅಗತ್ಯವಿದೆ ಎಂದು ನಾನು ಉಲ್ಲೇಖಿಸಿದ್ದೇನೆ. ಮುಂದಿನ ಸಂಪುಟ ಸಭೆಗೂ ಮುನ್ನ ಸಂಬಂಧಪಟ್ಟ ಸಚಿವರು ಸಭೆ ಸೇರಿ ಚರ್ಚಿಸಿ ಮಸೂದೆಗಳನ್ನು ಸಂಪುಟದ ಮುಂದೆ ತರಬೇಕೆಂದು ನಿರ್ಧರಿಸಲಾಗಿದೆ" ಎಂದು ಅವರು ಹೇಳಿದರು.

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ಆಧ–ಾರಿತ ತಾರತಮ್ಯವನ್ನು ಎದುರಿಸುವ ವಿದ್ಯಾರ್ಥಿಗಳಿಗೆ 1 ಲಕ್ಷ ರೂ.ವರೆಗೆ ಪರಿಹಾರ ಮತ್ತು ತಪ್ಪಿತಸ್ಥರಿಗೆ ಒಂದು ವರ್ಷ ಜೈಲು ಶಿಕ್ಷೆ ಹಾಗೂ 10,000 ರೂ. ದಂಡ ವಿಧಿಸಲು ರೋಹಿತ್ ವೇಮುಲಾ ಮಸೂದೆಯಲ್ಲಿ ಪ್ರಸ್ತಾಪಿಸಲಾಗಿದೆ ಎಂದರು.

ಶಿಕ್ಷಣ ವ್ಯವಸ್ಥೆಯಲ್ಲಿ ಯಾರೂ ಜಾತಿ ಆಧಾರಿತ ತಾರತಮ್ಯವನ್ನು ಎದುರಿಸದಂತೆ ನೋಡಿಕೊಳ್ಳಲು "ರೋಹಿತ್ ವೇಮುಲಾ ಕಾಯ್ದೆ"ಯನ್ನು ಜಾರಿಗೆ ತರುವಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಳೆದ ಏಪ್ರಿಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು.

## ಬೃಹತ್ ಸಭೆ- ಸಮಾರಂಭಗಳಲ್ಲಿ ಜನಸಂದಣಿ ನಿಯಂತ್ರಣಕ್ಕೆ ವಿಧೇಯಕ : ಸಂಪುಟದಲ್ಲಿ ಚರ್ಚೆ



ಬೆಂಗಳೂರು: ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ 11 ಮಂದಿ ಮೃತಪಟ್ಟ ದುರಂತದ ಬೆನ್ನಲ್ಲೆ ಎಚ್ಚೆತ್ತುಕೊಂಡಿರುವ ರಾಜ್ಯ ಸರಕಾರವು, ಬೃಹತ್ ಸಭೆ, ಸಮಾರಂಭಗಳು ನಡೆಯುವ ಸ್ಥಳಗಳಲ್ಲಿ ಜನಸಂದಣಿ ನಿಯಂತ್ರಣ ಮಾಡುವ ಸಂಬಂಧ ಹೊಸ ಕಾನೂನು ತರಲು ಮುಂದಾಗಿದೆ.

ಈ ಸಂಬಂಧ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ 'ಕರ್ನಾಟಕ ಬೃಹತ್ ಸಭೆ, ಸಮಾರಂಭಗಳ ಸ್ಥಳಗಳಲ್ಲಿ ಜನಸಂದಣಿ ನಿಯಂತ್ರಣ ವಿಧೇಯಕ–2025' ಅನ್ನು ಮಂಡಿಸಿ ಔಪಚಾರಿಕ ಚರ್ಚೆ ನಡೆಸಲಾಗಿದೆ. ಅಲ್ಲದೇ, ಮುಂದಿನ ಸಚಿವ ಸಂಪುಟ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿ ವಿಧೇಯಕಕ್ಕೆ ಅನುಮೋದನೆ ಪಡೆದುಕೊಳ್ಳಲು ಯೋಜಿಸಲಾಗಿದೆ.

ವಿಧೇಯಕದಲ್ಲಿ ಏನಿದೆ?: ಪ್ರಮುಖವಾಗಿ ಕ್ರೀಡಾಕೂಟಗಳು, ರಾಜಕೀಯ ರ್ಯಾಲಿಗಳು, ಸರ್ಕಸ್ ಸೇರಿದಂತೆ ವಾಣಿಜ್ಯ ಉದ್ದೇಶದಿಂದ ಆಯೋಜಿಸಲಾಗುವು ಕಾರ್ಯಕ್ರಮಗಳಿಗೆ ಬಿಗಿ ನಿಯಮಗಳನ್ನು ಜಾರಿಗೆ ತರಲು ಸರಕಾರ ಮುಂದಾಗಿದೆ. ಕಾರ್ಯಕ್ರಮದ ಆಯೋಜಕರು ಕಾರ್ಯಕ್ರಮ ಆರಂಭಕ್ಕೂ ಮುನ್ನ ಅಥವಾ ನಡೆಯುವಾಗ ಜನರನ್ನು ನಿಯಂತ್ರಿಸುವಲ್ಲಿ ವಿಫಲರಾದಲ್ಲಿ ಅವರಿಗೆ ಮೂರು ವರ್ಷದ ವರೆಗೆ ಜೈಲು ಶಿಕ್ಷೆ ಹಾಗೂ ಐದು ಲಕ್ಷ ರೂ. ಗಳವರೆಗೆ ದಂಡ ವಿಧಿಸಲು ವಿಧೇಯಕದಲ್ಲಿ ಪ್ರಸ್ತಾವಿಸಲಾಗಿದೆ ಎಂದು ತಿಳಿದು ಬಂದಿದೆ.

ಆಯೋಜಕರು ಕಾರ್ಯಕ್ರಮ ನಡೆಯುವ ಸ್ಥಳ ಯಾವ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿದೆಯೋ ಅಲ್ಲಿ ಅರ್ಜಿ ಹಾಕಿ ಅನುಮತಿ ಪಡೆಯಬೇಕು. ಒಂದು ವೇಳೆ ಕಾರ್ಯಕ್ರಮಗಳಲ್ಲಿ ಯಾವುದಾದರೂ ಅಹಿತಕರ ಘಟನೆ ನಡೆದರೆ, ಸಾವು–ನೋವು ಸಂಭವಿಸಿದರೆ ಅದಕ್ಕೆ ಆ ಕಾರ್ಯಕ್ರಮದ ಆಯೋಜಕರನ್ನೆ ಜವಾಬ್ದಾರರನ್ನಾಗಿಸಲು ಉದ್ದೇಶಿಸಲಾಗಿದೆ.

ಅಷ್ಟೇ ಅಲ್ಲ, ಗಾಯಾಳುಗಳು, ಮೃತರ ಕುಟುಂಬಗಳಿಗೆ ಪರಿಹಾರ ನೀಡದಿದ್ದರೆ ಆಯೋಜಕರ ಆಸ್ತಿ ಹರಾಜು ಮೂಲಕ ಪರಿಹಾರ ವಸೂಲು ಮಾಡಲು ಉದ್ದೇಶಿಸಲಾಗಿದೆ ಎಂದು ಹೇಳಲಾಗಿದೆ.

ಆದರೆ, ಜಾತ್ರೆ, ರಥೋತ್ಸವ, ಪಲ್ಲಕ್ಕಿ ಉತ್ಸವ, ತೆಪ್ಪದ ತೇರು, ಉರೂಸ್ ಅಥವಾ ಯಾವುದೇ ಧರ್ಮ, ಜಾತಿ ಅಥವಾ ಪಂಥಕ್ಕೆ ಸಂಬಂಧಿಸಿದ ಧಾರ್ಮಿಕ ಕಾರ್ಯಕ್ರಮಗಳನ್ನು ಈ ಕಾನೂನಿನ ವ್ಯಾಪ್ತಿಯಿಂದ ಹೊರಗೆ ಇರಿಸಲಾಗಿದೆ ಎಂದು ತಿಳಿದು ಬಂದಿದೆ.

***

## 'ಕಾರ್ಮಿಕರ ಕೆಲಸದ ಅವಧಿ ಹೆಚ್ಚಳ ಪ್ರಸ್ತಾವ' ಇನ್ನೂ ಚರ್ಚೆಯ ಹಂತದಲ್ಲಿದೆ : ಸಚಿವ ಸಂತೋಷ್ ಲಾಡ್



ಬೆಂಗಳೂರು: ಕಾರ್ಮಿಕರ ಕೆಲಸ ಅವಧಿಯನ್ನು 8ಗಂಟೆಯಿಂದ 10 ಗಂಟೆಗೆ ಹೆಚ್ಚಳ ಮಾಡುವ ಪ್ರಸ್ತಾವ ಇನ್ನೂ ಚರ್ಚೆಯ ಹಂತದಲ್ಲಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಇಂದಿಲ್ಲಿ ಸ್ಪಷ್ಟನೆ ನೀಡಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆಗೂ ಮುನ್ನ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಕಾರ್ಮಿಕ ವರ್ಗದ ಹಿತರಕ್ಷಣೆಗೆ ನಮ್ಮ ಆದ್ಯತೆ. ಯಾವುದೇ ಸಂದರ್ಭದಲ್ಲಿಯೂ ಕಾರ್ಮಿಕ–ರಿಗೆ ಅನಾನುಕೂಲ ಆಗುವಂತಹ ಯಾವುದೇ ತೀರ್ಮಾನಗಳನ್ನು ಸರಕಾರ ಕೈಗೊಳ್ಳುವುದಿಲ್ಲ ಎಂದು ವಿವರಣೆ ನೀಡಿದರು.

ಖಾಸಗಿ ವಲಯದ ಕಾರ್ಮಿಕರ ಕೆಲಸದ ಅವಧಿಯನ್ನು 8ರಿಂದ 10 ಗಂಟೆಗೆ ಹೆಚ್ಚಳದ ಕುರಿತು ಕೇಂದ್ರ ಸರಕಾರದ ಪ್ರಸ್ತಾವ ಚರ್ಚೆಯ ಹಂತದಲ್ಲಿದೆ. ಈ ಬಗ್ಗೆ ಕಾರ್ಮಿಕ ಸಂಘಟನೆಗಳ ಮುಖಂಡರು, ಕೈಗಾರಿಕೆಗಳ ಪ್ರತಿನಿಧಿಗಳ ಜತೆಗೆ ಚರ್ಚಿಸಿದ ಬಳಿಕ ಸರಕಾರದ ಹಂತದಲ್ಲಿ ಸೂಕ್ತ ತೀರ್ಮಾನ ಮಾಡಲಾಗುವುದು ಎಂದು ಸಂತೋಷ್ ಲಾಡ್ ತಿಳಿಸಿದರು.

# ಕೃಷಿ ಹೊಂಡ ದುರ್ಘಟನೆ ತಡೆಗೆ ಕ್ರಮಕೈಗೊಳ್ಳಿ: ಜಿಪಂ ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ರೈತರು ನೀರಾವರಿ ಸೌಲಭ್ಯಕ್ಕಾಗಿ ನಿರ್ಮಿಸಕೊಂಡಿರುವ ಜಿಲ್ಲೆಯಲ್ಲಿ ಕೃಷಿ ಹೊಂಡಗಳಲ್ಲಿ ಮಕ್ಕಳು ಬಿದ್ದು ಸಾವನ್ನಪ್ಪಿರುತ್ತಿರುವ ಘಟನೆಗಳನ್ನು ತಡೆಗಟ್ಟುನ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ನಗರದ ಜಿಪಂ ಸಭಾಂಗಣದಲ್ಲಿ ಬುಧವಾರ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕೃಷಿ ಹೊಂಡದಲ್ಲಿ ಮಕ್ಕಳು ಸಾವನ್ನಪ್ಪಿರುವ ಘಟನೆಗಳನ್ನು ತಡೆಯುವ ನಿಟ್ಟಿನಲ್ಲಿ ರೈತ ಬಾಂದವರು ತಂತಿ ಬೇಲಿ ನಿರ್ಮಾಣ ಮಾಡುವುದು. ಕೃಷಿ ಹೊಂಡಗಳ ಮುಂದೆ ಅಪಾಯ ಮುನ್ಸೂಚನೆ ಕುರಿತು ನಾಮಫಲಕ ಅಳವಡಿಸುವುದು. ಜತೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛ ವಾಹಿನಿಯ ಮೂಲಕ ಗ್ರಾಮೀಣ ಭಾಗದಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿ ಗ್ರಾಮ ಪಂಚಾಯತಿಯ ಮುಂದೆ ಈ ವಿಷಯದ ಕುರಿತಾಗಿ ಬ್ಯಾನರ್ ಪ್ರದರ್ಶಿಸುವುದು, ಕೃಷಿ ಹೊಂಡದ ಒಳಗೆ ಏರ್ ತುಂಬಿದ ಟ್ಯೂಬ್ ಹಾಕುವುದು, ಹಗ್ಗಗಳನ್ನು ಹೊಂಡದಲ್ಲಿ ಬಿಡುವುದು ಸೇರಿದಂತೆ, ಕೃಷಿ, ತೋಟಗಾರಿಕೆ ಹಾಗೂ ಆರ್.ಡಿ.ಪಿ.ಆರ್. ಇಲಾಖೆಯ ವಿವಿಧ ಯೋಜನೆಗಳಿಂದ ಸಹಾಯಧನ ಪಡೆದು ಕೃಷಿ ಹೊಂಡ ನಿರ್ಮಾಣ ಮಾಡಿದ್ದಲ್ಲಿ ಸಂಬಂಧಿಸಿದ ಇಲಾಖೆಯವರು ಸದರಿ ವಿಷಯದ ಕು–ರಿತಾಗಿ ರೈತ ಸಮೂದಾಯದಲ್ಲಿ ಹೆಚ್ಚಿನ ಪ್ರಚಾರ ನೀಡುವುದು ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಮನರೇಗಾ ಯೋಜನೆಯಡಿ ಗ್ರಾಮೀಣ ಜನರಿಗೆ ನಿರಂತರ ಕೆಲಸ ನೀಡುವ ಮೂಲಕ ಮಾನವ ದಿನಗಳ ಸೃಜನೆ ಮಾಡಿ ಕೂಲಿಕಾರ–ರಿಗೆ ಕೂಲಿ ಪಾವತಿಯಾಗುವಂತೆ ಸರಿಯಾಗಿ ಮೇಲ್ವಿಚಾರಣೆ ಮಾಡುವುದು, ಜಿಲ್ಲೆಯ ಆದ–ƒತಾ ಕಾಮಗಾರಿಗಳಾದ ಶಾಲಾ ಅಭಿವೃದ್ಧಿ, ಸ್ವಸಹಾಯ ಸಂಘಗಳ ಶೆಡ್ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಂಡು ಜೊತೆಗೆ ಯೋಜನೆಯಡಿ ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ವೆಚ್ಚ ಭರಿಸಲು ತಿಳಿಸಿದರು. ಅಲ್ಲದೇ ಸಾಮಾಜಿಕ ಪರಿಶೋದನೆಯಡಿ ಬಾಕಿ



ಇರುವ ಪ್ರಕರಣಗಳನ್ನು ಒಂದು ವಾರದೊಳಗಾಗಿ ತಿರುವಳಿಗೊಳಿಸುವಂತೆ ತಾಲ್ಲೂಕಿನ ಇಒ ಗಳಿಗೆ ತಿಳಿಸಿದರು. ನಲ್ವತ್ತೈದು ದಿನಗಳಲ್ಲಿ 11099 ಕಾಮಗಾರಿಗಳನ್ನು ಪೂರ್ಣಗೊಳಿಸಿದ ಪ್ರಗತಿ ಬಗ್ಗೆ ಪ್ರಶಂಸೆ ವ್ಯಕ್ತ ಪಡಿಸಿ ಇದೇ ರೀತಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ತಿಳಿಸಿದರು. ಮಳೆಗಾಲ ಪ್ರಾರಂಭವಾದ್ದರಿಂದ ಜಿಲ್ಲೆಯಲ್ಲಿ ಯಾವುದೇ ಗ್ರಾಮಗಳಲ್ಲಿ ಕಲುಷಿತ ನೀರು ಸರಬರಾಜು ಆಗದಂತೆ ಕಟ್ಟುನಿಟ್ಟಾಗಿ ನೋಡಿಕೊಳ್ಳಲು ಎ.ಇ. & ಜೆ.ಇ ಹಾಗೂ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಸ್ವಚ್ಛಭಾರತ ಮಿಷನ್ ಗೆ ಸಂಬಂಧಿಸಿದ ವೈಯಕ್ತಿಕ ಗೃಹ ಶೌಚಾಲಯಗಳ ನಿರ್ಮಾಣ–ಕ್ಕೆ ಬಾಕಿ ಇರುವ ಕಾರ್ಯಾದೇಶಗಳನ್ನು ತ್ವ–ರಿತವಾಗಿ ಸಂಬಂಧಿಸಿದ ಫಲಾನುಭವಿಗಳಿಗೆ ವಿತರಿಸುವುದು ಮತ್ತು ಪೂರ್ಣಗೊಂಡ ಶೌಚಾಲಯಗಳ ಜಿಯೊ ಟ್ಯಾಗ್ ಮಾಡುವುದು, ಸೆಲ್ಪ ಫಂಡೆಡ್ ಫಲಾನುಭವಿಗಳ ಪಟ್ಟಿಯನ್ನು ಪರಿಶೀಲಿಸಿ ಐ.ಎಮ್.ಐ.ಎಸ್. ನಲ್ಲಿ ಇಂದಿಕ–ರಿಸುವುದು. ಜೊತೆಗೆ ಈಗಾಗಲೆ ವೈಯಕ್ತಿಕ ಗೃಹ ಶೌಚಲಯಕ್ಕೆ ಬಿಡುಗಡೆಯಾದ ಅನುದಾನವನ್ನು ಎರಡು ದಿನದಲ್ಲಿ ವೆಚ್ಚ ಭ–ರಿಸುವುದು. ಪ್ರಗತಿಯಲ್ಲಿರುವ ಸಮುದಾಯ ಶೌಚಾಲಯಗಳನ್ನು ಒಂದು ವಾರದೊಳಗೆ ಪೂರ್ಣಗೊಳಿಸಿ ಛಾಯಾಚಿತ್ರದೊಂದಿಗೆ ವರದಿ ನೀಡಲು ಸೂಚಿಸಿದರು.

ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಾದ ಬಸವರಾಜ ಹೆಗ್ಗನಾಯಕ, ಬಸವರಾಜ ಅಡವಿಮಠ, ಯೋಜನಾ ನಿರ್ದೇಶಕರಾದ ರವಿ ಬಂಗಾರೆಪ್ಪನವರ, ಮುಖ್ಯ ಯೋಜನಾಧಿಕಾರಿ ಗಂಗಾಧರ ದಿವಟರ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಕೊಳೆಕರ, ತೋಟಗಾರಿಕೆ ಉಪ ನಿರ್ದೇಶಕರಾದ ಮಹಾಂತೇಶ ಮುರಗೋಡ, ಎಲ್ಲ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸರಕಾರಿ ನೌಕರರಿಗೆ ನಗದು ರಹಿತ ಆರೋಗ್ಯ ಯೋಜನೆ'ಗೆ ಸಚಿವ ಸಂಪುಟ ಸಭೆ ಅನುಮೋದನೆ : ಎಚ್.ಕೆ.ಪಾಟೀಲ್

ಬೆಂಗಳೂರು : ಸರಕಾರಿ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಮತ್ತು ಗೌರವಧನದ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಸುಮಾರು 3 ಲಕ್ಷ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ವಾರ್ಷಿಕವಾಗಿ 5 ಲಕ್ಷ ರೂ.ಗಳವರೆಗೆ ನಗದು ರಹಿತ ಆರೋಗ್ಯ ಯೋಜನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಯೋಜನೆಯಡಿ ಸಿಬ್ಬಂದಿಗಳಿಂದ ಮಾಸಿಕ 100 ರೂ.ಗಳ ವಂತಿಗೆ ಸಂಗ್ರಹಿಸಲಾಗುವುದು. ಹಾಗೂ ಉಳಿಕೆ ಹಣವನ್ನು ರಾಜ್ಯ ಸರಕಾರದಿಂದ ಭರಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಅಪ್ಸರಕೊಂಡ–ಮುಗಲಿ ಕಡಲ ವನ್ಯ ಜೀವಿಧಾಮ: ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ಸಮುದ್ರ ತೀರದ 6 ಕಿ.ಮೀ ವರೆಗಿನ ಪ್ರದೇಶ ಹಾಗೂ ಅರಣ್ಯ ಪ್ರದೇಶವನ್ನೊಳಗೊಂಡಂತೆ ಒಟ್ಟು 5959.322 ಹೆಕ್ಟೇರ್ ಪ್ರದೇಶವನ್ನು ಅಪ್ಸರಕೊಂಡ–ಮುಗಲಿ ಕಡಲ ವನ್ಯ ಜೀವಿಧಾಮ ಎಂದು ಘೋಷಿಸಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಅವರು ತಿಳಿಸಿದರು.

ಕಡಲ ವನ್ಯಜೀವಿ ಧಾಮದಲ್ಲಿ ಸಾಂಪ್ರದಾಯಿಕ ಮೀನುಗಾರಿಕೆ ಹಾಗೂ ಮೀನುಗಾರರ ದೋಣಿಗಳ ಪ್ರವೇಶಕ್ಕೆ ನಿರ್ಬಂಧವಿಲ್ಲ. ಅಲ್ಲಿನ ಜನರ ಅಸ್ತಿತ್ವದಲ್ಲಿರುವ ಹಕ್ಕುಗಳಿಗೆ ಯಾವುದೇ ನಿರ್ಬಂಧವಿಲ್ಲ. ಹೊನ್ನಾವರದ 8.21 ಕಿ.ಮೀ ಸಮುದ್ರ ತೀರದ ಪೈಕಿ ಆರು ಕಿ.ಮೀ ಸಮುದ್ರದವರೆಗಿನ ಪ್ರದೇಶ ಹಾಗೂ 835 ಹೆಕ್ಟೇರ್ ಅರಣ್ಯ ಪ್ರದೇಶವನ್ನು ಒಳಗೊಂಡಂತೆ ಅಪ್ಸರಕೊಂಡ ಮುಗಲಿ ಕಡಲ ವನ್ಯ ಜೀವಿಧಾಮ ಎಂದು ಘೋಷಿಸಲಾಗಿದೆ. ನೀರಿನ ಜೀವಿಗಳ ರಕ್ಷಣೆಯ ಪ್ರಮುಖ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಎಚ್.ಕೆ.ಪಾಟೀಲ್ ತಿಳಿಸಿದರು.

ಇತರ ನಿರ್ಣಯಗಳು: ಕರ್ನಾಟಕ ನೋಂದಣಿ ಸಂಘಗಳ ಕಾಯ್ದೆ 1960ರ ಪ್ರಕಾರ ಸಂಘಗಳಾಗಿ ನೋಂದಾಯಿಸಲಾದ ಆರೋಗ್ಯ ರಕ್ಷಾ ಸಮಿತಿಗಳು (ಎ.ಆರ್.ಎಸ್) ಆಡಳಿತ/ಸಾಮಾನ್ಯ ಸಭೆಯ ಸದಸ್ಯರನ್ನು ಆರೋಗ್ಯ ಸಚಿವರು ನಾಮನಿರ್ದೇಶನ ಮಾಡಲು ಅಧಿಕಾರ ಕಲ್ಪಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಪಾಶ್ವವಾಯು ಮತ್ತು ತಲೆಗೆ ತೀವ್ರ ಪೆಟ್ಟಾದ



ರೋಗಿಗಳ ಆರೈಕೆಗಾಗಿ ಹಬ್ ಮತ್ತು ಸ್ಪೋಕ್ ಮಾದರಿಯಲ್ಲಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮೊದಲ ಹಂತದಲ್ಲಿ ಸ್ಪೋಕ್ ಆಗಿ ಕಾರ್ಯನಿರ್ವಹಿಸುವ ಯೋಜನೆಯ 12.87 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ಬಸಾಪೂರ ಗ್ರಾಮದ ಹೆಸರನ್ನು 'ಗೇರುಗುಟ್ಟ ಬಸಾಪೂರ' ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ರಾಜ್ಯ ವಿಪತ್ತು ಉಪಶಮನ ನಿಧಿಯಡಿ ಅನುಮೋದಿಸಿರುವ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲೂಕಿನ ಶಿಲಹಳ್ಳಿ ಗ್ರಾಮದ ಬಳಿ ಕೃಷ್ಣಾ ನದಿಯ ಉಪನದಿಗೆ ಅಡ್ಡಲಾಗಿ ಹೈಲೆವೆಲ್ ಮೈನರ್ ಸೇತುವೆ ನಿರ್ಮಾಣ ಹಾಗೂ ಹುಬ್ಬಳ್ಳಿ ನಗರದ ರಾಜನಾಲಾಗೆ ತಡೆಗೋಡೆ ನಿರ್ಮಾಣ ಮಾಡುವ ಒಟ್ಟು 23.51 ಕೋಟಿ ರೂ.ಗಳ ಅಂದಾಜು ಮೊತ್ತದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ರಾಯಚೂರು ಜಿಲ್ಲಾ ಕುರುಬರ ಸಂಘಕ್ಕೆ ಕನಕದಾಸ ಸಾರ್ವಜನಿಕ ಗ್ರಂಥಾಲಯ ನಿರ್ಮಿಸಲು ರಾಯಚೂರು ನಗರದ ಸಿಯತಲಾಬ್ ಬಡಾವಣೆಯಲ್ಲಿ ರಾಯಚೂರು ಮಹಾನಗರ ಪಾಲಿಕೆಗೆ ಸೇರಿದ 1200 ಚದರ ಅಡಿ ಅಳತೆಯ ಖಾಲಿ ನಿವೇಶನವನ್ನು ಶೇ.50ರಷ್ಟು ರಿಯಾಯಿತಿ ದರದಲ್ಲಿ ಮಂಜೂರು ಮಾಡಲು ಒಪ್ಪಿಗೆ ನೀಡಲಾಗಿದೆ.

ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲೂಕಿನ ಆರ್ಯಭೋಗಪುರ ಗ್ರಾಮದ ಬಳಿ ಮಸ್ಕಿನಾಲಾದಿಂದ ಕನಕನಾಲಾ ಕಣಿವೆಗೆ ಪ್ರವಾಹದ ನೀರನ್ನು ತಿರುಗಿಸಲು ಮಸ್ಕಿ ನಾಲೆಯ ಮೇಲ್ಭಾಗದಲ್ಲಿ ಬ್ರಿಡ್ಜ್?ಕಂ ಬ್ಯಾರೇಜ್ ನಿರ್ಮಿಸಲು ಮತ್ತು ಕನಕನಾಲಾ ಆಧ–ುನೀಕರಣ ಯೋಜನೆಯ 134.56 ಕೋಟಿ ರೂ.ಗಳ ಅಂದಾಜು ಮೊತ್ತದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸಿಂಧನೂರು ತಾಲೂಕಿನ ಚನ್ನಬಸವೇಶ್ವರ (ಒಳಬಳ್ಳಾರಿ) ಏತ ನೀರಾವರಿ ಯೋಜನೆಯ ಜಾಕ್ ವೆಲ್ ಹತ್ತಿರ ತುಂಗಭದ್ರಾ ನದಿಗೆ ಅಡ್ಡಲಾಗಿ ವಿಯರ್ ನಿರ್ಮಾಣ ಮಾಡುವ 43.10 ಕೋಟಿ ರೂ.ಗಳ ಅಂದಾಜು ಮೊತ್ತದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ರಾಜ್ಯದ ದುರ್ಗಮ ಪ್ರದೇಶದ ಸಂಪರ್ಕ ರಹಿತ ಪ್ರದೇಶಗಳಿಗೆ ಎಂ.ಎಚ್.ಯು ಅಡಿಯಲ್ಲಿ ಸಂಚಾರಿ ಆರೋಗ್ಯ ಘಟಕಗಳ ಮೂಲಕ ಪ್ರಾಥಮಿಕ ಆರೋಗ್ಯ ಆರೈಕೆ ಸೇವೆಗಳನ್ನು 15.97 ಕೋಟಿ ರೂ.ಗಳ ಅಂ–ದಾಜು ವೆಚ್ಚದಲ್ಲಿ ಅನುಷ್ಠಾನ ಮಾಡಲು ಸಚಿವ ಸಂಘುಟ ನಿರ್ಧರಿಸಿದೆ.

ಕೆ.ಎ.ಟಿ ವ್ಯವಸ್ಥೆಯ ಬಗ್ಗೆ ಸರಕಾರದ ಚಿಂತನೆ: ಕರ್ನಾಟಕ ಆಡಳಿತ ನ್ಯಾಯಾಧೀಕರಣ(ಕೆ.ಎ.ಟಿ) ಬಗ್ಗೆ ಸಾಕಷ್ಟು ಚರ್ಚೆ, ಆಕ್ರೋಶ ವ್ಯಕ್ತವಾಗುತ್ತಿದೆ. ಇದರ ವ್ಯವಸ್ಥೆ ಬಗ್ಗೆ ರಾಜ್ಯ ಸರಕಾರ ಚಿಂತನೆ ಮಾಡುತ್ತಿದೆ ಎಂದು ಎಚ್.ಕೆ.ಪಾಟೀಲ್ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದರು.

**ಅನುಭವ ಮಂಟಪ ನಿರ್ಮಾಣ: ಪರಿಷ್ಕೃತ ಅಂದಾಜಿಗೆ ಅನುಮೋದನೆ**

ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ನಿರ್ಮಾಣಗೊಳ್ಳುತ್ತಿರುವ ನೂತನ ಅನುಭವ ಮಂಟಪ ನಿರ್ಮಾಣ ಕಾಮಗಾರಿಯ 742 ಕೋಟಿ ರೂ.ಗಳ ಪರಿಷ್ಕೃತ ಅಂದಾ–ಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ. ಇದಕ್ಕೂ ಮೊದಲು 612 ಕೋಟಿ ರೂ. ನಿರ್ಮಾಣ ವೆಚ್ಚವಿತ್ತು. ಒಂದು ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸಲು ಪ್ರಯತ್ನ ಮಾಡಲಾಗುತ್ತಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಜು.17ಕ್ಕೆ ನಂದಿ ಬೆಟ್ಟದಲ್ಲಿ ಸಂಪುಟ ಸಭೆ: ನಂದಿ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ಜು.16 ಅಥವಾ 17 ರಂದು ನಿಗದಿಯಾಗಬಹುದು. ಆ ಭಾಗದ ಕೆಲವು ಇಲಾಖೆಗಳಿಂದ ಪ್ರಸ್ತಾವನೆಗಳು ತಲುಪಿರಲಿಲ್ಲ. ಆ ಪ್ರದೇಶಕ್ಕೆ ಪರಿಣಾಮಕಾ–ರಿಯಾಗಿ ಕೆಲಸಗಳು ಆಗಬೇಕು ಎಂಬ ಉದ್ದೇಶದಿಂದ ಮತ್ತು ಕೆಲವು ಸಚಿವರ ಕೋ–ರಿಕೆಯ ಮೇರೆಗೆ ಇಂದು ನಂದಿ ಬೆಟ್ಟದಲ್ಲಿ ನಿಗದಿಯಾಗಿದ್ದ ಸಚಿವ ಸಂಪುಟ ಸಭೆಯನ್ನು ಮುಂದೂಡಲಾಯಿತು ಎಂದು ಸುದ್ದಿಗಾರರ ಪ್ರಶ್ನೆಗೆ ಎಚ್.ಕೆ.ಪಾಟೀಲ್ ಉತ್ತರಿಸಿದರು.

**ವಿಧೇಯಕಗಳ ಬಗ್ಗೆ ಚರ್ಚೆ**: ಕರ್ನಾಟಕ ಬೃಹತ್ ಸಭೆ, ಸಮಾರಂಭಗಳ ಸ್ಥಳಗಳಲ್ಲಿ ಜನಸಂದಣಿ ನಿಯಂತ್ರಣ ವಿಧೇಯಕ –2025, ಕರ್ನಾಟಕ ರೋಹಿತ್ ವೇಮುಲಾ ವಿಧೇಯಕ–2025, ಕರ್ನಾಟಕ ತಪ್ಪು ಮಾಹಿತಿ, ಸುಳ್ಳು ಸುದ್ದಿ ನಿಯಂತ್ರಣ ವಿಧೇಯಕ–2025, ಕರ್ನಾಟಕ ದ್ವೇಷ ಭಾಷಣ ಮತ್ತು ಅಪರಾಧ ನಿಯಂತ್ರಣ ವಿಧೇಯಕ–2025ರ ಬಗ್ಗೆ ಇಂದು ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪ ಮಾಡಲಾಗಿದ್ದು, ಕೆಲವು ಬಿಲ್ಲುಗಳಲ್ಲಿ ವಿವರವಾದ ಚರ್ಚೆಯಾಗಬೇಕೆಂದು ತೀರ್ಮಾನಿಸಿ ಮುಂದಿನ ಸಚಿವ ಸಂಪುಟಕ್ಕೆ ತರಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

# ವಿಶ್ವ ಅಪ್ಪಂದಿರ ದಿನ ಅಪ್ಪ ಬದುಕು ರೂಪಿಸುವ ಶಿಲ್ಪಿ-ಅಶೋಕ ಬಿರಾದಾರ



ವಿಜಯಪುರ: ಅಪ್ಪ ಅಂದರೆ ಕೇವಲ ಜೀವ ಕೊಟ್ಟವನಲ್ಲ. ಬದುಕು ರೂಪಿಸುತ್ತಾ, ಧೈರ್ಯವಾಗಿ ಎಲ್ಲರ ಎದುರು ನಿಲ್ಲಲು ದಾರಿ ತೋರಿದ ಶಿಲ್ಪಿಯಾಗಿದ್ದಾನೆ ಎಂದು ವಿಜಯಪುರದ ಆರ್ಯಭಟ ಕರಿಯರ್ ಅಕಾಡೆಮಿ ಅಧ್ಯಕ್ಷ ಅಶೋಕ ಬಿರಾದಾರ ಹೇಳಿದರು.

ಗುರುವಾರದಂದು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ವಿಶ್ವ ಅಪ್ಪಂದಿರ ದಿನದ ನಿಮಿತ್ತ ಹಮ್ಮಿಕೊಂಡ 'ಅಪ್ಪ–ಬದುಕಿಗೆ ಬೆಳಕು' ಚಿಂತನಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುರಾಣ ಕಾಲದಿಂದಲೂ ತಂದೆ ಮಕ್ಕಳ ಸಂಬಂಧ ಶ್ರೇಷ್ಠ ಎನಿಸಿಕೊಂಡಿದೆ. ತನ್ನ ನೋವ ನುಂಗಿ ಮಕ್ಕಳಿಗೆ ಪ್ರೀತಿ ಧಾರೆ ಎರೆಯುವ ತಂದೆಗೆ ಮಕ್ಕಳ ಭವಿಷ್ಯವೇ ಮುಖ್ಯ ಎಂದು ಹೇಳಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಅಪ್ಪ ಅಂದರೆ ಆಸರೆ, ತ್ಯಾಗ, ಗಾಂಭೀರ್ಯ, ಪ್ರೀತಿ. ಅಪ್ಪ ದೇವರು ಕೊಟ್ಟ ವರ. ತಂದೆ ಜೊತೆಗಿದ್ದರೆ ಸಾಕು ಪ್ರಪಂಚದಲ್ಲಿ ಏನು ಬೇಕಾದರೂ ಸಾಧಿಸುತ್ತೇನೆ ಎಂಬ ವಿಶ್ವಾಸ ಸದಾ ಇರುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಮಾತನಾಡಿ, ಅಪ್ಪ ಅನ್ನೋ ಪದಕ್ಕೆ ಸಾವಿರ ಆನೆಗಳ ಬಲ. ದರ್ಪ–ಕೋಪ– ಶಿಸ್ತು–ಅನುಮಾನ ಇವುಗಳ ಸಮ್ಮಿಲನವೇ ಅಪ್ಪ. ಆತ ಸರ್ವಾಧಿಕಾರಿಯಲ್ಲ. ಬದಲಿಗೆ ಸರಿ ತಪ್ಪುಗಳನ್ನು ತಿದ್ದುವ ಮಾರ್ಗದರ್ಶಕ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಶಂಕರ ಹುಣಶ್ಯಾಳ ಅಧ್ಯಕ್ಷತೆ ವಹಿಸಿದ್ದರು. ಪಾಲಕ ಪ್ರತಿನಿಧಿ ಅಶೋಕ ಗಾಣಿಗೇರ ಮಾತನಾಡಿದರು. ಭೀರಪ್ಪ ಪೂಜಾರಿ, ಕಾರ್ಯದರ್ಶಿ ಸುನಂದಾ ಹುಣಶ್ಯಾಳ ಹಾಗೂ ಶಿಕ್ಷಕರಾದ ರಾಘು ಮೊಗಳ, ಸಚೀನ ಅವಟಿ, ನವೀನ ಬಂಡೆನ್ನವರ, ಜಯಶ್ರೀ ಬಂಗಾರಿ, ಲಕ್ಷ್ಮೀ ಮಸೂತಿ,ರೇಣುಕಾ ಭಜಂತ್ರಿ, ಶ್ರುತಿ ಪೂಜಾರಿ, ಸಿದ್ದು ರತ್ನಾಕರ, ರಾಜಶೇಖರ ಶಿರಶ್ಯಾಡ, ಅಲ್ಲಾಭಕ್ಷ ಇನಾಮದಾರ ಸೇರಿದಂತೆ ನೂರಾರು ಪಾಲಕರು ಮತ್ತು ಮಕ್ಕಳು ಭಾಗವಹಿಸಿದ್ದರು.

# ಕ್ರೀಡಾಕೂಟದ ಪೂರ್ವಭಾವಿ ಸಭೆಯನ್ನು ಉದ್ಘಾಟನೆ



ರಾಯಬಾಗ : ಕಲುಷಿತ ವಾತಾವರಣ ಮಕ್ಕಳಲ್ಲಿ ಕ್ರೀಡಾಭಿರುಚಿ ಕುಸಿತಾಯಿದೆ ಇದರಿಂದ ಕ್ರೀಡಾ ಆಸಕ್ತಿ ಕಡಿಮಾಯುತ್ತಿದೆ ಆದ್ದರಿಂದ ಮಕ್ಕಳಲ್ಲಿ ಪ್ರಾಥಮಿಕ ಹಂತದಿಂದಲೆ ಕ್ರೀಡಾಭಿಮಾನ ಬೇಳೆಯಬೇಕಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎಸ್ ಬಸವರಾಜಪ್ಪಾ ಹೇಳಿದರು.

ರಾಯಬಾಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ನಡೆದ ಪ್ರಸಕ್ತ ಸಾಲಿನ ಇಲಾಖೆ ಕ್ರೀಡಾಕೂಟದ ಪೂರ್ವಭಾವಿ ಸಭೆಯನ್ನು ಉದ್ಘಾಟಿಸಿ ಮಾತನಾಡಿ ನಿರ್ಣಾಯಕರು ತಾರತಮ್ಯವನ್ನು ಮಾಡದೆ ಒಳ್ಳೆಯ ಕ್ರೀಡಾಪಟುಗಳನ್ನು ಆಯ್ಕೆ ಮಾಡಿಬೇಕೆಂದರು.

ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಮಾಹಾವೀರ ಜಿರಗಾಳ ಮಾತನಾಡಿ ಮಗುವಿನ ಸಾಮರ್ಥ್ಯವನ್ನು ಗಮನಿಸಿ ಕ್ರೀಡೆಯಲ್ಲಿ ಆಸಕ್ತಿ ಮೂಡಿಸಬೇಕು. ಶಾಲೆಗೆ ದೈಹಿಕ ಶಿಕ್ಷಕರು ಶಿಸ್ತಿನ ಸಿಪಾಯಿಗಳಿದಂತೆ ಕರ್ತವ್ಯ ಮತ್ತು ಕರ್ತವ್ಯದ ಸಮಯವನ್ನು ಹೊರತು ಪಡಿಸಿಯೂ ಶಾಲೆಯ ಮಕ್ಕಳ ಬಗ್ಗೆ ಕಾಳಜಿ ವಹಿಸಬೇಕೆಂದರು.

ಕೇಂದ್ರ, ವಲಯ ಮಟ್ಟದ ಕ್ರೀಡಾಕೂಟದ ದಿನಾಂಕ ಹಾಗೂ ಸ್ಥಳಗಳನ್ನು ನಿಗದಿ ಮಾಡಲಾಯಿತು. ರಾಜ್ಯಾ ಶಾಲಾ ಶಿಕ್ಷಕರ ಸಂಘದ ತಾಲೂಕಾ ಅಧ್ಯಕ್ಷರಾದ ವ್ಹಿ ಬಿ ಅರಗೆ ದೈಹಿಕ ಶಿಕ್ಷಕರಿಗೆ ಕ್ರೀಡಾಕೂಟದ ನಿಯಮಗಳನ್ನು ಹಾಗೂ ಸಂಘಟನೆಯ ಬಗ್ಗೆ ಹೇಳಿದರು.

ಎಸ್ ಸಿ ಎಸ್ ಟಿ ಸಂಘದ ಪ್ರಧಾನ ಕಾರ್ಯದರ್ಶಿ ಎಮ್ ಸಿ ಐಹೋಳೆ. ಅಶೋಕ ಗಸ್ತಿ. ಎನ್. ಬಿ. ಮಠದಕರ. ತಾಲೂಕಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷರಾದ ಆರ್ ಟಿ ಅರಬಳ್ಳಿ. ಬುರ್ಲಟ್ಟಿ. ಶಿಂಗೆ. ಉಪಸ್ಥಿತಿತರಿದ್ದರು. ಕಾರ್ಯದರ್ಶಿ ಲಕ್ಷ್ಮಣ ಬಂಡಗರ ಕಾರ್ಯಕ್ರಮ ನಿರೂಪಿಸಿದರು. ವ್ಹಿ. ಡಿ ಉಪಾದ್ಯಾಯ ವಂದಿಸಿದರು.



ರಾಯಬಾಗ ಮತಕ್ಷೇತ್ರದ ಕರೋಶಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು ಹಾಗೂ ಬಿಜೆಪಿ ದೂರಿಣರು ಹಾಗೂ ಚಂದರಗಿ ಕ್ರೀಡಾಶಾಲೆಯ ಉಪಾಧ್ಯಕ್ಷರು ಆದ ಮಹೇಶ್ ಬಾತೆ ಅವರ ಹುಟ್ಟುಹಬ್ಬಕ್ಕೆ ಶಾಸಕರಾದ ಡಿಎಂ ಐಹೊಳೆ ಅವರು ಸತ್ಕರಿಸಿ ಸನ್ಮಾನಿಸಿ ಮಾತನಾಡಿ ಇನ್ನೂ ನಿಮ್ಮ ಸೇವೆ ಸಮಾಜಕ್ಕೆ ಹತ್ತು ಸಿಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಚಿಕ್ಕೋಡಿಯ ಪೂಜ್ಯರು ಹಾಗೂ ಮಹೇಶ್ ಬಾತೆ ಅವರ ಅಭಿಮಾನಿಗಳು ಉಪಸ್ಥಿತರಿದ್ದರು

# ನಾರಾಯಣ ಹುಂಡೈ ಮೋಟರ್ಸ್‌ನಲ್ಲಿ ವಿವಿಧ ಹುದ್ದೆಗಳ ಭರ್ತಿಗೆ ನಾಳೆ ನೇರ ಸಂದರ್ಶನ

ವಿಜಯಪುರ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ನಾರಾಯಣ ಹುಂಡೈ ಮೊಟರ್ಸ್ ಪ್ರೈ.ಲಿನಲ್ಲಿ ವಿವಿಧ ಹುದ್ದೆಗಳ ಭರ್ತಿಗಾಗಿ ಜೂ.21 ರಂದು 10 ಗಂಟೆಗೆ ನಗರದ ಹೊರ ವಲಯದ ಎನ್ ಎಚ್ 50, ಇಬ್ರಾಹಿಂಪುರ ರಿಂಗ್ ರೋಡನಲ್ಲಿರುವ ನಾರಾಯಣ ಹುಂಡೈ ಮೊಟರ್ಸ್‌ನಲ್ಲಿ ಸಂದರ್ಶನ ಏರ್ಪಡಿಸಲಾಗಿದೆ.

ಸೇಲ್ಸ್ ಎಕ್ಸಿಕ್ಯೂಟಿವ, ಟೀಮ್ ಲೀಡರ್, ಸಿ.ಆರ್.ಎಂ, ಅಕೌಂಟ್ಸ್, ಟೆಲಿಕಾರ್, ಟೆಕ್ನೀಶಿಯನ್, ಸರ್ವಿಸ್ಸ್ ಅಡವೈಸರ್ ಮತ್ತು ಮೇಕ್ಯಾನಿಕ್ಸ್ ಹುದ್ದೆಗಳಿಗೆ ಸಂದರ್ಶನ ಆಯೋಜಿಸಲಾಗಿದ್ದು, ಐಟಿಐ, ಡಿಪ್ಲೋಮಾ, ಪಿಯುಸಿ ಹಾಗೂ ಯಾವುದೆ ಪದವಿ ಪಡೆದ ಅರ್ಹ ಅಭ್ಯರ್ಥಿಗಳು ಸ್ವ–ವಿವರಗಳೊಂದಿಗೆ ಈ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೊ.ಸಂಖ್ಯೆ: 9742263499, 9945000793ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹಲಕ್ಷ್ಮಿ ಯೋಜನೆಯಲ್ಲಿ ಪರಿಷ್ಕರಣೆ ಇಲ್ಲ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಂಗಳೂರು: ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ಯಾವುದೇ ರೀತಿಯ ಪರಿಷ್ಕರಣೆ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಸ್ಪಷ್ಟಪಡಿಸಿದ್ದಾರೆ.

ವಿಧಾನಸೌಧದಲ್ಲಿ ಗುರುವಾರ ಸುದ್ದಿಗಾರರ ಪ್ರಶ್ನೆಗಳಿಗೆ ಅವರು ಉತ್ತರಿಸಿದರು.

ಹಣ ಸಂದಾಯಕ್ಕೆ ತಾಂತ್ರಿಕ ಸಮಸ್ಯೆ ಆಗುತ್ತಿದೆಯೇ ಎಂಬ ಪ್ರಶ್ನೆಗೆ, ಆತಂಹ ಸಮಸ್ಯೆ ಏನೂ ಇಲ್ಲ ಎಂದರು.

ಈಗಾಗಲೇ ಏಪ್ರಿಲ್ ತಿಂಗಳ ಹಣ ಸಂದಾಯವಾಗಿದ್ದು, ಮೇ ತಿಂಗಳ ಹಣ ವರ್ಗಾವಣೆ ಆಗಬೇಕಿದೆ. ನಮಗೆ ಹಣಕಾಸು ಇಲಾಖೆಯಿಂದ ಹಣ ಬಿಡುಗಡೆ ಆಗಬೇಕಿದೆ. ನಮ್ಮ ಇಲಾಖೆಯ ಬದಲಾಗಿ ಈಗ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಮೂಲಕ ಹಣ ಸಂದಾಯವಾಗುತ್ತಿದೆ ಎಂದು ಹೇಳಿದರು.

ಗೃಹಲಕ್ಷ್ಮಿ ಯೋಜನೆ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕಾಳಜಿ ಇದೆ. ಯೋಜನೆಗೆ ಯಾವುದೇ ತೊಂದರೆ ಇಲ್ಲ. ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿಗಳ ಮೂಲಕ ಹಣ ಸಂದಾಯವಾಗಬೇಕು ಎಂದು ಕೇಂದ್ರದ ನಿಯಮ ಇದೆ. ಹೀಗಾಗಿ ಫಲಾನುಭವಿಗಳಿಗೆ ಹಣ ತಲುಪಲು ಕೊಂಚ ವಿಳಂಬವಾಗುತ್ತಿದೆ ಎಂದು ಉತ್ತರಿಸಿದರು.

ಪ್ರತಿ ತಿಂಗಳು 10 ರಿಂದ 15 ಸಾವಿರ ಫಲಾನುಭವಿಗಳ ಸಂಖ್ಯೆ ಹೆಚ್ಚುತ್ತಿದೆ. ನೋಂದಣಿ ಮಾಡಿಕೊಂಡ ಎಲ್ಲಾ ಫಲಾನುಭವಿಗಳಿಗೆ ಹಣ ತಲುಪುತ್ತಿದೆ.

ಇದರಲ್ಲಿ ಯಾವುದೇ ಸಮಸ್ಯೆ ಇಲ್ಲ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

## ವಿಕಲಚೇತನರ ಇಲಾಖೆ: ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಕೊಪ್ಪಳ : 2025ನೇ ಸಾಲಿಗೆ ಕೇಂದ್ರ ಸರ್ಕಾರವು ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ರಾಷ್ಟ್ರ ಪ್ರಶಸ್ತಿ ನೀಡುತ್ತಿದ್ದು, ಜಿಲ್ಲೆಯ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವ್ಯಕ್ತಿ ಹಾಗೂ ಸಂಸ್ಥೆಗಳು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ಜುಲೈ 15 ರೊಳಗಾಗಿ ಭಾರತ ಸರ್ಕಾರದ ಜಾಲತಾಣ: **www.awards.gov.in** ನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬೇಕು. ಅರ್ಹತಾ ಮಾನದಂಡಗಳು ಹಾಗೂ ಇತರ ವಿವರಗಳಿಗಾಗಿ ಇಲಾಖೆಯ ವೆಬ್‌ಸೈಟ್: ತಿತಿತಿ.ಜಜಡಿತಿಜ.ರಿಣತಿ.ಟಿ ಗೆ ಭೇಟಿ ನೀಡಬಹುದು. ಅಥವಾ ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಮಾಹಿತಿ ಸಲಹಾ ಕೇಂದ್ರದ ದೂ.ಸಂ. 08539–295496 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 20ರಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರುಗಳಿಂದ ಸಭೆ

ಕೊಪ್ಪಳ : ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರುಗಳಾದ ಶೇಖರಗೌಡ ಜಿ. ರಾಮತ್ನಾಳ ಮತ್ತು ಕೆ.ಟಿ.ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆಯನ್ನು ಜೂನ್ 20ರಂದು ಹಮ್ಮಿಕೊಳ್ಳಲಾಗಿದೆ.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರುಗಳು ಕೊಪ್ಪಳ ಜಿಲ್ಲೆಯಲ್ಲಿ ಜೂ. 19ರಂದು ಶಾಲೆ, ಅಂಗನವಾಡಿ, ಗ್ರಾಮ ಪಂಚಾಯತ್, ವಸತಿ ನಿಲಯ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು.

ಜೂ. 20ರ ಬೆಳಗ್ಗೆ 11 ಗಂಟೆಗೆ ಜಿಲ್ಲೆಯಲ್ಲಿ "ಮಕ್ಕಳ ಹಕ್ಕುಗಳ ರಕ್ಷಣಾ ವ್ಯವಸ್ಥೆ ಹಾಗೂ ಮಕ್ಕಳ ಅಸಹಜ ಸಾವಿನ ಪ್ರಕರಣಗಳನ್ನು ತಡೆಗಟ್ಟುವ ಸಂಬಂಧ" ವಿವಿಧ ಭಾಗೀದಾರರ ಇಲಾಖೆಗಳೊಂದಿಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಸಭೆಯನ್ನು ನಡೆಸಲಿದ್ದು, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ತಪ್ಪದೇ ಸಭೆಗೆ ಆಗಮಿಸುವಂತೆ ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೋದಿಜೀ ಪರಿಶ್ರಮದಿಂದ ದೇಶ ಆರ್ಥಿಕವಾಗಿ 4 ನೇ ಸ್ಥಾನ: ಜಗದೀಶ ಶೆಟ್ಟರ



ಬೆಳಗಾವಿ. ನಗರದ ಗೋಮಟೇಶ ವಿದ್ಯಾಪೀಠದಲ್ಲಿ ನಡೆದ ವಿಕಸಿತ ಭಾರತದ ಅಮೃತಕಾಲ ಜಿಲ್ಲಾ ಮಟ್ಟದ ವೃತ್ತಿಪರರ ಸಭೆ ಮತ್ತು ಪ್ರದರ್ಶನವನ್ನು ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಜಗದೀಶ್ ಶೆಟ್ಟರ್ ಅವರು ಉದ್ಘಾಟಿಸಿ ಮಾತನಾಡಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಭಾರತ ಸರ್ಕಾರ ಕಳೆದ 11 ವರ್ಷಗಳಿಂದ ಜನಪರವಾದ ಉತ್ತಮ ಆಡಳಿತ ನೀಡಿದ ಪರಿಣಾಮವಾಗಿ ಆರ್ಥಿಕವಾಗಿ ಹತ್ತನೇ ಸ್ಥಾನದಲ್ಲಿದ್ದ ಭಾರತ ಜಪಾನ್ ಹಿಂದಿಕ್ಕಿ ನಾಲ್ಕನೇ ಸ್ಥಾನಕ್ಕೆ ಬಂದಿದ್ದು ಶೀಘ್ರದಲ್ಲೇ ಆರ್ಥಿಕವಾಗಿ ಮೂರನೇ ಸ್ಥಾನ ಅಲಂಕರಿಸಲಿದೆ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆ, ಆಯುಷ್ಮಾನ್ ಭಾರತ, ಜಲಜೀವನ ಮಿಷನ್ ಸೇರಿದಂತೆ 10 ಹಲವು ಯೋಜನೆಗಳನ್ನು ಜಾರಿಗೆ ತಂದು ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸರಕಾರದ ಯೋಜನೆಗಳನ್ನು ಮುಟ್ಟಿಸಿದೆ ಎಂದು ಹೇಳಿದರು.

ಮಾಜಿ ಶಾಸಕರಾದ ಸಂಜಯ್ ಪಾಟೀಲ್ ಹಾಗೂ ಬಿಜೆಪಿ ವಕ್ತಾರರಾದ ನಾಗರಾಜ್ ಕುಲಕರ್ಣಿ ಅವರು ಮಾತನಾಡಿ ಕಳೆದ 11 ವರ್ಷಗಳ ಆಡಳಿತದಲ್ಲಿ 34 ಪ್ರತಿಶತದಲ್ಲಿ 27 ಪ್ರತಿಶತ ಕಡುಬಡವರು ಬಡತನ ರೇಖೆಯಿಂದ ಹೊರ ಬಂದಿದ್ದು 7.5 ಪ್ರತಿಶತ ಕಡುಬಡತನ ಹೊಂದಿದ್ದಾರೆ ಎಪ್ಪತ್ತು ವರ್ಷಗಳ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಬಡತನ ಹೋಗಲಾಡಿಸಲಿಲ್ಲ ಆದರೆ ಪ್ರಧಾನಿ ನರೇಂದ್ರ ಮೋದಿ ಬಂದ ಮೇಲೆ ಬಡವರು ನೆಮ್ಮದಿಯ ಜೀವನ ಸಾಗಿಸಲು ಅನುಕೂಲ ವಾಗುವಂತೆ ಹಲವು ಯೋಜನೆಗಳನ್ನು ನೀಡಿದ್ದು 11 ವರ್ಷಗಳ ಹಲವು ಸಾಧನೆಗಳು ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ತಿಳಿಸುವ ಕೆಲಸ ಆಗಲಿ ಎಂದು ಹೇಳಿದರು

ಬಿಜೆಪಿ ಮುಖಂಡರಾದ ಎಂ.ಬಿ ಜಿರಲಿ ಅವರು ಪ್ರಧಾನಿ ನರೇಂದ್ರ ಮೋದಿ–ಜಿಯವರ 11 ವರ್ಷಗಳ ಸಾಧನೆಯ ಕುರಿತು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಬೆಳಗಾವಿ ಗ್ರಾಮಂತರ ಜಿಲ್ಲಾಧ್ಯಕ್ಷರಾದ ಸುಭಾಷ್ ಪಾಟೀಲ, ಮಹಾನಗರ ಜಿಲ್ಲಾಧ್ಯಕ್ಷರಾದ ಗೀತಾ ಸುತಾರ, ಶಾಸಕರಾದ ವಿಠ್ಠಲ ಹಲಗೇಕರ, ಮಾಜಿ ಸಂಸದರಾದ ಮಂಗಲಾ ಅಂಗಡಿ,ಮಾಜಿ ಶಾಸಕರಾದ ಮಹಾಂತೇಶ ಕವಟಗಿಮಠ, ಮಹಾನಗರ ಪಾಲಿಕೆ ಮಹಾಪೌರರಾದ ಮಂಗೇಶ್ ಪವಾರ್,ಉಪಮಹಾಪೌರರಾದ ವಾಣಿ ಜೋಶಿ, ರಾಜ್ಯ ಮಾಧ್ಯಮ ಸಮಿತಿ ಸದಸ್ಯ ಎಫ್ ಎಸ್ ಸಿದ್ಧನಗೌಡ್ರ, ಮಹಿಳಾ ಮೋರ್ಚಾ ರಾಜ್ಯ ಕಾರ್ಯದರ್ಶಿ ಸೋನಾಲಿ ಸರ್ನೋಬತ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂದೀಪ್ ದೇಶಪಾಂಡೆ, ಮಲ್ಲಿಕಾರ್ಜುನ ಮಾದಮ್ಮನವರ, ಧನಶ್ರೀ ದೇಸಾಯಿ, ರಾಜಶೇಖರ್ ಡೋಣಿ, ಈರಯ್ಯ ಖೋತ್, ಹನುಮಂತ ಕೊಂಗಾಲಿ, ಶ್ರೇಯಸ್ ನಾಕಾಡಿ, ಜಿಲ್ಲೆಯ ಮಾಜಿ ಸೈನಿಕರು, ವೈದ್ಯರು, ವಕೀಲರು, ಇಂಜಿನಿಯರುಗಳು, ಶಿಕ್ಷಕರು ವಿವಿಧ ವೃತ್ತಿಪರರು ಹಾಗೂ ವಿವಿಧ ಮಂಡಲದ ಅಧ್ಯಕ್ಷರು ಪ್ರಮುಖ ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು

# ಮೊದಲನೆ ಮಹಡಿ ಕಟ್ಟಡ ನಿರ್ಮಾಣ, ಕೌಂಪೌಂಡ ಗೋಡೆ, ನೆಲಮಹಡಿ ಕಟ್ಟಡ ನಿರ್ವಹಣೆ ಕಾಮಗಾರಿಗೆ ಚಾಲನೆ



ರಾಯಬಾಗ: ಸರ್ಕಾರಿ ಇಲಾಖೆಗಳ ಸೌಲಭ್ಯಗಳನ್ನು ಒಂದೇ ಸೂರಿನಡಿ ಸಾರ್ವಜನಿಕರಿಗೆ ಲಭ್ಯವಾಗಲು ಪಟ್ಟಣದ ತಾಲೂಕು ಆಡಳಿತ ಕಚೇರಿ(ತಹಶಿಲ್ದಾರರ ಕಚೇರಿ)ಯ ಮೊದಲನೆ ಮಹಡಿ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಡಿ. ಎಮ್.ಐಹೊಳೆ ಹೇಳಿದರು.

ಗುರುವಾರ ಪಟ್ಟಣದ ತಹಶೀಲ್ದಾರ ಕಚೇರಿ ಆವರಣದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಮಂಜೂರಾದ ರೂ.1 ಕೋಟಿ ಅನುದಾನದಲ್ಲಿ ಪಟ್ಟಣದ ತಹಶೀಲ್ದಾರ ಕಚೇರಿಯ ಮೊದಲನೆ ಮಹಡಿ ಕಟ್ಟಡ ನಿರ್ಮಾಣ, ಕೌಂಪೌಂಡ ಗೋಡೆ, ನೆಲಮಹಡಿ ಕಟ್ಟಡ ನಿರ್ವಹಣೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ತಹಶೀಲ್ದಾರ ಕಚೇರಿಗೆ ಆಗಮಿಸುವ ಸಾರ್ವಜನಿಕರಿಗೆ ಬೇಕಾದ ಎಲ್ಲ ಮೂಲಭೂತ ಸೌಕರ್ಯ ಕಲ್ಪಿಸಲಾಗುವುದು ಎಂದು ತಿಳಿಸಿದರು. ತಹಶೀಲ್ದಾರ ಸುರೇಶ ಮುಂಜೆ, ಪ.ಪಂ.ಅಧ್ಯಕ್ಷ ಅಶೋಕ ಅಂಗಡಿ, ಎಇಇ ಆರ್.ಬಿ.ಮನವಡ್ಡರ, ಸಿ.ಎಸ್.ಕಾಂಬಳೆ, ಪರಮಾನಂದ ಮಂಗಸೂಳಿ, ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೆಮಲಾಪೂರೆ, ಸುರೇಶ ಮಾಳಿ, ಮಹೇಶ ಕರಮಡಿ, ಸದಾನಂದ ಹಳಿಂಗಳಿ, ವಿಶ್ವನಾಥ ಹಾರೂಗೇರಿ, ಸೋಮಶೇಖರ ಜೋರೆ, ನಿಂಗಪ್ಪ ಪಕಾಂಡಿ, ಭಾರತಿ ಲೋಹಾರ, ಸುಭಾಸ ಕಾಂಬಳೆ ಸೇರಿ ತಹಶೀಲ್ದಾರ ಕಚೇರಿ ಸಿಬ್ಬಂದಿ ಇದ್ದರು.

# ಗ್ರಾಹಕರ ಪ್ಲ್ಯಾಟ್‌ನ ಮುಂಗಡ ಹಣ ಮರಳಿಸಲು ಶ್ರೀ ಬಾಲಾಜಿ ಡೆವಲಪರ್ಸ್‌ಗೆ ಜಿಲ್ಲಾ ಗ್ರಾಹಕರ ಆಯೋಗದ ಆದೇಶ

ಧಾರವಾಡ : ಬೆಳಗಾವಿಯ ರಾಮದುರ್ಗದ ನಿವಾಸಿ ಭಾರತಿ ಕೋಟಿ ಎಂಬುವವರು ಎದುರುದಾರರು ಅಭಿವೃದ್ಧಿಪಡಿಸುತ್ತಿದ್ದ ಚಿಕ್ಕಮಲ್ಲಿಗವಾಡ ಗ್ರಾಮದ ಲೇಔಟನಲ್ಲಿ ಪ್ಲಾಟ್ ನಂ.150 ನ್ನು ಖರೀದಿಸಲು ಇಚ್ಚಿಸಿದ್ದರು. ಇದರ ಬಗ್ಗೆ ಉಭಯತರ ಮಧ್ಯ ರೂ.3,96,000 ಗಳ ಖರೀದಿ ಕರಾರು ಒಪ್ಪಂದವಾಗಿತ್ತು. ಇದರ ಪೈಕಿ ದೂರುದಾರರು ರೂ.2,52,000 ಗಳನ್ನು ಮುಂಗಡ ಹಣ ಪಾವತಿಸಿದ್ದರು. ಹಣ ಪಾವತಿಸಿದ ದಿನದಿಂದ ಇವತ್ತಿನವರೆಗೂ ಎದುರುದಾರರು ದೂರುದಾರರಿಗೆ ಬಾಕಿ ಹಣ ಪಡೆದು ಖರೀದಿ ಕರಾರು ಮಾಡಿಕೊಟ್ಟಿರಲಿಲ್ಲ ಮತ್ತು ಮುಂಗಡ ಹಣವನ್ನೂ ಸಹ ಮರಳಿ ಕೊಟ್ಟಿರಲಿಲ್ಲ. ಎದುರುದಾರರು ಅಂತಹ ನಡಾವಳಿಕೆಯಿಂದ ತನಗೆ ಮೋಸವಾಗಿದೆ ಮತ್ತು ಅವರು ತನಗೆ ಸೇವಾ ನ್ಯೂನ್ಯತೆ ಎಸಗಿದ್ದಾರೆ ಅಂತಾ ಹೇಳಿ ದೂರುದಾರರು ಎದುರುದಾರರ ವಿರುದ್ಧ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ದಿ: 06/12/2024 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗ, ದೂರುದಾರಳಿಂದ ರೂ.2,52,000 ಗಳನ್ನು ಮುಂಗಡ ಹಣ ಪಡೆದುಕೊಂಡು ಪ್ಲಾಟನ್ನು ಅಭಿವೃದ್ಧಿಪಡಿಸದೇ ಎದುರುದಾರರು ಗ್ರಾಹಕ ರಕ್ಷಣಾ ಕಾಯಿದೆಯಡಿ ಸೇವಾ ನ್ಯೂನತೆ ಎಸಗಿರುತ್ತಾರೆ ಅಂತಾ ಅಭಿಪ್ರಾಯಪಟ್ಟು, ದೂರುದಾರಳು ಪಾವತಿಸಿದ ಹಣದಜೊತೆಗೆ ಶೇ.10 ರಂತೆ ಬಡ್ಡಿ ಸೇರಿಸಿ ಆದೇಶವಾದ ಒಂದು ತಿಂಗಳೊಳಗಾಗಿ ಪಾವತಿಸುವಂತೆ ಎದುರುದಾರರಿಗೆ ನಿರ್ದೇಶಿಸಿದೆ. ಅಲ್ಲದೇ ದೂರುದಾರಳಿಗೆ ಆಗಿರುವ ಅನಾನುಕೂಲ ಹಾಗೂ ಮಾನಸೀಕ ಹಿಂಸೆಗೆ ರೂ.50,000 ಪರಿಹಾರ ಹಾಗೂ ಪ್ರಕರಣದ ಖರ್ಚು ವೆಚ್ಚ ರೂ.10,000 ಕೊಡುವಂತೆ ಎದುರುದಾರರಾದ ಸಾಯಿ ಬಿಲ್ಡರ್ಸ್‌ಗೆ ಆಯೋಗ ತನ್ನ ತೀರ್ಪಿನಲ್ಲಿ ಆದೇಶಿಸಿದೆ.

# ಹೊನ್ನಾಪುರ- ಬೆಣಚಿ ಪ್ರೌಢಶಾಲೆಗಳಿಗೆ ಕ್ಷೇತ್ರಶಿಕ್ಷಣಾಧಿಕಾರಿ ಭೇಟಿ

# ಸುರಕ್ಷಿತ ಕೊಠಡಿಗೆ ವಿದ್ಯಾರ್ಥಿಗಳ ಸ್ಥಳಾಂತರ

ಧಾರವಾಡ : ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ ಸಿಇಓ ಅವರು ನೀಡಿದ್ದ ನಿರ್ದೇಶನದಂತೆ ವಿದ್ಯಾರ್ಥಿಗಳ ಸುರಕ್ಷತೆಗೆ ಗಮನಹರಿಸದೆ ಮತ್ತು ಕಾಲಮಿತಿಯಲ್ಲಿ ಶಾಲಾ ಕೊಠಡಿಗಳ ದುರಸ್ತಿಗೊಳಿಸದ ಹಿನ್ನಲೆಯಲ್ಲಿ ಧಾರವಾಡ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ ಅವರು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಸೂಚನೆ ಮೇರೆಗೆ ಇಂದು ಬೆಳಿಗ್ಗೆ ಧಾರವಾಡ ತಾಲೂಕಿನ ಹೊನ್ನಾಪುರ, ಬೆಣಚಿ ಪ್ರೌಢಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಪರಿಶೀಲಿಸಿದರು.

ಸಾರ್ವಜನಿಕ ದೂರು ಹಿನ್ನಲೆಯಲ್ಲಿ ಉತ್ತಮ ಕೊಠಡಿಗಳಿಗೆ ವಿದ್ಯಾರ್ಥಿಗಳನ್ನು ಸ್ಥಳಾಂತರಗೊಳಿಸಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು ನಿರ್ದೇಶನದಂತೆ ಬಿಇಓ ಅವರು ಹೊನ್ನಾಪುರ ಅನುದಾನಿತ ಪ್ರೌಢಶಾಲೆಗೆ ಭೇಟಿ ನೀಡಿ, ಕೊಠಡಿ ದುರಸ್ತಿ ಹಿನ್ನಲೆಯಲ್ಲಿ 9ನೇ ವರ್ಗದ ವಿದ್ಯಾರ್ಥಿಗಳಿಗೆ ಬೇರೆಡೆ ಪಾಠ ಮಾಡಲಾಗುತಿತ್ತು. ಇದನ್ನು ಗಮನಿಸಿದ ಅವರು ಮುಂದೆ ನಿಂತು ರಿಪೇರಿ ಆಗಿರುವ ಸುಸಜ್ಜಿತ ಕೊಠಡಿಗೆ ವಿದ್ಯಾರ್ಥಿಗಳನ್ನು ಸ್ಥಳಾಂತರಿಸಿ, ಅಲ್ಲಿಯೇ ಮಕ್ಕಳಿಗೆ ಪಾಠ ಮಾಡುವಂತೆ ಮಾಡಿದರು. ವಿದ್ಯಾರ್ಥಿಗಳ ಕಲಿಕೆಗೆ ಯಾವುದೇ



ಅನಾನುಕೂಲ ಮತ್ತು ಅಸುರಕ್ಷತೆ ಉಂಟಾದರೆ ಶಾಲೆಯ ಮೇಲೆ ಸೂಕ್ತ ಕ್ರಮಕ್ಕೆ ಶಿಪಾರಸ್ಸು ಮಾಡಲಾಗುತ್ತದೆ. ಹಿಂದಿನಿಂದ ಶಾಲೆಯನ್ನು ಸಂಸ್ಥೆಯವರು ಉತ್ತಮವಾಗಿ ನಿರ್ವಹಿಸಿದ್ದರೂ, ಉತ್ತಮ ಗುಣಮಟ್ಟದ ಮೂಲಸೌಕರ್ಯ ಕಲ್ಪಿಸುವಲ್ಲಿ ಕೊರತೆ ಉಂಟಾಗುತ್ತಿದೆ. ಈ ಕುರಿತು ತುರ್ತು ಕ್ರಮವಹಿಸಬೇಕೆಂದು ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಿಗೆ ಅವರು ಸೂಚಿಸಿದರು.

ಬೆಣಚಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಅನಿರೀಕ್ಷಿತ ಭೇಟಿ: ಪೂರ್ವ ಪ್ರಾಥಮಿಕ ಶಾಲೆಯ ಎಲ್.ಕೆಜಿ, ಯುಕೆಜಿ ವರ್ಗಗಳನ್ನು ದುರಸ್ತಿ ಪೂರ್ಣಗೊಳ್ಳದ ಕೊಠಡಿಗಳಲ್ಲಿ ನಡೆಸುತ್ತಿರುವ ಬಗ್ಗೆ ಮಾಹಿತಿ ಬಂದ ಹಿನ್ನೆಲೆಯಲ್ಲಿ ಬಿಇಓ ಸದಲಗಿ ಅವರು ಬೆಣಚಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಇಂದು ಬೆಳಿಗ್ಗೆ ಅನಿರೀಕ್ಷಿತ ಭೇಟಿ ನೀಡಿ, ಪರಿಶೀಲಿಸಿದರು.

ಮಕ್ಕಳಿಗೆ ಬೇರೆಡೆ ಸ್ಥಳಾಂತರಿಸಿ, ಮುಂದಿನ ಎರಡು ದಿನದಲ್ಲಿ ಅನುಷ್ಠಾನ ಏಜನ್ಸಿ ಕಾಮಗಾರಿ ಪೂರ್ಣಗೊಳಿಸಿ ಬಳಕೆಗೆ ನೀಡಬೇಕು ಎಂದು ತಿಳಿಸಿದರು.

ಕಟ್ಟಡ ಕಾಮಗಾರಿ ವಿಳಂಬ, ಅಪೂರ್ಣವಾದ ಬಗ್ಗೆ ಮೇಲಾಧಿಕಾರಿಗಳಿಗೆ ಮಾಹಿತಿ ನೀಡದ ಹಿನ್ನಲೆಯಲ್ಲಿ ಜಿ.ಪಂ. ಸಿಇಓ ಆದೇಶದ ಮೇರೆಗೆ ಶಾಲೆಯ ಮುಖ್ಯ ಶಿಕ್ಷಕರಿಗೆ ಕಾರಣ ಕೇಳಿ ನೋಟಿಸ್ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಸುರೇಶ ಹಾಗೂ ಬೆಣಚಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಾಗರಾಜ ಹಾಗೂ ಕೆ.ಆರ್.ಆಯ್.ಡಿ.ಎಲ್ ಎಇಇ ಅನ್ನಪೂರ್ಣ ಮತ್ತು ಶಿಕ್ಷಣ ಸಂಯೋಜಕ ಬಸವರಾಜ ಛಬ್ಬಿ ಉಪಸ್ಥಿತರಿದ್ದರು.

****



ರಾಯಬಾಗ: ತಾಲೂಕಿನ ನಾಗರಾಳ ಗ್ರಾಮದ ರೇಣುಕಾ ಮಂದಿರಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾದ 20 ಲಕ್ಷ ರೂ. ಅನುದಾನದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕ ದುರ್ಯೋಧನ ಐಹೊಳೆಯವರು ಗುರುವಾರ ಚಾಲನೆ ನೀಡಿದರು. ಎಇ ಎಸ್.ಎಸ್.ಹೊಸಮನಿ, ಅಪ್ಪಾಸಾಬ ಕೆಂಗನ್ನವರ, ಮಹಾದೇವ ಐಹೊಳೆ ಸತ್ಯಪ್ಪ ದಾವನೆ, ಬಸಲಿಂಗ ಮಗದುಮ್ಮ, ಭೀಮು ಮುಧೋಳೆ, ಬೀರಪ್ಪ ಗೊಂಡೆ, ರಾಜು ಐಹೊಳೆ, ಸಿದ್ದಪ್ಪ ಗೊಂಡೆ ಸೇರಿ ಅನೇಕರು ಇದ್ದರು.



ಧಾರವಾಡ ಪಶ್ಚಿಮ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯು ಅಧ್ಯಕ್ಷೆ ಗೀತಾ ತಾವಂಶಿ ಅವರ ಅಧ್ಯಕ್ಷತೆಯಲ್ಲಿ ಇಂದು (ಜೂ.18) ಸಂಜೆ ಜರುಗಿತ್ತು. ಸಭೆಯಲ್ಲಿ ಮಹಾನಗರ ಪಾಲಿಕೆಯ ವಲಯ ಸಹಾಯಕ ಆಯುಕ್ತ ಅರವಿಂದ ಜಮಖಂಡಿ ಹಾಗೂ ಗ್ಯಾರಂಟಿ ಯೋಜನೆಗಳ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

### ಗ್ಯಾರಂಟಿ ಯೋಜೆನಗಳ ಪ್ರಗತಿ ಪರಿಶೀಲನಾ ಸಭೆ

## ಫಲಾನುಭವಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ : ಎಸ್.ಆರ್.ಪಾಟೀಲ



ಬಾಗಲಕೋಟ : ರಾಜ್ಯ ಸರಕಾರ ಬಡವರ, ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬಿ ಜೀವನಕ್ಕೆ ಪೂರಕವಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ಯೋಜನೆಗಳನ್ನು ತಲುಪಿಸುವಲ್ಲಿ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು. ಜೊತೆಗೆ ವಿಶೇಷವಾಗಿ ಕೆ-ಎಸ್ಆರ್‌ಟಿಸಿ ಅಧಿಕಾರಿ ಮತ್ತು ಸಿಬ್ಬಂದಿಗಳು ಫಲಾನುಭವಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತ ಹಳೆಯ ಸಭಾಂಗಣದಲ್ಲಿ ಗುರುವಾರದಂದು ಜರುಗಿದ ಬಾಗಲಕೋಟೆ ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದ ಅವರು ರಾಜ್ಯದ ಗ್ಯಾರಂಟಿ ಯೋಜನೆಗಳು ಶ್ಲಾಘನೆ ವ್ಯಕ್ತವಾಗಿವೆ. ಇಂದು ಮಹಿಳೆಯರು, ಬಡವರು, ಈ ಯೋಜನೆಗಳ ಸಹಾಯದಿಂದ ಸ್ವಂತ ಮತ್ತು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳುತ್ತಿದ್ದಾರೆ. ಅರ್ಹ ಫಲಾನುಭವಿಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ. ಕ್ಷೇತ್ರಮಟ್ಟದಲ್ಲಿ ಯೋಜನೆ ತಲುಪಿಸುವ ಅಧಿಕಾರಿ, ಸಿಬ್ಬಂದಿಗಳು ತೋರುವ ವರ್ತನೆ ಮತ್ತು ಸೌಜನ್ಯತೆ ಯೋಜನೆಯ ಯಶಸ್ಸು ಹೆಚ್ಚಿಸುತ್ತವೆ. ಅಲ್ಲದೇ ಶಕ್ತಿ ಯೋಜನೆಯಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಳವಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಗೆ ಹೆಚ್ಚುವರಿ ಬಸ್‌ಗಳು ಬಂದಿರುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಪ್ರಗತಿ:
ಮೇ-2025ರ ಅಂತ್ಯಕ್ಕೆ ಅಂದಾಜು 434473 ಗೃಹ ಜ್ಯೋತಿ ಸ್ಥಾವರಗಳಿದ್ದು ಅದರಲ್ಲಿ 424217 ಸ್ಥಾವರಗಳು ಗೃಹ ಜ್ಯೋತಿ ಯೋಜನೆ ಅಡಿ ನೋಂದಾಯಿಸಲ್ಪಟ್ಟಿರುತ್ತವೆ. ಉಳಿದಂತೆ 10,256 ಸ್ಥಾವರಗಳ ನೋಂದಣಿ ಹಂತವು ಪ್ರಗತಿಯಲ್ಲಿರುತ್ತದೆ. ಅಂದಾಜು 328.70 ಕೋಟಿ ಮೊತ್ತವಾಗಿದೆ ಹಾಗೂ ಶಕ್ತಿ ಯೋಜನೆಯಲ್ಲಿ ಏಪ್ರಿಲ್.01 ರಿಂದ ಜೂನ್.17 ರ ವರೆಗೆ ಒಟ್ಟು 5955.24 ಲಕ್ಷ ಮೊತ್ತವಾಗಿದೆ. ಸಾರಿಗೆ ಸಂಸ್ಥೆಯ ಒಟ್ಟಾರೆ ಆದಾಯದಲ್ಲಿ 56% ರಷ್ಟು ಶಕ್ತಿ ಯೋಜನೆಯ ಪಾಲು ಇದೆ. ಅದರಂತೆ ಅನ್ನಭಾಗ್ಯ ಯೋಜನೆ ಅಡಿ ಹೆಚ್ಚುವರಿಯಾಗಿ ಪ್ರತಿ ಫಲಾನುಭವಿಗೆ 05 ಕೆ.ಜಿಯಂತೆ ಫೆಬ್ರವರಿ 2025 ರಿಂದ ಮೇ 2025 ರ ವರೆಗೆ 2,89,790 ಕ್ವಿಂಟಲ್ ಅಕ್ಕಿಯನ್ನು ವಿತರಿಸಲಾಗಿದೆ.

ಸಭೆಯಲ್ಲಿ ಬಾಗಲಕೋಟೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊರತಂದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿ ನೋಟ ಪುಸ್ತಕವನ್ನು ವಿತರಿಸಲಾಯಿತು. ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ ಎಂ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ್ ಕುರೇರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾ ಅಧ್ಯಕ್ಷ ಡಾ.ಸಾಗರ ಎಚ್.ಟೇಕನ್ನವರ, ಉಪಾಧ್ಯಕ್ಷರು ಮತ್ತು ತಾಲೂಕು ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಇಂದು ಯೋಗಾ ನಡಿಗೆ ನಾಡಿದ್ದು ಅಂತರಾಷ್ಟ್ರೀಯ ಯೋಗ

ಮೂಡಲಗಿ : ಕೇಂದ್ರ ಆಯುಷ್ಯ ಸಚಿವಾಲಯ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಯೋಗ ನಡಿಗೆ ಕಾರ್ಯಕ್ರಮವನ್ನು ಶುಕ್ರವಾರ 20 ರಂದು ಮುಂಜಾನೆ 10.00 ಗಂಟೆಗೆ ಪಟ್ಟಣದ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಿಂದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಮೂಡಲಗಿ ಶ್ರೀ ದತ್ತಾತ್ರೆಯ ಬೋಧ ಸ್ವಾಮಿಜಿಗಳು, ಸುಣಧೋಳಿ ಶ್ರೀ ಶಿವಾನಂದ ಸ್ವಾಮೀಜಿಗಳು, ಬಾಗೋಜಿಕೊಪ್ಪ ಡಾ. ಶ್ರೀ ಶಿವಲಿಂಗ ಮುರಘರಾಜೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು, ಶಿವಾಪೂರ ಅಡವಿಸಿದ್ದೇಶ್ವರ ಮಠದ ಶ್ರೀ ಅಡವಿ ಸಿದ್ದರಾಮ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಮೂಡಲಗಿ ದಿವಾನಿ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯದ ನ್ಯಾಯದೀಶೆ ಜ್ಯೋತಿ ಪಾಟೀಲ ಚಾಲನೆ ನೀಡುವರು.

ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ಸೇ-ರಿದಂತೆ ತಾಲೂಕ ಮಟ್ಟದ ಅಧಿಕಾರಿಗಳು ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಸಾರ್ವಜನಿಕರು ಭಾಗವಹಿಸುವರು,

ಜೂನ್ 21 ರಂದು 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಮುಂಜಾನೆ 06.30 ಗಂಟೆಗೆ ಯೋಗಾಭ್ಯಾಸ ಕಾರ್ಯಕ್ರಮಕ್ಕೆ ಯೋಗಾ ಆಸನಗಳನ್ನು ತರಬೇಕೆಂದು ಸೇವಾ ಸಂಸ್ಥೆಯ ಅಧ್ಯಕ್ಷ ಪರಪ್ಪ ಗಿರೆಣ್ಣವರ ವಿನಂತಿಸಿದ್ದಾರೆ.

## ಆರ್.ಎನ್.ಶೆಟ್ಟಿ ಜಿಲ್ಲಾಕ್ರೀಡಾಂಗಣದಲ್ಲಿ ಜೂ.21 ರಂದು ಯೋಗಾಭ್ಯಾಸ

ಧಾರವಾಡ : ಧಾರವಾಡ ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆಯುಷ್ ಇಲಾಖೆಯಿಂದ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 21, 2025 ರಂದು ಬೆಳಗ್ಗೆ 6.30 ಗಂಟೆಯಿಂದ 8 ಗಂಟೆಯವರೆಗೆ ಡಾ.ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಬೃಹತ್ ಪ್ರಮಾಣದಲ್ಲಿ ಸಾರ್ವಜನಿಕರಿಗೆ ಉಚಿತಯೋಗಾಭ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಯೋಗಾಭ್ಯಾಸದ ಮೂಲಕ ಆರೋಗ್ಯ ಕಾಪಾಡಿಕೊಳ್ಳುವುದು, ಒತ್ತಡ ನಿರ್ವಹಣೆ ಇತ್ಯಾದಿ ಯೋಗಾಸನಗಳನ್ನು ಪ್ರಾತ್ಯಕ್ಷಿಕೆ ಮೂಲಕ ಹೇಳಿ ಕೊಡಲಾಗುವುದು.

ಕಾರ್ಯಕ್ರಮದ ಪ್ರಯೋಜನವನ್ನು ಧಾರವಾಡ ನಗರದ ಎಲ್ಲ ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಯವರು, ಸರ್ಕಾರಿ ಇಲಾಖೆಯವರು ಪಡೆದುಕೊಳ್ಳಲು ಹಾಗೂ ಯೋಗಾಭ್ಯಾಸಕ್ಕೆ ಆಗಮಿಸುವಾಗ ಎಲ್ಲರೂ ಸರಳವಾದ ಉಡುಪು, ಯೋಗಾ ಮ್ಯಾಟ್ ಅಥವಾ ಜಮಖಾನ ತಮ್ಮ ಜೊತೆಯಲ್ಲಿ ತರಬೇಕು. ಕೊವಿಡ್-19 ಮಾರ್ಗ ಸೂಚಿಗಳ ಪಾಲನೆ ಹಾಗೂ ಕಾರ್ಯಕ್ರಮದಲ್ಲಿ ಜನದಟ್ಟಣೆಯನ್ನು ನಿಯಂತ್ರಿಸಲು ಕಟ್ಟು ನಿಟ್ಟಿನ ಕ್ರಮಗಳನ್ನು ಕೈಗೊಳ್ಳ ಬೇಕಾಗಿರುವುದರಿಂದ ಸಾರ್ವಜನಿಕ ಆರೋಗ್ಯ ಹಿತದೃಷ್ಟಿಯಿಂದ ಜ್ವರ, ನೆಗಡಿ, ಕೆಮ್ಮು ಮತ್ತು ಇತರೇ ಖಾಯಿಲೆಯಿಂದ ಬಳಲುತ್ತಿರುವವರು ಹಾಗೂ 14 ವರ್ಷದೊಳಗಿನ ಮಕ್ಕಳು ಸದರಿ ಕಾರ್ಯಕ್ರಮಕ್ಕೆ ಬರದೇ ಇರಲು ಸಂಬಂಧಿಸಿದವರು ಕ್ರಮವಹಿಸಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಉತ್ತಮ ಆರೋಗ್ಯಕ್ಕಾಗಿ ಉತ್ತಮ ಸ್ವಚ್ಛತಾ ಕ್ರಮಗಳನ್ನು ಕಲಿಸಿ

## ಮಕ್ಕಳಲ್ಲಿ ಅತಿಸಾರ- ನಿರ್ಜಲೀಕರಣ ಆಗದಂತೆ ಎಚ್ಚರವಹಿಸಿ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ಧಾರವಾಡ ಜಿಲ್ಲೆಯಾದ್ಯಂತ 5 ವರ್ಷದೊಳಗಿನ ಮಕ್ಕಳಲ್ಲಿ ಅತಿಸಾರದಿಂದ ನಿರ್ಜಲೀಕರಣ ಉಂಟಾಗಿ ಮಗುವಿಗೆ ಮಾರಣಾಂತಿಕವಾಗುವುದನ್ನು ತಡೆಗಟ್ಟಲು, ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನ-2025 ವನ್ನು ಜೂನ್ 16, 2025 ರಿಂದ ಜುಲೈ 31, 2025 ವರೆಗೆ ಹಮ್ಮಿಕೊಳ್ಳಲಾಗಿದೆ.

ಇಂದು (ಜೂ.19) ರಂದು ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾಧಿಕಾರಿ ದಿವ್ಯಾ ಪ್ರಭು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಉದ್ಘಾಟಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಮಕ್ಕಳಲ್ಲಿ ಅತಿಸಾರದಿಂದ ನಿರ್ಜಲೀಕರಣ ಉಂಟಾಗಿ ಮಗುವಿಗೆ ಮಾರಣಾಂತಿಕವಾಗಬಹುದು. ಇದನ್ನು ಸರಿಯಾದ ಪ್ರಮಾಣದಲ್ಲಿ ORS-ZINಅ ಮಾತ್ರೆಯನ್ನು ನೀಡುವುದರ ಮೂಲಕ ತಡೆಗಟ್ಟಬಹುದು. ಮತ್ತು ತೀವ್ರತರ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದು ಈ ಅಭಿಯಾನದ ಉದ್ದೇಶವಾಗಿರುತ್ತದೆ ಎಂದು ತಿಳಿಸಿದರು. ಮಗುವಿಗೆ ಅತಿಸಾರ ಉಂಟಾದಾಗ ಔಖಖ ಮತ್ತು ಚಖಓಅ ನೀಡುವುದರ ಮೂಲಕ ನಿರ್ಜಲೀಕರಣ ಆಗದಂತೆ ನೋಡಿಕೊಳ್ಳಬಹುದು. ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಉಚಿತ ಚಿಕಿತ್ಸೆ ಪಡೆದುಕೊಳ್ಳಲು ತಿಳಿಸಿದರು. ಜೂನ್ 16, 2025 ರಿಂದ ಜುಲೈ 31, 2025 ರವರೆಗೆ



ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನ – 2025 ಯನ್ನು ಎಲ್ಲ ಆರೋಗ್ಯ ಕೇಂದ್ರಗಳಲ್ಲೂ, ಉಪಕೇಂದ್ರಗಳಲ್ಲೂ ಹಾಗೂ ಆಸ್ಪತ್ರೆಗಳಲ್ಲಿ ಹಮ್ಮಿಕೊಂಡಿದ್ದು, ಆಶಾ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತೆಯರು ಈ ಕುರಿತಂತೆ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಮಕ್ಕಳು ಅತಿಸಾರಕ್ಕೆ ಒಳಗಾದಾಗ ತಾಯಂದಿರು ವಿಶೇಷ ಕಾಳಜಿ ವಹಿಸಬೇಕು ಹಾಗೂ ಎದೆಹಾಲನ್ನು ಉಣಿಸುವುದುನ್ನು ನಿಲ್ಲಿಸಬಾರದು, ಎದೆಹಾಲನ್ನು ಉಣಿಸುವುದುನ್ನು ನಿಲ್ಲಿಸಿದಲ್ಲಿ ಮಗುವಿಗೆ ನಿರ್ಜಲೀಕರಣ ಉಂಟಾಗಬಹುದು ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್. ಎಮ್ ಹೊನಕೇರಿ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ 5 ವರ್ಷದ ಒಳಗಿನ ಮಕ್ಕಳ ಸಂಖ್ಯೆ 207837 ಇದ್ದು, ಈ ಮಕ್ಕಳಲ್ಲಿ ಅತಿಸಾರ ಉಂಟಾಗದಂತೆ ಜಾಗೃತಿ ಮೂಡಿಸಲು ತೀವ್ರತರ ಅತಿಸಾರ ಕೊನೆಗೊಳಿಸುವ ಅಭಿಯಾನ-2025 ಹಮ್ಮಿಕೊಂಡಿದ್ದು, ಶುಚಿತ್ವವನ್ನು ಕಾಪಾಡಿಕೊಳ್ಳುವುದರ ಮೂಲಕ, ಸ್ವಚ್ಚವಾಗಿ ಕೈತೊಳೆಯುದರ ಮೂಲಕ, ಅಹಾರ ತಯಾರಿಸುವಾಗ ಸ್ವಚ್ಚತೆಯನ್ನು ಕಾಪಾಡಿಕೊಳ್ಳುವುದರ ಮೂಲಕ ಮಕ್ಕಳಲ್ಲಿ ಅತಿಸಾರ ಉಂಟಾಗದಂತೆ ನೋಡಿಕೊಳ್ಳಬಹುದು ಎಂದು ಹೇಳಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಸಂಗಪ್ಪಾ ಗಾಬಿ ಅವರು ಮಾತನಾಡಿ, ಪಾಲಕರು ಮಕ್ಕಳನ್ನು ಬೇಗನೆ ಆಸ್ಪತ್ರೆಗೆ ಕರೆದುಕೊಂಡು ಬಂದು ಸೂಕ್ತ ಚಿಕಿತ್ಸೆಯನ್ನು ಪಡೆಯುದರಿಂದ ಮಗುವಿಗೆ ಪ್ರಾಣಾಪಾಯವಾಗುವುದನ್ನು ತಪ್ಪಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳ ತಜ್ಞರಾದ ಡಾ. ಟಿ.ಎ. ಶೇಪೂರ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಾದ ಡಾ. ವರ್ಷಾ ಹಾಗೂ ಡಾ. ಮೇಘಾ ಅವರು ಅತಿಸಾರ ಹಾಗೂ ಅತಿಸಾರ ತಡೆಗಟ್ಟುವುದು ಹಾಗೂ ಅಪಾಯಕಾರಿ ಚಿಹ್ನೆಗಳ ಮತ್ತು ತಾಯಂದಿರು ಮಗುವಿನಲ್ಲಿ ನಿರ್ಜಲೀಕರಣ ಆಗದಂತೆ ವಹಿಸಬೇಕಾದ ಕಾಳಜಿಯ ಕು-ರಿತು ಉಪನ್ಯಾಸ ನೀಡಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಸುಜಾತಾ ಹಸವೀಮಠ ಅವರು ವಂದಿಸಿದರು. ರೇಣುಕಾ ಮಲ್ಲನಗೌಡರ್ ಅವರು ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಪ್ರೊಬೇಷನರಿ ಐ.ಎ.ಎಸ್ ಅಧಿಕಾರಿ ರೀತಿಕಾ ವರ್ಮಾ, ಧಾರವಾಡ ತಾಲೂಕಾ ಆರೋಗ್ಯಾಧಿಕಾರಿ ಡಾ. ತನುಜಾ ಕೆ.ಎನ್ ಹಾಗೂ ಸಿ.ಸಿ.ಟಿ ವೈದ್ಯಾಧಿಕಾರಿ ಡಾ. ಗೌರಿ ಬೆಲ್ಲದ, ಜಿಲ್ಲಾ ಆಸ್ಪತ್ರೆಯ ತಜ್ಞ ವೈದ್ಯರು, ಸಿಬ್ಬಂದಿಯವರು ಹಾಗೂ ಪ್ಯಾರಾ ಮಡಿಕಲ್ ವಿದ್ಯಾರ್ಥಿಗಳು, ತಾಯಂದಿರು, ಸಾರ್ವಜನಿಕರು ಉಪಸ್ಥಿತ-ರಿದ್ದರು.

### ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ ನಾಳೆ

ಬೆಳಗಾವಿ, : ಕಾರ್ಯ ಮತ್ತು ಪಾಲನೆ ನಗರ ಉಪವಿಭಾಗ-3ರ ಕಚೇರಿಯಲ್ಲಿ ಜೂನ್.21 ರಂದು ಮುಂಜಾನೆ 10.30 ಗಂಟೆಗೆ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ ಇವರ ಅಧ್ಯಕ್ಷತೆಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆಯನ್ನು ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ಸದರಿ ಸಭೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ/ ಕುಂದು ಕೊರತೆಗಳನ್ನು ಪರಿಹ-ರಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಒಲಿಂಪಿಕ್ ಡೇ ರನ್ 2025

ಬೆಳಗಾವಿ : ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಒಲಂಪಿಕ್ ಸಂಸ್ಥೆ ಬೆಂಗಳೂರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ರವಿವಾರ (ಜೂ.22) ಬೆಳಿಗ್ಗೆ 8 ಗಂಟೆಗೆ ಬೆಳಗಾವಿಯ ಕೋಟೆ ಆವರಣದಲ್ಲಿ (ಕಿಲ್ಲಾ) ಒಲಿಂಪಿಕ್-ಡೇ ರನ್ 2025 ರ ಉದ್ಘಾಟನಾ ಸಮಾರಂಭ ಜರುಗಲಿದೆ.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದು, ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ 2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ .

### ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಕೊಪ್ಪಳ : ಕೊಪ್ಪಳದ ಬೆಂಕಿನಗರ ನಿವಾಸಿಯಾದ ಖಾಜಾ ಹುಸೇನ್ ಮಾಬು ಸಾಬ ಕಳಸಾಪೂರ ಎಂಬ 54 ವರ್ಷದ ವ್ಯಕ್ತಿಯು 2024 ರ ಅಕ್ಟೋಬರ್ 25 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 13/2025 ಕಲಂ: ಮನುಷ್ಯ ಕಾಣೆ ಅಡಿ ಪ್ರಕರಣ ದಾಖಲಾಗಿದೆ.

ವ್ಯಕ್ತಿಯ ಚಹರೆ:
ವ್ಯಕ್ತಿಯು 5.6 ಅಡಿ ಎತ್ತರವಿದ್ದು, ಸಾದಾಕಪ್ಪು ಮೈಬಣ್ಣ, ಸದೃಢ ಮೈಕಟ್ಟು, ದುಂಡುಮುಖ ಹೊಂದಿದ್ದು, ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುತ್ತಾರೆ. ಕಾಣೆಯಾದಾಗ ಬಿಳಿ ಬಣ್ಣದ ತುಂಬು ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ಕಂಟ್ರೋಲ್ ರೂಂ.08539-230100, 230222, ನಗರ ಠಾಣೆ ಪಿಎಸ್ಐ: 9480803745, ನಗರ ಠಾಣೆ: 08539-220333 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣೆ ಪ್ರಕಟಣೆ ಕೋರಿದೆ.

## ನಾಳೆ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಬೆಳಗಾವಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಆಯುಷ್ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಕ್ರೀಡಾ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್, ಭಾರತ ಸೇವಾ ದಳ, ನೆಹರು ಯುವ ಕೇಂದ್ರ ಬೆಳಗಾವಿ ಹಾಗೂ ಯೋಗ ಸಂಘ ಸಂಸ್ಥೆಗಳು ಮತ್ತು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಶನಿವಾರ (ಜೂ.21) ಬೆಳಿಗ್ಗೆ 6.30 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಗುವುದು. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ-2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ .

ಇದಕ್ಕು ಮೊದಲು "ಯೋಗ ನಡಿಗೆ" ಜಾಗೃತಿ ಜಾಥಾ ಶುಕ್ರವಾರ (ಜೂ.20) ಬೆಳಿಗ್ಗೆ 8.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ ಆವರಣದಿಂದ ನಡೆಯಲಿದೆ. ಜಾಥಾ ಚನ್ನಮ್ಮ ವೃತ್ತ, ಮೂಲಕ ಧರ್ಮ ವೀರ ಸಂಭಾಜಿ ವೃತ್ತ (ಬೋಗಾರ್ ವೇಸ್) ದ ವರೆಗೆ ಸಂಚರಿಸಲಿದೆ.

## ಬೆಳಗಾವಿ ಕೇಂದ್ರ ಕಾರಾಗೃಹದಲ್ಲಿ ನಿವಾಸಿಗಳಿಗಾಗಿ ಸಾಹಿತ್ಯ ಕಮ್ಮಟ ವಿಚಾರಗೋಷ್ಠಿ ಹಾಗೂ ಸಂವಾದ ಕಾರ್ಯಕ್ರಮ ಆಯೋಜನೆ

ಬೆಳಗಾವಿ: ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ನಿವಾಸಿಗಳಿಗಾಗಿ ಸಾಹಿತ್ಯ ಕಮ್ಮಟ, ವಿಚಾರಗೋಷ್ಠಿ ಹಾಗೂ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿ-ತ್ತು, ಸದರಿ ಕಾರ್ಯಕ್ರಮವು ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ಕೇಂದ್ರ ಕಾರಾಗೃಹ ಬೆಳಗಾವಿ ಇವರುಗಳ ಸಂಂ-ಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿ-ತ್ತು. ಉದ್ಘಾಟಕರಾಗಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರಾದ ಶ್ರೀ ಎಲ್ ಎನ್ ಮುಕುಂದರಾಜ ಆಗಮಿಸಿದ್ದರು. ಮುಖ್ಯ ಅತಿಥಿಗಳಾಗಿ ಬೆಳಗಾವಿಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ॥ ಭೀಮಾಶಂಕರ ಗುಳೇದ, ಐ.ಪಿ.ಎಸ್ ಹಾಗೂ ಹಿರಿಯ ಸಾಹಿತಿಗಳಾದ ಡಾ॥ ಸರಜೂ ಕಾಟ್ಕರ್ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಕಾರಾಗೃಹದ ಪ್ರಭಾರಿ ಮುಖ್ಯ ಅಧೀಕ್ಷಕರಾದ ಶ್ರೀ ವಿ.ಕೃಷ್ಣಮೂರ್ತಿ ವಹಿಸಿದ್ದರು.

ದೀಪ ಬೆಳಗಿಸುವದರೊಂದಿಗೆ ಕಾರ್ಯಕ್ರಮ ಉದ್ಘಾಟಿಸಲಾಯಿತು. ಶ್ರೀ ಎಲ್ ಎನ್ ಮುಕುಂದರಾಜ, ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, 102 ವರ್ಷಗಳ ಇತಿಹಾಸವುಳ್ಳ ಬೆಳಗಾವಿ ಕೇಂದ್ರ ಕಾರಾಗೃಹದಲ್ಲಿ ದ.ರಾ.ಬೇಂದ್ರೆ, ಬಸವರಾಜ ಕಟ್ಟಿಮನಿ ಹಾಗೂ ವೀರ ಸಾವರ್‌ಕರ್ ಮತ್ತು ಇನ್ನೂ ಅನೇಕ ಸ್ವಾತಂತ್ರ್ಯ ಹೋರಾಟಗಾರರೂ ಕೆಲ ತಿಂಗಳುಕಾಲ ಈ ಕಾರಾಗೃಹದಲ್ಲಿ ಸೆರೆಮನೆವಾಸ ಅನುಭವಿಸಿದ್ದರು. ಕಾರಾಗೃಹದಲ್ಲಿರುವ ನಿವಾಸಿಗಳಿಗೆ ಓದುವ ಕೌಶಲ್ಯ ಬೆಳೆಸಿ ಸಾಹಿತ್ಯದೆಡೆಗೆ ಸೆಳೆದು ಜ್ಞಾನ ಸಂಪಾದಿಸುವಂತೆ ಮಾಡಿ, ಬಿಡುಗಡೆ ನಂತರ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಮಾಡಲು ಸಾಹಿತ್ಯ ಅಕಾಡೆಮಿ ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ಸಾಹಿತ್ಯ ಕಮ್ಮಟ, ವಿಚಾರಗೋಷ್ಠಿ ಹಾಗೂ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಕಾರಾಗೃಹಗಳ ಕೇವಲ ಶಿಕ್ಷೆಅನುಭವಿಸುವ ಸ್ಥಳಗಳಲ್ಲ ಅವು ಪರಿವರ್ತನೆಯ ಆಗರಗಳಾಗಬೇಕು ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ



ಆಗಮಿಸಿದ್ದ ಬೆಳಗಾವಿಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ॥ ಭೀಮಾಶಂಕರ ಗುಳೇದ, ಐ.ಪಿ.ಎಸ್ ರವರು ಮಾತನಾಡಿ ಸಾಹಿತ್ಯ ಎಂಬುದು ಕೇವಲ ಬರವಣಿಗೆಯಲ್ಲ, ಮನುಷ್ಯರಲ್ಲಿ ಪರಿವರ್ತನೆಯ ಶಕ್ತಿಯಾಗಿದೆ, ತಪ್ಪು ಮಾಡುವುದು ಮಾನವನ ಸಹಜ ಗುಣ ಆದರೆ ಮಾಡಿದ ತಪ್ಪನ್ನು ಪುನರಾವರ್ತಿಸದೇ ಉತ್ತಮ ಪ್ರಜೆಗಳಾಗಿ ಬಾಳಿರಿ. ಕಾರಾಗೃಹದಲ್ಲಿರುವ ಸಮಯವನ್ನು ಸದುಪಯೋಗ ಪಡಿಸಿಕೊಂಡು ಓದು, ಬರಹ, ಯೋಗ, ಧ್ಯಾನ ಹಾಗೂ ಧನಾತ್ಮಕ ಚಿಂತನೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬಿಡುಗಡೆಯ ನಂತರ ಸಮಾಜದಲ್ಲಿ ಹಾಗೂ ತಮ್ಮ ಕುಟುಂಬ ವರ್ಗದವರಿಗೆ ಸಾಹಿತ್ಯದ ಮಹತ್ವ ತಿಳಿಸಬೇಕು ಎಂದು ಹೇಳಿದರು.

ಹಿರಿಯ ಸಾಹಿತಿಗಳಾದ ಶ್ರೀ ಸರಜೂ ಕಾಟ್ಕರ್ ಮಾತನಾಡಿ ಜೀವನದಲ್ಲಿ ಆಕಸ್ಮಿಕವಾಗಿ ಘಟಿಸಿದ ಘಟನೆಗೆ ಒಳಗಾಗಿ ತಾವೂ ಇಲ್ಲಿಗೆ ಬಂದಿರಬಹುದು ಆದ-ರೆ ಇದು ತಾತ್ಕಾಲಿಕ ಮಾತ್ರ ಇಲ್ಲಿಂದ ಬಿಡುಗಡೆಯಾಗಿ ಹೋಗಲೇ ಬೇಕು. ಕಾರಣ ತಾವೂ ಭೂತಕಾಲದ ಬಗ್ಗೆ ಚಿಂತಿಸದೇ ತಮ್ಮ ಭಾವಿ ಜೀವನದ ಬಗ್ಗೆ ರುಪೂರೇಶೆಗಳನ್ನು ಹಾಕಿಕೊಳ್ಳಬೇಕು. ದಾನವನನ್ನು ಮಾನವನನ್ನಾಗಿಸುವ ಶಕ್ತಿ ಸಾಹಿತ್ಯಕ್ಕೆ ಇದೆ ಕಾರಣ ತಾವೆಲ್ಲ ಸಾಹಿತ್ಯ ಓದುವದನ್ನು ದಿನನಿತ್ಯದ ಚಟುವಟಿಕೆಗಳಲ್ಲಿ ಒಂದನ್ನಾಗಿಸಿಕೊಳ್ಳಬೇಕು.

ಅಧ್ಯಕ್ಷತೆಯನ್ನು ವಹಿಸಿದ್ದ ಕಾರಾಗೃಹದ ಪ್ರಭಾರಿ ಮುಖ್ಯ ಅಧೀಕ್ಷಕರಾದ ಶ್ರೀ ವಿ.ಕೃಷ್ಣಮೂರ್ತಿ ಇವರು ಮಾತನಾಡಿ ಕಾರಾಗೃಹ ಇಲಾಖೆಯು ನಿವಾಸಿಗಳಲ್ಲಿ ಅಡಗಿರುವ ಉತ್ತಮ ಕಲೆಗಳನ್ನು, ಕೌಶಲ್ಯಗಳಿಗೆ ಪ್ರೋತ್ಸಾಹ ನೀಡುತ್ತಿದ್ದು, ಅವರಿಗೆ ವಿವಿಧ ಕೌಶಲ್ಯ ತರಬೇತಿಗಳು ಮನಃಪರಿವರ್ತನೆಯ ಕಾರ್ಯಕ್ರಮಗಳು ಯೋಗ, ಧ್ಯಾನದಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಇಂದಿನ ಕಾರ್ಯಕ್ರಮ ನಿವಾಸಿಗಳಲ್ಲಿ ಓದಿನ ಕೌಶಲ್ಯ ಹೆಚ್ಚಿಸುವಲ್ಲಿ ತುಂಬಾ ಉಪಯುಕ್ತವಾಗಿದೇ ಎಂದು ಹೇಳಿದರು. ಕಾರಾಗೃಹದ ಸಿಬ್ಬಂದಿಗಳಾದ ಶ್ರೀ ರಾಘವೇಂದ್ರ ಪೂಜಾರ ಹಾಗೂ ನಿವಾಸಿಗಳಾದ ಅರುಣಕುಮಾರ ಲಮಾಣಿ, ಮಹಾಂತೇಶ ಹೊಂಗಲ, ಪುಂಡಲೀಕ ಹಾಗೂ ಪ್ರಿಯಂಕಾ ಇವರುಗಳು ಸ್ವರಚಿತ ಕವನಗಳನ್ನು ವಾಚನ ಮಾಡಿದರು.


ವೇದಿಕೆಯಲ್ಲಿ ಕಾರಾಗೃಹದ ಮುಖ್ಯ ವೈದ್ಯಾಧಿಕಾರಿಗಳಾದ ಶ್ರೀ ಸಂಜಯ ಡುಮ್ಮಗೋಳ, ಸಹಾಯಕ ಅಧೀಕ್ಷಕರಾದ ಶ್ರೀ ಮಲ್ಲಿಕಾರ್ಜುನ ಕೊಣ್ಣೂರ ಹಾಗೂ ಜೈಲರ್‌ಗಳಾದ ಶ್ರೀ ರಾಜೇಶ ಧರ್ಮಟ್ಟಿ, ಬಸವರಾಜ ಭಜಂತ್ರಿ, ಶ್ರೀ ರಮೇಶ ಕಾಂಬಳೆ ಹಾಗೂ ಶ್ರೀ ಎಫ್.ಟಿ. ದಂಡ್ಯೆನ್ನವರ ಉಪಸ್ಥಿತರಿದ್ದರು. ಸಾಹಿತ್ಯ ಕಮ್ಮಟದ ಸಂಚಾಲಕರಾದ ಶ್ರೀ ಗಣೇಶ ಅಮಿನಗಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಸದಸ್ಯ ಸಂಚಾಲಕರಾದ ಡಾ॥ ಮೈತ್ರೇಯಿನಿ ಗದಿಗೆಪ್ಪಗೌಡರ ಸ್ವಾಗತಿಸಿದರು. ಕಾರಾಗೃಹದ ಉಪಾದ್ಯಾಯರಾದ ಶ್ರೀ ಎಸ್ ಎಸ್ ಯಾದಗುಡೆ ಕಾರ್ಯಕ್ರಮವನ್ನು ಸಂಯೋಜಿಸಿ ನಿರೂಪಿಸಿದರು.

## ಜಮಖಂಡಿ ಪ್ರಧಾನ ಅಂಚೆ ಕಛೇರಿ : ನಾಳೆ ವಹಿವಾಟಿಲ್ಲ

ಬಾಗಲಕೋಟೆ : ಐಟಿ 2.0 ಅಡಿಯಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸುತ್ತಿರುವ ಹಿನ್ನೆಲೆಯಲ್ಲಿ ಜಮಖಂಡಿ ಪ್ರಧಾನ ಅಂಚೆ ಕಛೇರಿ ಮತ್ತು ಅದರ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪ ಅಂಚೆ ಕಚೇ-ರಿಗಳಾದ ಬನಹಟ್ಟಿ ಎಸ್.ಓ, ಬನಹಟ್ಟಿ ಸೋಮವಾರಪೇಟೆ ಎಸ್.ಓ, ಬೆಳಗಲಿ ಎಸ್.ಓ, ಬೀಳಗಿ ಎಸ್.ಓ, ಗಲಗಲಿ ಎಸ್.ಓ, ಹಿಪ್ಪರಗಿ ಎಸ್.ಓ,ಹುನ್ನೂರು ಎಸ್.ಓ ಜಮಖಂಡಿ ಗಿರೀಶನಗರ ಎಸ್.ಓ, ಜಮಖಂಡಿ ಹೆಚ್.ಓ, ಕಲಾದಗಿ ಎಸ್.ಓ ಕೊಣ್ಣೂರು ಎಸ್.ಓ ಲೋಕಾಪುರ ಎಸ್.ಓ, ಮಹಾಲಿಂಗಪುರ ಎಸ್.ಓ, ಮುಧೋಳ ವಿಸ್ತರಣೆ ಎಸ್.ಓ,, ಮುಧೋಳ ಎಸ್.ಓ, ರಬಕವಿ ಎಸ್.ಓ, ರಬಕವಿ ಟೌನ್ ಎಸ್.ಓ, ಸಮೀರವಾಡಿ ಎಸ್.ಓ, ಸಾವಳಗಿ ಎಸ್.ಓ ಮತ್ತು ತೇರದಾಳ ಅಂಚೆ ಕಛೇರಿಗಳು ಜೂನ್ 21 ರಂದು ಯಾವುದೇ ವಹಿವಾಟು ನಡೆಸುವುದಿಲ್ಲ ಎಂದು ಬಾಗಲಕೋಟೆ ಅಂಚೆ ವಿಭಾಗದ ಅಂಚೆ ಅಧೀಕ್ಷಕರಾದ ಹೆಚ್ ಬಿ ಹಸಬಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ಸರಕಾರಿ ಹುದ್ದೆಯಿಂದ ಒಂದು ಕುಟುಂಬದ ಶೈಕ್ಷಣಿಕ ಹಾಗೂ ಆರ್ಥಿಕ ಮಟ್ಟದ ಸುಧಾರಣೆ ಆಗುತ್ತದೆ

# ಅಭ್ಯುದಯ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಸಂಯೋಜಿತ ಪದವಿಗಳ ಕುರಿತು 2 ದಿನದ ಉಚಿತ ಕಾರ್ಯಾಗಾರ



ಮುದ್ದೇಬಿಹಾಳ ; ಸರಕಾರಿ ಹುದ್ದೆಯಿಂದ ಒಂದು ಕುಟುಂಬದ ಶೈಕ್ಷಣಿಕ ಹಾಗೂ ಆರ್ಥಿಕ ಮಟ್ಟದ ಸುಧಾರಣೆ ಆಗುತ್ತದೆ ಎಂದು ಧಾರವಾಡ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಡಾ.ಹೆಚ್ ಬಿ ವಾಲಿಕಾರ ಹೇಳಿದರು ಅವರು ಗುರುವಾರ ಪಟ್ಟಣದ ಹೋಳ್ಕರ ಬಡಾವಣೆಯ ಅಭ್ಯುದಯ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಸಮಾಜ ಸೇವಕ ಶಿಕ್ಷಣ ಪ್ರೇಮಿ ಮಲ್ಲಿಕಾರ್ಜುನ ಮದರಿ ನೇತೃತ್ವದಲ್ಲಿ ಸಂಯೋಜಿತ ಪದವಿಗಳ ಕುರಿತು 2ದಿನದ ಉಚಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು ಬಿಎ ,ಬಿಎಸ್ಸಿ, ಬಿಕಾಂ ಪಠ್ಯ ಕ್ರಮದಿಂದ ಡಿಗ್ರಿ ಸಿಗುತ್ತದೆ ಈ ಡಿಗ್ರಿಯನ್ನುವುದು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪ್ರವೇಶಪತ್ರವಿದ್ದಂತೆ ಸ್ಪರ್ಧೆಗೆ ಅವಕಾಶ ಸಿಗುತ್ತದೆ ಇದಕ್ಕೆ ಮಲ್ಲಿಕಾರ್ಜುನ ಮದರಿಯವರು ಶಿಕ್ಷಣದ ಬಂಡೆ ತಯಾರಿ ಮಾಡಿದ್ದಾರೆ ನುರಿತ ಶಿಕ್ಷಣ ತಜ್ಞರು ತರಬೇತಿಯನ್ನು ನೀಡುತ್ತಾರೆ ಅದಕ್ಕೆ ಅಭ್ಯುದಯ ಕಾಲೇಜಿನಲ್ಲಿ ಹೈಬ್ರೀಡ್ ಕ್ಲಾಸ್ ( ಸ್ಮಾರ್ಟ್ ಕ್ಲಾಸ್) ರೆಡಿ ಮಾಡಿದ್ದಾರೆ ಈ ಮೂಲಕ ಈ ಕಾಲೇಜಿನ ವಿದ್ಯಾರ್ಥಿಗಳು ಸಂಯೋಜಿತ ಪದವಿಗಳ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಪಡೆಯಬಹುದು ಹಾಗೆ ಇತರೆ ಕಾಲೇಜಿನ ಅಥವಾ ಡಿಗ್ರಿ ವಿದ್ಯಾರ್ಥಿಗಳಿಗೆ ಸಹ ಪ್ರತ್ಯೇಕ ಕ್ಲಾಸ್ ನ ವ್ಯವಸ್ಥೆ ಸಹ ಆಗಲಿದೆ ಎಂದರು

ಸಂಸ್ಥೆಯ ಕಾರ್ಯದರ್ಶಿ ಮಲ್ಲಿಕಾರ್ಜುನ ಮದರಿ ಮಾತನಾಡಿ ಡಾ.ಹೆಚ್ ಬಿ ವಾಲಿಕಾರ ಅವರ ಮಾರ್ಗದರ್ಶನದಿಂದ ಈ ಭಾಗದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲು ಸ್ಮಾರ್ಟ್ ಕ್ಲಾಸ್ ಗಳನ್ನು ಆರಂಭಿಸಲಾಗುತ್ತಿದೆ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಉನ್ನತ ಹುದ್ದೆಗಳನ್ನು ಪಡೆಯಲು ಸಾದ್ಯವೆಂದರು ಧಾರವಾಡ ಜೀನಿಯಸ್ ಅಕಾಡೆಮಿ ಯ ಸಿದ್ದಣ್ಣ ದಳವಾಯಿ , ಪ್ರೀಯಾಂಕ ಪತ್ತಾರ ಪಿಎಸ್ಐ ಪಿಡಿಓ ಕಾನ್ಸಟೇಬಲ್ ಬ್ಯಾಕಿಂಗ್ ಆರ್ ಅರ್ ಬಿ ಎಸ್ ಎಸ್ ಸಿ ಹುದ್ದೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು,ಪ್ರಾಂಶುಪಾಲ ಆರ್ ಎಸ್ ಜಡಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

> ಮುದ್ದೇಬಿಹಾಳ ಪಟ್ಟಣದ ಎಂಜಿವಿಸಿ ಕಾಲೇಜು ವಿಬಿಸಿ ಹೈಸ್ಕೂಲ್ ಶಿಕ್ಷಣದಿಂದ ನನ್ನನ್ನು ಸೇರಿದಂತೆ ಅನೇಕರು ವಿದ್ಯಾವಂತರಾಗಿದ್ದಾರೆ ನಾನು ಇಲ್ಲಿ ಶಿಕ್ಷಣ ಕಲಿಯುವಾಗಿನ ಪರಿಸರ ವಾತಾವರಣ ಗಿಡದ ಕೆಳಗೆ ಕುಳಿತು ಓದಿದ ಹಾಗೂ ಕಾಲೇಜಿನ ಓದಿಗೆ ಲೈಬ್ರರಿ ಅವಕಾಶ ನೀಡಿದ ಪರಿಯ ಪ್ರೇರಣೆಯಿಂದ ಧಾರವಾಡ ವಿಶ್ವವಿದ್ಯಾಲಯದಲ್ಲಿ 247 ಲೈಬ್ರರಿ ಹಾಗೂ 6 ಎಕರೆಯಲ್ಲಿ ಗ್ರೀನ್ ಲ್ಯಾಬರಿ ಮಾಡಲು ಸಾಧ್ಯವಾಯಿತು ಮುದ್ದೇಬಿಹಾಳ ಮರೆಯಲು ಸಾಧ್ಯವಿಲ್ಲ;
> **ಡಾ.ಹೆಚ್ ಬಿ ವಾಲಿಕಾರ ನಿವೃತ್ತ ಕುಲಪತಿಗಳು**

ಕಾರ್ಯಕ್ರಮದಲ್ಲಿ ಸೈನ್ಸ್, ಬಿಎಸ್ಸಿ ಸಿಇಟಿ,ನೀಟ್ ನಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮತಿ ಶ್ರೀದೇವಿ ಮದರಿ, ಮಹಾದೇವಿ ಮದರಿ,ಶ್ರದ್ಧಾ ಮದರಿ, ಸೌಮ್ಯ ಮದರಿ ಕಿರಣ್ ಮದರಿ, ಶೇಖಪ್ಪ ಮೇಟಿ ,ಬಸವರಾಜ ಬಿಜ್ಜೂರ, ಎಂಎಂ ಧನ್ನೂರ, ಪ್ರಶಾಂತ ಬಿರಾದಾರ ಎಸ್ ರಂಗಸ್ವಾಮಿ, ವಿರೇಶ ಹೂಲಿಕೇರಿ, ರವಿ ಚಲವಾದಿ, ರವಿ ಜಗಲಿ, ಚಂದ್ರು ಜೋಗಿನ, ಬಸವರಾಜ ಗೂಡಲಮನಿ, ಸೇ–ರಿದಂತೆ ಕಾರ್ಯಾಗಾರದಲ್ಲಿ ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು ಬಿ.ಜಿ ಬಿರಾದಾರ ನಿರೂಪಿಸಿ ವಂದಿಸಿದರು .

> ಮುದ್ದೇಬಿಹಾಳದಲ್ಲಿ ಶಿಕ್ಷಣದ ಕ್ರಾಂತಿ ಮಾಡಿದವರಲ್ಲಿ ಮೊದಲಿಗರು ಮಹಾದಾನಿ ಗಂಗಮ್ಮ ಚಿನಿವಾರ ಅವರು ಎರಡನೇ ಸ್ಥಾನದಲ್ಲಿ ಮಲ್ಲಿಕಾರ್ಜುನ ಮದರಿಯವರು ಇದ್ದಾರೆ ಯಾರಲ್ಲಿ ಶಿಕ್ಷಣ ಸಂಸ್ಥೆಗೆ ಕೈಚಾಚದೆ ಸ್ವಂತ ದುಡಿಮೆಯಿಂದ ಸಂಸ್ಥೆ ಹುಟ್ಟುಹಾಕಿದ್ದಾರೆ ಅವರಲ್ಲಿ ಕಾರ್ಯ ಕ್ಷಮತೆ ಇದೆ ;
> **ಡಾ.ಹೆಚ್ ಬಿ ವಾಲಿಕಾರ ನಿವೃತ್ತ ಧಾರವಾಡ ವಿವಿ ಕುಲಪತಿಗಳು**

****

# ಜಿಲ್ಲೆಯಲ್ಲಿ ಬಿತ್ತನೆ ಬೀಜ - ರಸಗೊಬ್ಬರದ ಅಗತ್ಯ ದಾಸ್ತಾನು ಹೊಂದಲಾಗಿದೆ: ಮಂಜುನಾಥ ಅಂತರವಳ್ಳಿ

ಧಾರವಾಡ ಜೂನ್ 19: ಧಾರವಾಡ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಸುಮಾರು 2,81,595 ಹೆಕ್ಟೇರ್ ಪ್ರದೇಶ ಬಿತ್ತನೆ ಕ್ಷೇತ್ರದ ಗುರಿ ಹೊಂದಿದ್ದು, ಈಗಾಗಲೇ ಶೇ. 67.72 ರಷ್ಟು ಅಂದರೆ 1,90,700 ಹೆಕ್ಟೇರ್ ನಷ್ಟು ಬಿತ್ತನೆ ಆಗಿರುತ್ತದೆ. ಕಳೆದ 3, 4 ದಿನದಿಂದ ಮಳೆಯು ಸ್ವಲ್ಪ ಬಿಡುವನ್ನು ನೀಡಿರುವುದರಿಂದ ಬಿತ್ತನೆ ಕಾರ್ಯ ಚುರುಕಾಗಿ ಮುಂದುವರೆದಿದ್ದು ಶೇ. 100 ರಷ್ಟು ಬಿತ್ತನೆಯಾಗುವ ಸಾಧ್ಯತೆ ಇದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಈಗಾಗಲೇ ಸೋಯಾಅವರೆ, ಮೆಕ್ಕೆಜೋಳ, ಹೆಸರು, ಉದ್ದು, ಮತ್ತು ಶೇಂಗಾ ಸೇರಿದಂತೆ ವಿವಿಧ ಬಿತ್ತನೆ ಬೀಜಗಳನ್ನು ಜಿಲ್ಲೆಯ ಒಟ್ಟು 31 ಬೀಜ ವಿತರಣಾ ಕೇಂದ್ರಗಳ ಮೂಲಕ ಇಲಾಖೆಯು ಸಹಾಯಧನದಡಿ ರೈತರಿಗೆ ವಿತರಿಸಲಾಗುತ್ತದೆ.

ಬಿತ್ತನೆ ಬೀಜ ವಿತರಣೆ: ಬೀಜ ವಿತರಿಸುತ್ತಿದ್ದು, 8,572 ಕ್ವಿಂ. ರಷ್ಟು ಸೋಯಾಅವರೆ, 2,138 ಕ್ವಿಂ, ನಷ್ಟು ಮೆಕ್ಕೆಜೋಳ, 678 ಕ್ವಿಂ. ನಷ್ಟು ಹೆಸರು, ಹಾಗೂ ವಿವಿಧ ಬೀಜಗಳನ್ನು ಒಳಗೊಂಡಂತೆ ಒಟ್ಟು 11,982 ಕ್ವಿಂ. ನಷ್ಟು ಬಿತ್ತನೆ ಬೀಜಗಳು ವಿತರಣೆಯಾಗಿರುತ್ತವೆ. ಅಲ್ಲದೇ ಮೆಕ್ಕೆಜೋಳ 652, ಹೆಸರು 382, ಸೋಯಾಅವರೆ 291 ಕ್ವಿಂ ಹಾಗೂ ವಿವಿಧ ಬಿತ್ತನೆ ಬೀಜಗಳನ್ನು ಒಳಗೊಂಡಂತೆ ಒಟ್ಟು 1,918 ಕ್ವಿಂ ನಷ್ಟು ಬೀಜಗಳನ್ನು ದಾಸ್ತಾನಿಕರಿಸಲಾಗಿದೆ. ಜಿಲ್ಲೆಯಲ್ಲಿ ಬಿತ್ತನೆ ಬೀಜದ ಬೇಡಿಕೆಯನ್ವಯ ಸಾಕಷ್ಟು ದಾಸ್ತಾನು ಇದ್ದು ಯಾವುದೇ ಕೊರತೆ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ರಸಗೊಬ್ಬರ ವಿತರಣೆರ: ಮುಂಗಾರು ಹಂಗಾಮಿಗೆ ಒಟ್ಟು 49,471 ಮೆ.ಟನ್ ನಷ್ಟು ವಿವಿಧ ರಸಗೊಬ್ಬರಗಳ ಬೇಡಿಕೆಯನ್ನು ಹೊಂದಿದೆ. ಜೂನ್ ಅಂತ್ಯಕ್ಕೆ ಯೂರಿಯಾ–11510, ಡಿ.ಎ.ಪಿ–7636, ಎಂ.ಓ.ಪಿ–404, ಕಾಂಪ್ಲೇಕ್ಸ್–3372 ಮೆ. ಟನ್ ಗಳಷ್ಟು ಬೇಡಿಕೆ ಇದ್ದು ಈಗಾಗಲೇ ಯೂರಿಯಾ–14835, ಡಿ.ಎ.ಪಿ–8137, ಎಂ.ಓ.ಪಿ–2317, ಹಾಗೂ ಕಾಂಪ್ಲೇಕ್ಸ್–19421 ಮೆ.ಟನ್ ಗಳಷ್ಟು ಆರಂಭಿಕ ಶಿಲ್ಕು ಸೇರಿ ಪೂರೈಕೆಯಾಗಿರುತ್ತದೆ.

ಜಿಲ್ಲೆಯಲ್ಲಿ ಒಟ್ಟು 2,878 ಮೆ.ಟನ್, ಯೂರಿಯಾ, 2,290 ಮೆ.ಟನ್, ಡಿ.ಎ.ಪಿ, 9,082 ಮೆ.ಟನ್, ಕಾಂಪ್ಲೇಕ್ಸ್ ರಸಗೊಬ್ಬರ ಸೇರಿ ಒಟ್ಟು 15,608 ಮೆ. ಟನ್ ನಷ್ಟು ರಸಗೊಬ್ಬರ ದಾಸ್ತಾನು ಇರುತ್ತದೆ ಎಂದು ಅವರು ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಅತಿ ಹೆಚ್ಚಿನ ಪಾಲು ಹೆಸರು, ಮೆಕ್ಕೆಜೋಳ, ಸೋಯಾಅವರೆ, ಶೇಂಗಾ ಮತ್ತು ಇತರೆ ಬೆಳೆಗಳನ್ನು ಬೆಳೆಯುತ್ತಿದ್ದು, ಬೆಳೆಯ ಬೇಡಿಕೆಯನ್ವಯ ವಿವಿಧ ರಸಗೊಬ್ಬರಗಳನ್ನು ಹಂತ ಹಂತವಾಗಿ ಪೂರೈಸಲಾಗುತ್ತಿದೆ. ಹಾಗಾಗಿ ಕಳೆದ ವಾರದಲ್ಲಿ ಸಂಭವಿಸಿದ ಅತೀವೃಷ್ಟಿ, ಮಣ್ಣಿನ ಫಲವತ್ತತೆ ಹಾಗೂ ಬೆಳೆಗಳ ಬೇಡಿಕೆಯನ್ನು ಗಮನದಟ್ಟುಕೊಂಡು ಇಲಾಖೆಯು ಜಿಲ್ಲೆಯಲ್ಲಿ ವಿವಿಧ ರಸಗೊಬ್ಬರಗಳನ್ನು ಪೂರೈಸುತ್ತಿದೆ. ಪ್ರಸ್ತುತ ಸಂದರ್ಭದಲ್ಲಿ ಯಾವುದೇ ರಸಗೊಬ್ಬರ, ಬೀಜಗಳ ಬಿತ್ತನೆ ಕೊರತೆ ಇರುವುದಿಲ್ಲ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಕಾರಿ ಶಾಲೆಯ ಶಿಕ್ಷಕರಾಗಿರುವದು ಹೆಮ್ಮೆವಿದೆ



ಮುಧೋಳ: ಆಶ್ಚರ್ಯ ಮತ್ತು ಕುತೂಹಲಭರೀತ ಅಂದಿನ ಪ್ರಾಥಮಿಕ ಹಂತದಲ್ಲಿ ಪಾಠ, ಆಟೋಟಗಳ ಮೆಲಕು ಹಾಕಿ ಸಂತಸ ಪಡೆಯಲು 28.ವರ್ಷ ನಂತರ ಸೇರಿರುವ ವಿದ್ಯಾರ್ಥಿ/ಗುರುಗಳ ಸಮ್ಮಿಲನ ನಮ್ಮೆಲ್ಲರಿಗೂ ಸಂತಸ ತಂದಿದೆ ಎಂದು ನಿವೃತ್ತ ಶಿಕ್ಷಕ ಬಿ.ಎಂ. ಜಲಗೇರಿ ಹೇಳಿದರು.

ನಗರದ ಕರ್ನಾಟಕ ಫಂಕ್ಷನ್ ಹಾಲ್‌ನಲ್ಲಿ ಸರಕಾರಿ ಜೈಹಿಂದ ಪ್ರಾಥಮಿಕ ಶಾಲೆಯ 1994–2001.ನೇ ಸಾಲಿನ ವಿದ್ಯಾರ್ಥಿಗಳ ಸ್ನೇಹ ಸಮ್ಮೇಲನ ಹಾಗು ಗುರುವಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಜಿ.ಬಿ. ಜೋಶಿ ಮಾತನಾಡಿ, ಹಿಂದುಳಿದ ಏರಿಯಾದಲ್ಲಿರುವ ಶಾಲೆಗೆ ಬಡ, ದಡ್ಡ ವಿದ್ಯಾರ್ಥಿಗಳನ್ನು ಜಾಣರಾಗಿ ಮಾಡುವದು ಸರಕಾರಿ ಶಾಲೆಯ ಶಿಕ್ಷಕರಾಗಿರುವದು ಹೆಮ್ಮೆವಿದೆ, ನೀವು ಜಾಣರಾಗಿ ಈಗ ಪಡೆದಿರುವ ನಮಗಿಂತ ಉನ್ನತ ಹುದ್ದೆ ಕಂಡು ಮತ್ತು ಬೇರೆ ಇಲಾಖೆ ನೌಕರರಗಿಂತ ನಿಮ್ಮಿಂದ ನಮಗೆ ಸಿಗುವ ಗೌರವ ಸಂತಸ ಉಂಟು ಮಾಡುತ್ತದೆ ಎಂದರು.

ಸನ್ಮಾನ ಪರ ಶಿಕ್ಷಕಿಯರಾದ ಆಯೇಶಾ ಬಿದರಿ, ಸಾವಿತ್ರಿಬಾಯಿ ಮೋದಿ, ಎಂ.ಎಸ್. ಜಾಧವ, ಎಸ್. ಎಂ. ಕಡಪಟ್ಟಿ, ಎಸ್.ಆರ್. ಪಾಟೀಲ ಶಿಕ್ಷಕ ಜಿ.ಜಿ. ಹಿರೇಮಠ ತಮ್ಮ ಅನಿಸಿಕೆ ಹಂಚಕೊಂಡು ಶಿಕ್ಷಕರಿಗೆ ನಿಜವಾದ ಶಕ್ತಿ ಎಂದರೆ ವಿದ್ಯಾರ್ಥಿ ವೃಂದ, ನಮಗೆ ನೀಡುವ ಗೌರವ ನಿಮ್ಮ ತಂದೆ–ತಾಯಿಗಳಿಗೂ ನೀಡಿ ಎಂದರು.

ಮೆರವಣಿಗೆ : ಬೆಳಿಗ್ಗೆ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದಲ್ಲಿ ಅಭಿಷೇಕ, ಪೂಜೆ ನೆರವೇರಿಸಿ, ಪ್ರಾರ್ಥನೆ, ರಾಷ್ಟ್ರಗೀತೆ ಹಾಡಿ, ಶಿಕ್ಷಕರಿಂದ ಹಾಜರಾತಿ, ಆಟೋಟಗಳ ಮೆಲಕು ಹಾಕಿ ನಂತರ ತೆರೆದ ವಾಹನದಲ್ಲಿ ಶಿಕ್ಷಕರ ಭವ್ಯ ಮೆರವಣಿಗೆಯು ಕಾರ್ಯಕ್ರಮದ ವೇದಿಕೆವರೆಗೆ ಪುಷ್ಪಾರ್ಚನೆಗೈದು ಬರಮಾಡಿಕೊಂಡರು.

ನಿವೃತ್ತ ಶಿಕ್ಷಕ ಸಿ.ಸಿ. ಹಿರೇಮಠ, ಜಿ.ಜಿ. ಹಿರೇಮಠ, ಡಿ.ಸಿ. ಹಿರೇಮಠ, ಮಲ್ಲು ಬಾಗಿ, ವಾಸು ಮೇತ್ರಿ, ಶ್ರೀದೇವಿ ತೇಲಿ, ಗಣೇಶ ಮಶೆಟ್ಟಿ, ಶಂಕರ ಮೇತ್ರಿ, ಅರ್ಜುನ್ ಹದಗಲ, ಗೀರಿಶ ಕಳ್ಳಿಮನಿ, ಚಂದ್ರು ಹಿರಲಕ್ಕಿ, ಹಣಮಂತ ಮಾಂಗ, ಅಪ್ಪು ದೊಡಮನಿ, ರೇಷ್ಮಾ ಪೂಜಾರಿ, ರಾಧಾ ಮಾಂಗ, ಬಂದೇನವಾಜ ಫಡಕೆ, ಇತರರಿದ್ದರು.

# ಜಿಲ್ಲೆಯ 15301 ಜನ ಸರಕಾರಿ ನೌಕರರು ವೇತನ ಪ್ಯಾಕೇಜ್ ಖಾತೆಗೆ ಒಳಪಟ್ಟಿದ್ದು, ಶೇ.76 ರಷ್ಟು ಸಾಧನೆ

## ಉಳಿದವರು ಖಾತೆ ಹೊಂದಲು ಇಲಾಖೆಗಳ ಜಿಲ್ಲಾ ಮುಖ್ಯಸ್ಥರು ತುರ್ತು ಕ್ರಮವಹಿಸಬೇಕು: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ರಾಜ್ಯ ಸರಕಾರಿ ನೌಕರರ ಮತ್ತು ಅವಲಂಬಿತ ಕುಟುಂಬ ಸದಸ್ಯರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ವಿವಿಧ ಬ್ಯಾಂಕುಗಳಲ್ಲಿ ಒದಗಿಸುವ "ಸಂಬಳ ಪ್ಯಾಕೇಜ್"ಗಳ ಅಡಿಯಲ್ಲಿ ಖಾತೆಗಳನ್ನು ತೆರೆಯುವುದು ಮತ್ತು ಆಯ್ಕೆ ಮಾಡಿಕೊಳ್ಳುವ ಕಾರ್ಯವು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಪ್ರಭುದೇವ ಎನ್.ಜಿ. ಅವರ ಸಹಕಾರದಲ್ಲಿ ಶೇ.76 ರಷ್ಟು ಸಾಧನೆ ಯಾಗಿದೆ. ಜಿಲ್ಲೆಯ ಸುಮಾರು 15301 ಸರಕಾರಿ ನೌಕರರು ಇಲ್ಲಿಯವರೆಗೆ ಸಂಬಳ ಪ್ಯಾಕೇಜ್ ಖಾತೆ ಹೊಂದಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲೆಯ ಸರಕಾರಿ ನೌಕರರ ಮತ್ತು ಅವರ ಕುಟುಂಬದವರ ಹಿತರಕ್ಷಣೆ ದೃಷ್ಟಿಯಿಂದ ಇದೊಂದು ಮಹತ್ವದ ಯೋಜನೆಯಾಗಿದೆ. ಸರಕಾರಿ ಯೋಜನೆ, ಸೌಲಭ್ಯಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಹಾಗೂ ಅನೇಕ ಒತ್ತಡ, ಆಯಾಸಗಳ ಮಧ್ಯದಲ್ಲಿಯೂ ಕರ್ತವ್ಯ ನಿರ್ವಹಿಸುವ ಅಧಿಕಾರಿ, ಸಿಬ್ಬಂದಿಗಳ ಸುರಕ್ಷತೆ ದೃಷ್ಟಿಯಿಂದ ಜಿಲ್ಲಾಡಳಿತ ನೌಕರ ಸ್ನೇಹಿ ಆಡಳಿತ ನಿರ್ವಹಿಸುತ್ತಿದೆ ಎಂದು ಅವರು ತಿಳಿಸಿದ್ದಾರೆ.



ಈಗಾಗಲ್ಲೇ ಜಿಲ್ಲಾ ಮಾಹಿತಿ ಕೇಂದ್ರದಿಂದ ಜಿಲ್ಲೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಎಚ್.ಆರ್.ಎಂ.ಎಸ್. ಹೊಂದಿರುವ ಸುಮಾರು 22,000 ಸರಕಾರಿ ನೌಕರರ ಮಾಹಿತಿಯನ್ನು ಜಿಲ್ಲಾ ಅಗ್ರಣೀಯ ಬ್ಯಾಂಕ್‌ಗೆ ನೀಡಲಾಗಿತ್ತು. ಅದರಲ್ಲಿ ಇಲಾಖೆ ಅಧಿಕಾರಿಗಳು ಸ್ಪಂದಿಸಿದಂತೆ 16000 ಜಿಲ್ಲಾ ಸರ್ಕಾರಿ ಉದ್ಯೋಗಿಗಳು ಸ್ಯಾಲರಿ ಪ್ಯಾಕೆಜ್‌ಗೆ ಅರ್ಹರಾಗಿರುತ್ತಾರೆ. ಈಗಾಗಲೇ ಎಸ್‌ಬಿಐ ನಲ್ಲಿ 10182, ಕೆನರಾ ಬ್ಯಾಂಕ್ 2650, ಬ್ಯಾಂಕ್ ಆಫ್ ಬರೋಡಾ ದಲ್ಲಿ 2469 ಖಾತೆಗಳನ್ನು ಪರಿವರ್ತಿಸಲಾಗಿದೆ. ಉಳಿದ ಖಾತೆಗಳನ್ನು ಆದಷ್ಟು ಬೇಗ ಪರಿವರ್ತಿಸಲಾಗುವುದು. ಕೆಲವು ಸರಕಾರಿ ನೌಕರರು ಖಾಸಗಿ ಬ್ಯಾಂಕ್‌ಗಳಲ್ಲಿ ವೇತನ ಪಾವತಿ ಖಾತೆ ಹೊಂದಿದ್ದು, ಅವರು ಸಹ ಸರಕಾರಿ ಬ್ಯಾಂಕ್‌ಗಳಿಗೆ ತಮ್ಮ ವೇತನ ಖಾತೆಗಳನ್ನು ಬದಲಾಯಿಸಿಕೊಂಡರೆ ಅವರಿಗೂ ಅನುಕೂಲವಾಗುತ್ತದೆ. ಕೆಲವು ಸರಕಾರಿ ನೌಕರರ ವೇತನ ಪಾವತಿ ಖಾತೆಗಳನ್ನು ಬ್ಯಾಂಕ್‌ನಿಂದ ಬ್ಯಾಂಕ್‌ಗೆ ಬದಲಾವಣೆ ಮಾಡುವಲ್ಲಿ ತಾಂತ್ರಿಕ ಸಮಸ್ಯೆಗಳಿದ್ದು, ಅಂತಹ ಅಧಿಕಾರಿ, ಸಿಬ್ಬಂದಿಗಳು ತಮ್ಮ ಬ್ಯಾಂಕ್‌ಗಳಿಗೆ ಭೇಟಿ ನೀಡಿ, ಶೀಘ್ರವಾಗಿ ಸರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ರಾಜ್ಯ ಸರಕಾರಿ ನೌಕರರ ಮತ್ತು ಅವಲಂಬಿತ ಕುಟುಂಬ ಸದಸ್ಯರ ಹಿತಾಸಕ್ತಿಗಳನ್ನು ರಕ್ಷಿಸುವ ಸಲುವಾಗಿ ವಿವಿಧ ಬ್ಯಾಂಕುಗಳಲ್ಲಿ ಒದಗಿಸುವ "ಸಂಬಳ ಪ್ಯಾಕೇಜ್"ಗಳ ಅಡಿಯಲ್ಲಿ ಖಾತೆಗಳನ್ನು ತೆರೆಯುವುದು ಮತ್ತು ಆಯ್ಕೆ ಮಾಡಿಕೊಳ್ಳುವುದನ್ನು ಎಲ್ಲಾ ಅಧಿಕಾರಿ, ನೌಕರರಿಗೆ ಕಡ್ಡಾಯಗೊಳಿಸಿ, ಈಗಾಗಲೇ ಆದೇಶಿಸಲಾಗಿದೆ.

ಜಿಲ್ಲೆಯಲ್ಲಿನ ಪ್ರತಿ ಸರಕಾರಿ ನೌಕರ ಸಂಬಳ ಪ್ಯಾಕೇಜ್ ಖಾತೆ ಹೊಂದಿ, ಅದರ ಪ್ರಯೋಜನ ಪಡೆಯಬೇಕು. ಆದ–ದ್ದರಿಂದ ಜಿಲ್ಲೆಯ ಎಲ್ಲ ಇಲಾಖೆಗಳು ಜಿಲ್ಲಾ ಮುಖ್ಯಸ್ಥರು ತಮ್ಮ ಇಲಾಖೆಯ ಜಿಲ್ಲಾ, ತಾಲೂಕು, ಗ್ರಾಮಮಟ್ಟದಲ್ಲಿರುವ ಡಿ.ಡಿ.ಓ ಗಳ ಮೂಲಕ ಪ್ರತಿ ನೌಕರನ ವೇತನ ಪಾವತಿ ಖಾತೆ ಸಂಬಳ ಪ್ಯಾಕೇಜ್ ಖಾತೆ ಆಗಿರುವದನ್ನು ಖಚಿತಪಡಿಸಿಕೊಳ್ಳಬೇಕು. ಒಂದು ವೇಳೆ ಅವರ ವೇತನ ಖಾತೆಯು ಸಂಬಳ ವೇತನ ಖಾತೆ ಆಗಿರದಿದ್ದಲ್ಲಿ ತಾವೇ ಖುದ್ದು ಮುತುವರ್ಜಿ, ಜವಾಬ್ದಾರಿ ವಹಿಸಿ ಮಾಡಿಸಬೇಕು.

ಪ್ರತಿ ಸರಕಾರಿ ನೌಕರನಿಗೆ ಸಂಬಳ ಪ್ಯಾಕೇಜ್ ಖಾತೆ ಮತ್ತು ಪಿ.ಎಂ.ಜೆ.ಜೆ.ಬಿ.ವೈ ಹಾಗೂ ಪಿ.ಎಂ.ಎಸ್.ಬಿ.ವೈ ವಿಮೆ ಮಾಡಿಸಿರುವ ಬಗ್ಗೆ ಈಗಾಗಲೇ ಜ್ಞಾಪನಾ ಪತ್ರ ಕಳುಹಿಸಲಾಗಿದೆ. ಈ ಬಗ್ಗೆ ಕ್ರಮವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

ರಾಜ್ಯದ ಎಲ್ಲಾ ಪೊಲೀಸ್ ವೇತನ ಪ್ಯಾಕೇಜ್ ಖಾತೆಗಳ ಸೌಲಭ್ಯ ನೀಡಲಾಗುತ್ತಿದ್ದು. ಇತ್ತೀಚಿಗೆ ಬೆಳಗಾವಿಯಲ್ಲಿ ಪೊಲೀಸ್ ಪ್ಯಾಕೇಜ್ ಖಾತೆ ಹೊಂದಿದ್ದ ಹುಬ್ಬಳ್ಳಿ ನಿವಾಸಿ ಆಗಿದ್ದ ಪೊಲೀಸ್ ಸಿಬ್ಬಂದಿ ಮರಣ ಹೊಂದಿದ್ದು. ಆ ಪೊಲೀಸ್ ಕುಟುಂಬಕ್ಕೆ 70 ಲಕ್ಷ ರೂಪಾಯಿ ಬ್ಯಾಂಕ್ ಆಫ್ ಬರೋಡ ವಿತರಿಸಿದೆ. ಇನ್ನು ಹೆಚ್ಚಿನ ಪೊಲೀಸ್ ಪ್ಯಾಕೇಜ್ ಖಾತೆಗಳನ್ನು ತೆರೆಯಲು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರು ಆಸಕ್ತಿವಹಿಸಿದ್ದು, ಇಲಾಖೆ ಮುಖ್ಯಸ್ಥರು ಅವರಿಗೆ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲಯೋಗ ಪ್ರಪಂಚ ಪ್ರಶಸ್ತಿ ಪ್ರಧಾನ



ಗೋಕಾಕ : ಇಲ್ಲಿನ ಶ್ರೀ ವಿವೇಕಾನಂದ ಯೋಗ ಕೇಂದ್ರದ ಯೋಗ ಗುರು ಆನಂದ ಸೋರಗಾಂವಿ ಅವರ ಮಾರ್ಗದರ್ಶನದಲ್ಲಿ ಸುಮಾರು ಮೂರು ವರ್ಷಗಳಿಂದ ಯೋಗ ತರಬೇತಿ ಪಡೆಯುತ್ತಿರುವ ಕು. ಅರಣ್ಯ ಲ ಹೋನಕೇರಿ ಹಾಗೂ ಕು ಪದ್ಮಶ್ರೀ ಲ ಹೋನಕೇರಿ ಇವರಿಗೆ ಮೂಡಲಗಿ ತಾಲೂಕಿನ ಶಿವಾಪೂರ (ಹ )ಗ್ರಾಮದ ಸ ಹಿ ಪ್ರಾ ಶಾಲೆಯಲ್ಲಿ ನಡೆದ ಕನ್ನಡ ಜಾನಪದ ಪರಿಷತ್ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಅನೇಕ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಗಳಲ್ಲಿ ಭಾಗವಹಿಸಿದನ್ನು ಗಮನಿಸಿ ಬಾಲಯೋಗ ಪ್ರಪಂಚ ಪ್ರಶಸ್ತಿ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಾಹಿತಿ ಬಾಲಶೇಖರ ಬಂದಿ,ಜನಪದ ಕಲಾವಿದ ಶಬ್ಬಿರ ಡಾಂಗೆ,ಮಕ್ಕಳ ಸಾಹಿತಿ ಸಂಗಮೇಶ ಗುಜಗೊಂಡ. ಕಜಾಪ ಜಿಲ್ಲಾಧ್ಯಕ್ಷ ಮೋಹನ ಗುಂಡ್ಲೂರ ಸೇರಿದಂತೆ ಅನೇರು ಇದ್ದರು.

# ಜೆಎಸ್‌ಎಸ್ ವಿಶೇಷಚೇತನರ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೊಪ್ಪಳ : 2025–26ನೇ ಸಾಲಿಗೆ ಅಖಿಲ ಭಾರತ ಮಟ್ಟದಲ್ಲಿ ವಿಶೇಷಚೇತನ ವಿದ್ಯಾರ್ಥಿ/ ವಿದ್ಯಾರ್ಥಿನಿಯ–ರಿಂದ ಮೂರು ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿಯನ್ನು ಜೂನ್ 23 ರವರೆಗೆ ವಿಸ್ತರಿಸಲಾಗಿದೆ.

ಅನುದಾನಿತ ಕೋರ್ಸುಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟ–ರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಅನುದಾನ ರಹಿತ ಕೋರ್ಸುಗಳಾದ ಜ್ಯುವೆಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪೇರ್ಡ್), ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಕೋರ್ಸುಗಳು ಲಭ್ಯವಿದ್ದು, ಅರ್ಜಿ ಸಲ್ಲಿಸಬಹುದು. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಹಾಗೂ ಶೇ.40 ಮತ್ತು ಮೇಲ್ಪಟ್ಟು ಮೂಳೆ ಮತ್ತು ಕೀಲು ಅಂಗವಿಕಲತೆ, ಶೇ.60 ಡಿಬಿ ಮತ್ತು ಮೇಲ್ಪಟ್ಟು ಕಿವುಡು ಮತ್ತು ಮೂಗು ಅಂಗವಿಕಲತೆ ಮತ್ತು ಕಂಪ್ಯೂಟರ್ ಅಪ್ಲಿಕೇಷನ್ಸ್ (ಫಾರ್ ವಿಜ್ಯುವಲಿ ಇಂಪೇರ್ಡ್) ಕೋರ್ಸಿಗೆ 6/60 ಅಥವಾ 20/200 ಸ್ನೆಲೆನ್ ಅಂಧತ್ವ ಹೊಂದಿದ ಅರ್ಹ ಅಭ್ಯರ್ಥಿಗಳು ಡಿಪ್ಲೊಮಾ ಕೋರ್ಸುಗಳಿಗೆ ಅರ್ಜಿ ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯದ ಸೌಲಭ್ಯವಿರುತ್ತದೆ.

ಅರ್ಜಿಯನ್ನು ಸಲ್ಲಿಸಲು ಜೂನ್ 23 ಕೊನೆಯ ದಿನವಾಗಿದ್ದು, ನಿಗದಿತ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸಬೇಕು. ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಛಯ, ಮೈಸೂರು–570006 ವಿಳಾಸದಿಂದ ಸಾಮಾನ್ಯ ವರ್ಗದ ಅಭ್ಯರ್ಥಿಗಳು ರೂ.100/– ಹಾಗೂ ಎಸ್‌ಸಿ/ಎಸ್‌ಟಿ/ಪ್ರ–1 ವರ್ಗದವರಿಗೆ ರೂ. 50/– ರ ನಗದು ಅಥವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಪಡೆಯಬಹುದು ಅಥವಾ ವೆಬ್‌ಸೈಟ್ **www.jsspda.org** ಮೂಲಕ ಡೌನ್ಲೋಡ್ ಮಾಡಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್, ಇ–ಮೇಲ್ *jsspda@gmail.com* ಅಥವಾ ಮೊ.ಸಂ. 9844644937 ಗೆ ಸಂಪರ್ಕಿಸಬಹುದು ಎಂದು ಕಚೇರಿ ಪ್ರಕಟಣೆ ತಿಳಿಸಿದೆ.

# ಬಹಿರಂಗ ಹರಾಜು

ಗದಗ : ಗದಗ ವಲಯದ ಬಿಂಕದಕಟ್ಟಿ ವಿಶ್ರಾಂತಿ ಗೃಹ ಮತ್ತು ಶೆಡ್‌ನಲ್ಲಿರುವ ಹಳೆಯ ನಿರುಪಯುಕ್ತ ವಸ್ತುಗಳನ್ನು ಬಹಿರಂಗ ಹರಾಜನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಗದಗ ರವರ ಕಛೇರಿ ಬಿಂಕದಕಟ್ಟಿಯಲ್ಲಿ ದಿನಾಂಕ:9–7–2025ರಂದು ಮಧ್ಯಾಹ್ನ 3:00 ಘಂಟೆಗೆ ಬಹಿರಂಗ ಹರಾಜು ಮಾಡಲಾಗುವುದು, ಎಂದು ಸಕಾಯಕ ಅರಣ್ಯ ಸಂರಕ್ಷಣಾಧಿಕಾರಿ,ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ : 08372–200286 ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಉಪ ವಿಭಾಗ ಗದಗ ಇವರ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

### ಮೆಟ್ರಿಕ್ ಪೂರ್ವ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿನಿಲಯಗಳಿಗೆ ಅವಧಿ ವಿಸ್ತರಣೆ

2025–26 ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಆನ್ಲೈನ್ ಮೂಲಕ **https://shp.karnataka.gov.in./bcwd** ಅರ್ಜಿ ಆಹ್ವಾನಿಲಾಗಿದ್ದು ಜೂನ್ 15 ರ ವರೆಗೆ ಅವಕಾಶ ಕಲ್ಪಿಸಲಾಗಿತ್ತು . ಕೆಲವು ತಾಂತ್ರಿಕ ಕಾರಣಗಳಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲವೆಂದು ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸುವಂತೆ ಕೆಲವೊಂದು ಜಿಲ್ಲೆಗಳಿಂದ ಮನವಿಗಳು ಸಿಕೃತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಕೆಯ ದಿನಾಂಕವನ್ನು ಜೂನ್ 25 ರ ವರೆಗೆ ವಿಸ್ತರಿಸಲಾಗಿದೆ. ಎಂದು ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ನಾಳೆ ವಿದ್ಯುತ ವ್ಯತ್ಯಯ

ಧಾರವಾಡ : 110 ಕೆವ್ಹಿ. ಕೆ.ಯು.ಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಜೂನ್ 21, 2025 ರಂದು 11 ಕೆವ್ಹಿ ನವೋದಯ ಫೀಡರ್ ಮಾರ್ಗದ ಮೇಲೆ ತುರ್ತುಪಾಲನಾ ಕಾಮಗಾ–ರಿಯನ್ನು ಕೈಗೊಳ್ಳುವುದರಿಂದ ಜೂನ್ 21, 2025 ರಂದು ಬೆಳಿಗ್ಗೆ 10 ಗಂಟೆಯಿಂದ 5 ಗಂಟೆಯವರೆಗೆ ಶಾಂಭವಿ ನಗರ, ಸೂರ್ಯಾ ಲೇಔಟ, ಮಾಸೂರ ಲೇಔಟ ,ಕೆ.ಐ.ಎ.ಡಿ.ಬಿ ಲೇಔಟ್, ತಪೋವನ ನಗರ, ತಪೋವನ ಮಠ, ಆತ್ಮಾನಂದ ಲೇಔಟ್, ಗಣೇಶ ನಗರ, ವಿನಯ ಕುಲಕರ್ಣಿ ಡೈರಿ, ಗೋಕಾಕ ಫ್ಲೇವರ್ಸ್ ಪ್ಯಾಕ್ಟರಿ, ಜಾಧವ ಲೇಔಟ್, ಹೊಯ್ಸಳ ನಗರ, ಕ್ಯಾರಕೊಪ್ಪ ರೋಡ, ರವೀಂದ್ರ ನಗರ, ಕ್ಲಾಸಿಕ್ ಸ್ಕೂಲ್, ಮ್ಯಾಂಗೋ ಎಸ್ಟೇಟ್, ಸಾಯಿ ಸಮರ್ಥ ಲೇಔಟ, ಓಮ ಸ್ಕೂಲ್, ಕೆಲಗೇರಿ ಲೇಕ್, ನೆಹರು ನಗರ, ಜಲದರ್ಶಿನಿ ನಗರವರೆಗೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### 15ನೇ ಹಣಕಾಸು ಆಯೋಗದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್

# ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ಕುರಿತು

ಗದಗ : ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲೆಯ 15ನೇ ಹಣ–ಕಾಸು ಆಯೋಗದಡಿಯಲ್ಲಿ ಗುತ್ತಿಗೆ ಆಧ–ಾರದ ಮೇಲೆ ಖಾಲಿ ಇರುವ ಬ್ಲಾಕ್ ಮಟ್ಟದ ಸಾರ್ವಜನಿಕ ಆರೋಗ್ಯ ಘಟಕದ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ದಿನಾಂಕ:11–03–2025 ರಿಂದ 21–03–2025 ರ ಸಂಜೆ 5.30ರ ವರೆಗೆ ರಚಿಜಚಿರ. ಟಿಫಿ.ಎಟಿ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಸ್ವೀಕೃತವಾದ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ ರೋಷ್ಟರ್ ಸಂ.1 ರ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ದಿನಾಂಕ:15–04–2025 ರಿಂದ 17–04–2025 ರವರೆಗೆ ಪರಿಶೀಲಿಸಲಾಗಿದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಿದ ಅಭ್ಯರ್ಥಿಗಳು ಹುದ್ದೆಗೆ ಬೇಕಾಗಿರುವ ವಿದ್ಯಾರ್ಹತೆಯನ್ನು ಹೊಂದದೇ ಇರುವ ಕಾರಣ ಉಳಿದ 1:18 ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿ ಸದರಿ ಅಭ್ಯರ್ಥಿಗಳಿಗೆ ದಿನಾಂಕ:21–05–2025 ರಿಂದ 23–05–2025 ರವರೆಗೆ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ದಿನಾಂಕ : 20–06–2025 ರಿಂದ 26–06–2025ರ ವರೆಗೆ ಸಂಜೆ 4.00 ಘಂಟೆಯೊಳಗಾಗಿ ಕಚೇ–ರಿಯ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ನಿರ್ವಹಣ ಘಟಕ, ಗದಗ ಇಲ್ಲಿ ಲಿಖಿತ ರೂಪದಲ್ಲಿ ನೀಡಲು ಸೂಚಿಸಿದೆ. ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ರಚಿಜಚಿರ.ಟಿಫಿ.ಎಟಿ ವೆಬ್‌ಸೈಟ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇ–ರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

### ಬಸವೇಶ್ವರ ಏತ ನೀರಾವರಿ ಯೋಜನೆಯಿಂದ ಕಾಲುವೆಗೆ ನೀರು

# ಮದಭಾವಿಯಲ್ಲಿ ರಾಜು ಕಾಗೆಯವರಿಗೆ ಸನ್ಮಾನ

ಮೋಳೆ ;– ಕಾಗವಾಡ ಮತಕ್ಷೇತ್ರದ ಉತ್ತರ ಭಾಗದ ರೈತರ ಬಹು ನಿರೀಕ್ಷಿತ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯ ಮುಖಾಂತರ ಸನ್ 2025–26 ನೇ ಸಾಲಿನಲ್ಲಿ ಕಾಲುವೆಗೆ ನೀರು ಹರಿಸುವ ಯೋಜನೆಗೆ ಎರಡು ಪಂಪ್‌ಸೆಟ್‌ಗಳನ್ನು ಪ್ರಾರಂಭಿಸುವ ಮೂಲಕ ಚಾಲನೆ ನೀಡಲಾಗಿದ್ದು, ಇದರಿಂದ ಯೋಜನೆಯ ಮೊದಲ ಹಂತದ ಮಧಬಾವಿ ಹಾಗೂ ಅನಂತಪೂರ ಜಿಲ್ಲಾ ಪಂಚಾಯತ ವ್ಯಾಪ್ತಿಯ 40 ಸಾವಿರ ಎಕರೆ ಜಮೀನಿನ ರೈತರಿಗೆ ಅನಕೂವಾಗಲಿದೆಯೆಂದು ಶಾಸಕ ರಾಜು ಕಾಗೆ ಹೇಳಿದರು.

ಅವರು ಗುರುವಾರ ದಿ. 19 ರಂದು ತಾಲೂಕಿನ ಐನಾಪೂರ ಪಟ್ಟಣದಲ್ಲಿ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯ ಜಾಕವೆಲ್ ಬಳಿ ಕಾಲುವೆಗೆ ನೀರು ಹರಿಸುವ ಯೋಜನೆಗೆ ಚಾಲನೆ ನೀಡಿ ಮಾತನಾಡುತ್ತಿದ್ದರು. ಈ ಯೋಜನೆ ಕೆಲ ವರ್ಷಗಳ ಹಿಂದೆಯೇ ಪೂರ್ಣಗೊಳ್ಳಬೇಕಿತ್ತು. ಆದರೆ ಹಣಕಾಸಿನ ಕೊರತೆ, ಕರೋನಾ, ಪ್ರವಾಹದಂತಹ ಅಡತಡೆಗಳು ಸೇ–ರಿದಂತೆ ತಾಂತ್ರಿಕ ದೋಷಗಳ ಪರಿಣಾಮ ನಿಗದಿತ ಸಮಯದಲ್ಲಿ ಪೂರ್ಣಗೊಳ್ಳಲಿಲ್ಲ. ಸುಮಾರು 1363 ಕೋಟಿಯ ರೂಪಾಯಿಯ ಯೋಜನೆ ಇದಾಗಿದ್ದು, ಈಗಾಗಲೇ 11 ನೂರು ಕೋಟಿ ಅನುದಾನದ ಕಾಮಗಾರಿ ಮುಕ್ತಾಯವಾಗಿದ್ದು, ಇನ್ನೂ ಸರಿಸುಮಾರು 200 ಕೋಟಿ ಅನುದಾನದ ಅವಶ್ಯಕತೆ ಇದೆ. ಕೂಡಲೇ ಸರ್ಕಾರದಿಂದ ಅನುದಾನ ಬಿಡುಗಡೆಗೊಳಿಸಿ, ಮುಂಬರುವ ನಾಲ್ಕು ತಿಂಗಳಲ್ಲಿ ಪೂರ್ಣ ಪ್ರಮಾಣದ ಕಾಮಗಾರಿ ಕೈಗೊಂಡು ಸುಮಾರು 70 ಸಾವಿರ ಎಕರೆ ಜಮೀನುಗಳಿಗೆ ನೀರು ಹರಿಸಲಾಗುವುದು ಎಂದು ಹೇಳಿದರು.



ಈ ವೇಳೆ ತುಂಬಿ ಹರಿಯುತ್ತಿರುವ ಕೃಷ್ಣಾ ನದಿಗೆ ಶಾಸಕ ರಾಜು ಕಾಗೆ ಹಾಗೂ ಇತರ ಗಣ್ಯರು ಸೇರಿ ಬಾಗಿನ ಅರ್ಪಿಸಿದರು.

ಈ ವೇಳೆ ನೀರಾವರಿ ನಿಗಮದ ಸಿಇ ನಾಗರಾಜ ಬಿ.ಎ., ನೀರಾವರಿ ಇಲಾಖೆಯ ಅಧಿಕಾರಿಗಳಾದ ಪ್ರವೀಣ ಹುಣಸಿಕಟ್ಟಿ, ಪ್ರಶಾಂತ ಪೋತದಾರ, ಬಸವರಾಜ ಗಲಗಲಿ, ಗಾಯತ್ರಿ ಕನ್ಸಟ್ರಕ್ಸನ್‌ನ ಎಸ್‌ಜೆಎಂ ಎಂ.ವ್ಹಿ. ಶೇಖರ, ಜಿಎಂ ನಾಗೇಶ ಕೆ., ಮುಖ್ಯ ಅಧಿಕಾರಿ ಎಂ.ವ್ಹಿ. ಶೇಖರ, ಕೆ. ನಾಗೇಶ, ಮುಖಂಡರಾದ ದಿಗ್ವಿಜಯ ಪವಾರದೇಸಾಯಿ,ವಿನಾಯಕ ಬಾಗಡಿ, ಅರುಣ ಗಾಣಿಗೇರ,ಗೂಳಪ್ಪ ಜತ್ತಿ, ಶಿವಾನಂದ ಗೋಲಭಾಂವಿ, ಚಂದ್ರಕಾಂತ ಇಮ್ಮಡಿ,ನಿಜಗುಣಿ ಮಗದುಮ್, ಶಿವಾನಂದ ಮಗದುಮ್, ಅಶೋಕ ಪೂಜಾರಿ, ಪ್ರಕಾಶ ಕೊರ್ಬು,ಸುನೀಲ ಅವಟಿ, ಡಾ.ಅರವಿಂದರಾವ್ ಕಾರ್ಚಿ, ಅನೀಲಕುಮಾರ ಸತ್ತಿ, ವಿಶ್ವನಾಥ ನಾಮದಾರ, ಮಲ್ಲಪ್ಪ ಕಕಮ–ರಿ,ಸುರೇಶ ಅಡಿಶೇರಿ, ಅಶೋಕ ಕೌಲಗುಡ್ಡ, ಕುಮಾರ ಪಾಟೀಲ,ಶಂಕರ ಮದನ್ನವರ, ಸಾವಂತ ಖಾಂಡೇಕರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಯೋಗ ಸಂಗಮ : 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಕೊಪ್ಪಳ ಹಾಗೂ ಜಿಲ್ಲೆಯ ವಿವಿಧ ಇಲಾಖೆಗಳು ಮತ್ತು ಸರ್ವಯೋಗ ಸಂಸ್ಥೆಗಳು ಇವರ ಸಹಯೋಗದಲ್ಲಿ ಕೊಪ್ಪಳ ತಾಲೂಕು ಕ್ರೀಡಾಂಗಣದಲ್ಲಿ ಜೂನ್ 21 ರಂದು ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಧ್ಯೆಯವಾಕ್ಯದೊಂದಿಗೆ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ ಮತ್ತು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಘನ ಉಪಸ್ಥಿತಿ ವಹಿಸುವರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ್, ಗಂಗಾವತಿ ಶಾಸಕರಾದ ಜಿ.ಜನಾರ್ಧನರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶರೀಲ್ ಜಿ.ನಮೋಶಿ, ಡಾ.ಚಂದ್ರಶೇಖರ ಬಿ.ಪಾಟೀಲ, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ ಹಾಗೂ ಹೇಮಲತಾ ನಾಯಕ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಬೀಸಾಬ ದೋಟಿಹಾಳ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ್ ಗುಪ್ತಾ ಅವರು ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಕೃಷ್ಣಭಾಗ್ಯ ಜಲ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನ್ ರಾಜ್, ಬೆಂಗಳೂರು ಆಯುಷ್ ನಿರ್ದೇಶನಾಲಯದ ಆಯುಕ್ತರಾದ ವಿಪಿನ್ ಸಿಂಗ್, ಬೆಂಗಳೂರು ಆಯುಷ್ (ಯೋಗ ಮತ್ತು ಪ್ರಕೃತಿ ಚಿಕಿತ್ಸೆ) ಇಲಾಖೆಯ ಉಪನಿರ್ದೇಶಕರಾದ ಡಾ. ಹರೀಶ್ ಬಾಬು ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ ಅವರು ಉಪಸ್ಥಿತರಿರುವರು ಎಂದು ಕೊಪ್ಪಳ ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ಬ. ಹಿರೇಗೌಡರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಸಿಪಿ/ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆ

# ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಸದ್ಬಳಕೆಯಾಗಬೇಕು



ಗದಗ : ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಶ್ರೇಯೋಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವು ಸಮರ್ಪಕವಾಗಿ ಸದ್ಬಳಕೆಯಾಗಬೇಕು. ನಿಗದಿತ ಅವಧಿಯೊಳಗೆ ಯೋಜನೆಯ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯ ಇಲಾಖೆಯ ಅಧಿಕಾರಿಗಳು ಮಾಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯಗಳಿಗೆ ಮೀಸಲಿರಿಸಿದ ಅನುದಾನವು ಅವರಿಗೇ ತಲುಪಬೇಕು. ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರುವಂತೆ ನಿಗಾ ವಹಿಸಬೇಕು. ಸೌಲಭ್ಯ ತಲುಪಿಸುವಲ್ಲಿ ವಿನಾಕಾರಣ ವಿಳಂಬವಾದರೆ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸೂಚಿಸಿದರು.

ಅರ್ಹ ಫಲಾನುಭವಿಗಳಿಗೆ ನೀಡುವ ಸೌಲಭ್ಯಗಳು ಗುಣಮಟ್ಟದಿಂದ ಕೂಡಿರುವ ಬಗ್ಗೆ ಅಧಿಕಾರಿಗಳು ಖಚಿತಪಡಿಸಿಕೊಂಡು ವಿತರಣೆ ಮಾಡಬೇಕು. ಹಾಗೂ ನಿರ್ದಿಷ್ಟ ಸಮುದಾಯದ ಕಾಲೋನಿಗಳಲ್ಲಿಯೇ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಖಚಿತಪಡಿಸಿಕೊಂಡು ಕಾಮಗಾರಿ ಅನುಷ್ಠಾನಗೊಳಿಸುವಂತೆ ತಿಳಿಸಿದರು.

ಶಿಷ್ಟಾಚಾರ ಪಾಲನೆ: ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಅವರು ಮಾತನಾಡಿ ಸರ್ಕಾರದ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಾಗ ಕಡ್ಡಾಯವಾಗಿ ಶಿಷ್ಟಾಚಾರ ಪಾಲನೆಯಾಗಬೇಕು. ಕಾರ್ಯಕ್ರಮದ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸುವಾಗ ಒಂದು ವಾರ ಮುಂಚಿತವಾಗಿಯೇ ಜಿಲ್ಲಾಡಳಿತದ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆ. ಶಿಷ್ಟಾಚಾರ ಪರಿಪಾಲನೆ ಮಾಡುವಾಗ ಉದಾಸೀನತೆ ಮಾಡಬಾರದು ಎಂದು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ 2025–26 ನೇ ಸಾಲಿನ 31–5–2025 ರ ಅಂತ್ಯದವರೆಗೆ ಎಸ್‌ಸಿ ಎಸ್‌ಪಿ ಯೋಜನೆಯಡಿ ಜಿಲ್ಲೆಗೆ ವಿವಿಧ ಇಲಾಖೆಗಳಿಗೆ ಒಟ್ಟಾರೆ 2156.82 ಲಕ್ಷರೂ. ಬಿಡುಗಡೆಯಾಗಿದೆ. ಆ ಪೈಕಿ1113.43 ಲಕ್ಷ ರೂ. ಖರ್ಚಾಗಿದ್ದು 21734 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿರುತ್ತಾರೆ.

ಟಿ.ಎಸ್.ಪಿ.ಯೋಜನೆಯಡಿ 2025–26 ನೇ ಸಾಲಿನ 31–5–2025ರ ಅಂತ್ಯದವರೆಗೆ ವಿವಿಧ ಇಲಾಖೆಗಳಿಗೆ 737.20 ಲಕ್ಷ ರೂ. ಬಿಡುಗಡೆಯಾಗಿದ್ದು ಆ ಪೈಕಿ 394.80 ಲಕ್ಷ ರೂ. ಖರ್ಚಾಗಿರುತ್ತದೆ. 14675 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿರುತ್ತಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪದ್ಮಾವತಿ ಜಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೊಟ್ಟೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

# ಹಲಗತ್ತಿ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ- ಜನತೆ ಆರೋಗ್ಯ ಬಗೆಗೆ ಕಾಳಜಿ ಹೊಂದಬೇಕು




ರಾಮದುರ್ಗ : ತಾಲೂಕಿನ ಹಲಗತ್ತಿ ಗ್ರಾಮದ ಸ್ವಾಮಿ ವಿವೇಕಾನಂದ ಪ್ರಾಥಮಿಕ ಶಾಲಾ ಆವರಣದಲ್ಲಿ ಬೆಳಗಾವಿಯ ಅರ್ಥೋ ಎಂಡ್ ಟ್ರಾಮ್ ಸೆಂಟರ್, ರಾಮದುರ್ಗದ ಶ್ರೀನಿವಾಸ್ ಆಸ್ಪತ್ರೆಯ ಸಂಮುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರನ್ನು ಏರ್ಪಡಿಸಲಾಗಿತ್ತು.

ಶಾಲಾ ಸುಧಾರಣಾ ಸಮಿತಿಯ ಅಧ್ಯಕ್ಷ ಹಾಗೂ ನಿವೃತ್ತ ಪ್ರೊ. ವೆಂಕಟೇಶ ಹುಣಸಿಕಟ್ಟಿ ಶಿಬಿರ ಉದ್ಘಾಟಿಸಿ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಜನತೆಯಲ್ಲಿ ಆರೋಗ್ಯದ ಅರಿವು ಮೂಡಿಸಲು ಉಚಿತ ಆರೋಗ್ಯ ತಪಾಸಣಾ ಶಿಬಿರಗಳ ಅಗತ್ಯತೆ ಇದೆ. ಇಂದಿನ ಒತ್ತಡದ ಬುದುಕಿನಲ್ಲಿ ಪ್ರತಿಯೊಬ್ಬರು ಆರೋಗ್ಯದ ಕಾಳಜಿ ಹೊಂದಬೇಕು ಎಂದ ಅವರು, ಶಿಬಿರದಲ್ಲಿ ಜನತೆಯ ಆರೋಗ್ಯ ರಕ್ಷಣೆಯ ಮಾರ್ಗದರ್ಶವನ್ನು ವೈಧ್ಯರು ನೀಡಬೇಕು ಎಂದರು.

ವಿವಿಧ ತಜ್ಞ ವೈಧ್ಯರು ಶಿಬಿರದಲ್ಲಿ ಸುಮಾರು 150 ರೋಗಿಗಳ ತಪಾಸಣೆ ಮಾಡಿ ಉಚಿತ ಔಷದೋಪಚಾರ ಮಾಡಿದರು. ಎಲವುಕಿಲು ತಜ್ಞ ಡಾ. ಸಚಿನ್ ದೇಶನೂರ. ಡಾ. ಆಶಿಮ್ ಮುಲ್ಲಾ. ಡಾ. ವಿ ಆರ್ ಕಣಬೂರ 50 ರೋಗಿಗಳ ತಪಾಸನೆ ಮಾಡಿ ಉಚಿತ ಔಷದೋಪಚಾರ ನೀಡಿದರು.

ಶಾಲಾ ಸುಧಾರಣಾ ಸಮಿತಿಯ ಉಪಾಧ್ಯಕ್ಷ ಹಾಗೂ ನಿವೃತ್ತ ಅಂಚೆ ನೌಕರ ಎಸ್.ಬಿ. ಮುಳ್ಳೂರ, ಹೃದಯರೋಗ ತಜ್ಞ ಡಾ. ಶಂಭಾಜಿ ಪಾಟೀಲ, ಡಾ.ವಿ.ಆರ್. ಕಣಬೂರ, ಪಿಕೆಪಿಎಸ್ ಅಧ್ಯಕ್ಷ ಬಾಲಪ್ಪ ರುದ್ರಗೌಡ್ರ, ವಿ.ಜಿ. ನಾಯಕ, ಡಾ. ಶಿವಾನಂದ ಬುಡರಕಟ್ಟಿ. ನಿವೃತ್ತ ಶಿಕ್ಷಕ ನಡುವಿನಮನಿ, ಶಾಲೆಯ ಆಡಳಿತ ನಿರ್ದೇಶಕರು ಶೀನು ದ್ಯಾವಣ್ಣವರ್, ರವಿ ಗಲಿಬಿ, ಸ್ವಾಮಿ ವಿವೇಕಾನಂದ ಶಾಲಾ ಆಡಳಿತಾಧಿಕಾರಿ ಮಲ್ಲಿಕಾರ್ಜುನರಡ್ಡಿ ಗೊಂದಿ, ಮಂಜು ಮುಧೋಳ, ಲಕ್ಷ್ಮಣ್ ಹೂಗಾರ್, ಫಕೀರಗೌಡ ರಂಗನಗೌಡ್ರ. ಅಂಬಲಜೇರಿ, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಶಾಲೆಯ ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಲೋಕೋಪಯೋಗಿ ಇಲಾಖೆ: ಪದಗ್ರಹಣ

ಬೆಳಗಾವಿ, : ಮಾನ್ಯ ಶ್ರೀ. ಸಂಜೀವಕುಮಾರ. ಹುಲಕಾಯಿ. ಅಧೀಕ್ಷಕ ಅಭಿಯಂತರರು, ದಿನಾಂಕ: 13–06–2025 ರಂದು ಅಪರಾಹ್ನ ಅಧೀಕ್ಷಕ ಅಭಿಯಂತರರು, ಲೋಕೋಪಯೋಗಿ ಇಲಾಖೆ ಬೆಳಗಾವಿ ವೃತ್ತ ಬೆಳಗಾವಿ ಕಛೇರಿಗೆ ಪದಗ್ರಹಣ ಮಾಡಿಕೊಂಡಿರುತ್ತಾರೆ.

ಈ ಮುಂಚೆ ಅವರು ಬೆಳಗಾವಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾಗಿ ಕಾರ್ಯನಿರ್ವಹಿಸಿರುತ್ತಾರೆ.

****

# ಜಿಲ್ಲಾಧಿಕಾರಿಗಳಿಂದ ನಗರ ಪರಿವೀಕ್ಷಣೆ : ವಿವಿಧ ಕಾಮಗಾರಿಗಳ ಪರಿಶೀಲನೆ- ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿಯ ಮನೆಗಳ ಕಾಮಗಾರಿ ತುರ್ತಾಗಿ ಪೂರ್ಣಗೊಳಿಸಿ ಹಕ್ಕುತ್ತ ವಿತರಣೆಗೆ ಕ್ರಮ ವಹಿಸಿ -ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ



ವಿಜಯಪುರ : ವಿಜಯಪುರ ನಗರದಲ್ಲಿ ನಡೆಯುತ್ತಿರುವ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯ ಗುಂಪು ಮನೆಗಳ ನಿರ್ಮಾಣ, ನಗರದ ರಿಂಗ್ ರಸ್ತೆಯಲ್ಲಿ ವಿದ್ಯುತ್ ಕಂಬಗಳ ಅಳವಡಿಕೆ, ಯುಜಿಡಿ ಸ್ಥಳಾಂತರ, ಕುಡಿಯುವ ನೀರಿನ ಪೈಪಲೈನ್ ಸ್ಥಳಾಂತರಿಸುವ ಕಾಮಗಾರಿ, ಅರಕೇರಿ ಜಾಕವೆಲ್‌ದಿಂದ ಕೆರೆಗೆ ನೀರು ತುಂಬಿಸುವ ಪ್ರಕ್ರಿಯೆ, ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ಮನೆ ನಿರ್ಮಾಣ ಕಾಮಗಾರಿ ಸ್ಥಳಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬುಧವಾರ ಮಹಾನಗರ ಪಾಲಿಕೆ ಆಯುಕ್ತರು ಹಾಗೂ ಪಾಲಿಕೆಯ ಅಧಿಕಾರಿಗಳೊಂದಿಗೆ ಜಂಟಿಯಾಗಿ ಪರಿವೀಕ್ಷಣೆ ನಡೆಸಿದ ಅವರು, ಪೌರಕಾರ್ಮಿಕರ ಗೃಹಭಾಗ್ಯ (ಪಿ.ಕೆ.ಜಿ.ಬಿ)ಯೋಜನೆಯಡಿ ವಿಜಯಪುರ ನಗರದ ಹಂಚನಾಳ ಪಿ.ಎಚ್ ಗ್ರಾಮಕ್ಕೆ ಭೇಟಿ ನೀಡಿ, ಈಗಾಗಲೇ ನಿರ್ಮಾಣಗೊಂಡಿರುವ ಹಾಗೂ ಹಂಚಿಕೆ ಮಾಡಲಾದ ಜಿ+2 ಮಾದರಿಯ 56 ಗುಂಪು ಮನೆಗಳಲ್ಲಿ ವಾಸವಾಗಿರುವ ಫಲಾನುಭವಿಗಳ ಸಮಸ್ಯೆಯನ್ನು ಆಲಿಸಿದ ಅವರು, ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಮನೆಗಳಿಗೆ ವಿದ್ಯುತ್ ಸಂಪರ್ಕ, ಬೀದಿ ದೀಪ ಹಾಗೂ ಒಳಚರಂಡಿ ವ್ಯವಸ್ಥೆಗೆ ಕ್ರಮ ವಹಿಸುವಂತೆ ತಿಳಿಸಿದ ಅವರು, ನಿರ್ಮಾಣ ಹಂತದಲ್ಲಿರುವ 60 ಗುಂಪು ಮನೆಗಳ ನಿರ್ಮಾಣ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಿ ಉಳಿದ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲು ಕ್ರಮಕೈಗೊಳ್ಳುವಂತೆ ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ನಗರದ ಅಲ್ ಅಮೀನ್ ಮೆಡಿಕಲ್ ಕಾಲೇಜ್ ಹಿಂಭಾಗದಲ್ಲಿ ಪಿಎಂಎವಾಯ್ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ಜಿ+1 ಮಾದರಿಯ 1493 ಗುಂಪು ಮನೆಗಳ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಹಕ್ಕು ಪತ್ರ ಪಡೆದುಕೊಂಡು ವಾಸ ಮಾಡುತ್ತಿರುವ ಫಲಾನುಭವಿಗಳ ಮನೆಗಳಿಗೆ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಮನೆಗಳಿಗೆ ವಿದ್ಯುತ್ ಸಂಪರ್ಕ, ಬೀದಿ ದೀಪ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಷ್ಟ್ರೀಯ ಹೆದ್ದಾರಿಗೆ ಕೂಡುವ ನಗರದ ರಿಂಗ್ ರಸ್ತೆ ಶ್ರೀ ನೇತಾಜಿ ಸುಭಾಷಚಂದ್ರ ಭೋಸ ವೃತ್ತದಿಂದ ಸೊಲಾಪೂರ ರಾಷ್ಟ್ರೀಯ ಹೆದ್ದಾರಿ ವರೆಗೆ ವಿದ್ಯುತ್ ಕಂಬಗಳ ಸ್ಥಳಾಂತರ, ಯು.ಜಿ.ಡಿ ಲೈನ್ ಸ್ಥಳಾಂತರ ಹಾಗೂ ಕುಡಿಯುವ ನೀರಿನ ಪೈಪಲೈನ್‌ಗಳನ್ನು ಸ್ಥಳಾಂತರಿಸಿ, ಈಗಾಗಲೇ ಕೈಗೊಂಡಿರುವ ಕಾಮಗಾರಿಗಳನ್ನು ಯುದ್ಧೋಪಾದಿಯಲ್ಲಿ ಕೈಗೊಂಡು ತ್ವರಿತ ಗತಿಯಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಸಾರ್ವಜನಿಕರಿಗೆ ಸುಗಮ ಸಂಚಾರಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ವಿಜಯಪುರ ನಗರದ ವಿವಿಧ ವಾರ್ಡಗಳಿಗೆ ಕುಡಿಯುವ ನೀರಿನ ಜಲಮೂಲವಾಗಿರುವ ಭೂತನಾಳ ಕೆರೆಗೆ ನೀರು ತುಂಬಿಸುವ ಪ್ರಕ್ರಿಯೆಯಲ್ಲಿ ಮುಖ್ಯ ಪಾತ್ರವಹಿಸುವ ಅರಕೇರಿ ಜಾಕ್‌ವೇಲ್‌ಗೆ ಭೇಟಿ ನೀಡಿದ ಅವರು, ಕುಡಿಯುವ ನೀರು ಸರಬರಾಜು ಪ್ರಕ್ರೀಯೆಯಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ವಿಜಯಪುರ ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂಡಿ ಮತಕ್ಷೇತ್ರದಲ್ಲಿ 4 ಸಾವಿರ ಕೋಟಿ ರೂ.ಗೂ ಹೆಚ್ಚಿನ ಅಭಿವೃದ್ಧಿ ಕಾಮಗಾರಿಗಳಿಗೆ ಜು.9ರಂದು ಮುಖ್ಯಮಂತ್ರಿ-ಉಪಮುಖ್ಯಮಂತ್ರಿಗಳಿಂದ ಉದ್ಘಾಟನೆ-ಶಂಕುಸ್ಥಾಪನೆ-ಲೋಕಾರ್ಪಣೆ



ವಿಜಯಪುರ : ರಾಜ್ಯದ ಮುಖ್ಯಮಂತ್ರಿಗಳಾದ ಶ್ರೀ ಸಿದ್ಧರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಶ್ರೀ ಡಿ.ಕೆ.ಶಿವಕುಮಾರ ಅವರು ಜುಲೈ 9 ರಂದು ಇಂಡಿ ಪಟ್ಟಣಕ್ಕೆ ಆಗಮಿಸಿ 4 ಸಾವಿರ ಕೋಟಿ ರೂ.ಗೂ ಹೆಚ್ಚಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ–ಲೋಕಾರ್ಪಣೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದು, ಕಾರ್ಯಕ್ರಮ ಯಶಸ್ವಿಯಾಗಿ ನಿರ್ವಹಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ತಿಳಿಸಿದರು.

ಗುರುವಾರ ಇಂಡಿ ಮಿನಿ ವಿಧಾನಸೌಧದಲ್ಲಿ ಆಯೋಜಿಸಿದ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಇಂಡಿ ತಾಲೂಕಿನಲ್ಲಿ ಕೈಗೊಂಡಿರುವ 19 ಕೆರೆ ತುಂಬುವ ಯೋಜನೆ, ತಿಡಗುಂದಿ ಏತ ನೀರಾವರಿ ವಿಸ್ತರಣೆ, ಹೊರ್ತಿ ರೇವಣಸಿದ್ದೇಶ್ವರ ಏತ ನೀರಾವರಿ ಕಾಮಗಾರಿ ಹಂತ–2 ಮತ್ತು 3, ತಡವಲಗಾ ಕೆಜಿಬಿವಿ ಶಾಲಾ ಕಟ್ಟಡ ನಿರ್ಮಾಣ, ಕಾರ್ಮಿಕರ ಮಕ್ಕಳಿಗಾಗಿ ವಸತಿ ಶಾಲೆ, ಮೌಲಾನಾ ಅಬುಲ್ ಕಲಾಂ ವಸತಿ ಶಾಲೆ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ತಾಂತ್ರಿಕ ಶಿಕ್ಷಣ ಇಲಾಖೆ ಹೆಚ್ಚುವರಿ ಕೊಠಡಿಗಳ ಕಾಮಗಾರಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ಝಳಕಿ, ಮಿರಗಿ ಗ್ರಾಮದ ಪಶು ಆಸ್ಪತ್ರೆ ಉದ್ಘಾಟನೆ, ಇಂಡಿ ತಾಲೂಕಿನ ಲಾಳಸಂಗಿ ಕೆರೆ ಸುಧಾರಣೆ, ಲೋಕೋಪಯೋಗಿ ಇಲಾಖೆ ಕಾಮಗಾರಿಗಳು, ಲಚ್ಯಾಣ ಗ್ರಾಮದ ಬಾಲಕರ ವಸತಿ ನಿಲಯ ನಿರ್ಮಾಣ, ವಿವಿಧ ಸಮುದಾಯ ಭವನಗಳ ನಿರ್ಮಾಣ, ಸಿಸಿ ರಸ್ತೆ ಕಾಮಗಾರಿ, ಮೆಘಾ ಮಾರುಕಟ್ಟೆ ಲೋಕಾರ್ಪಣೆ, ಮಿರಗಿ ಗ್ರಾಮದ ಹಳ್ಳಕ್ಕೆ ಬ್ರಿಜ್–ಕಂ–ಬ್ಯಾರೇಜ್ ನಿರ್ಮಾಣದ ಭೂಮಿ ಪೂಜೆ, ನಗರದ ತಾಲೂಕಾ ಕ್ರೀಡಾಂಗಣದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ, ಪ್ರಗತಿ ಪಥ ಯೋಜನೆ ರಸ್ತೆ ಕಾಮಗಾರಿಗೆ ಭೂಮಿಪೂಜೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಲೋಕಾರ್ಪಣೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಇಂಡಿ ಪಟ್ಟಣದ ಪೊಲೀಸ್ ಗ್ರೌಂಡ್‌ನಲ್ಲಿ ಆಯೋಜಿಸಿದ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲು ಶ್ರಮಿಸಬೇಕು.ಸಂಬಂಧಿಸಿದ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖೆ ವ್ಯಾಪ್ತಿಯ ಯೋಜನೆ–ಕಾರ್ಯಕ್ರಮಗಳ ಕುರಿತು ಪೂರ್ವ ತಯಾರಿ ಮಾಡಿಕೊಂಡು, ಕಾಮಗಾರಿಗಳ ಕುರಿತು ಸಮಗ್ರವಾದ ವರದಿ ಸಿದ್ಧಪಡಿಸಿ, ಅಧಿಕಾರಿಗಳು ಆಸಕ್ತಿಯಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಮಾತನಾಡಿ, ಇಂಡಿ ತಾಲೂಕಿನಲ್ಲಿ ಆಯೋಜಿಸಲಾದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ,ಚಾಲನೆ ಹಾಗೂ ಶಂಕು ಸ್ಥಾಪನೆ ಕಾರ್ಯಕ್ರಮ ಯಶಸ್ವಿ ಆಯೋಜನೆಗೆ ಪೂರ್ವ ಸಿದ್ಧತೆ ಕೈಗೊಳ್ಳಬೇಕು. ಯಾವುದೇ ಲೋಪಗಳಿಗೆ ಆಸ್ಪದ ನೀಡದೇ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಶಂಕು ಸ್ಥಾಪನೆ– ಚಾಲನೆ ಹಾಗೂ ಲೋಕಾರ್ಪಣೆಗೊಳ್ಳುವ ಯೋಜನೆಗಳ ಪಟ್ಟಿಯನ್ನು ಈಗಾಗಲೇ ಸಿದ್ಧಪಡಿಸಲಾಗಿದ್ದು, ಈ ಪಟ್ಟಿಯಲ್ಲಿ ಯಾವುದಾದರೂ ವ್ಯತ್ಯಾಸಗಳಿದ್ದಲ್ಲಿ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸಲು ಕ್ರಮ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ವೇದಿಕೆ, ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಸೂಕ್ತ ಪೊಲೀಸ್ ರಕ್ಷಣಾ ವ್ಯವಸ್ಥೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭಕ್ಕೆ ಅಗತ್ಯವಿರುವ ಸಕಲ ಸಿದ್ಧತೆಗಳನ್ನು ಕೈಗೊಂಡು ಯಶಸ್ವಿ ಕಾರ್ಯಕ್ರಮಕ್ಕೆ ಎಲ್ಲರೂ ಶ್ರಮಿಸಬೇಕು. ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆ ಹಾಗೂ 19 ಕೆರೆ ತುಂಬುವ ಯೋಜನೆಯ ಕುರಿತಾದ ಕಿರು ಸಾಕ್ಷ್ಯಚಿತ್ರ ಕಾರ್ಯಕ್ರಮದಲ್ಲಿ ಪ್ರದರ್ಶನ ಹಾಗೂ ಲಿಂಬೆ ಅಭಿವೃದ್ಧಿ ಮಂಡಳಿ ಲೋಗೋ ಸಿದ್ಧಪಡಿಸಿ ಕಾರ್ಯಕ್ರಮದಲ್ಲಿ ಬಿಡುಗಡೆಗೊಳಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಇಂಡಿ ಉಪವಿಭಾಗಾಧಿಕಾರಿ ಶ್ರೀಮತಿ ಅನುರಾಧಾ ವಸ್ತ್ರದ, ಇಂಡಿ ತಹಶೀಲ್ದಾರ ವಿ.ಎಸ್.ಕಡಕಭಾವಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಂಜಿನಿಯರಿಂಗ್, ಮೆಡಿಕಲ್ ಪ್ರವೇಶಕ್ಕೆ ವಿದ್ಯಾಪೋಷಕದಿಂದ ಆರ್ಥಿಕ ನೆರವು

ಮೂಡಲಗಿ : ಧಾರವಾಡದ ವಿದ್ಯಾಪೋಷಕ ಸಂಸ್ಥೆಯು 2025–26ನೇ ಸಾಲಿನಲ್ಲಿಇಂಜಿನಿಯರಿಂಗ್ ಮತ್ತು ವೈದ್ಯಕೀಯ ಪದವಿ ಪ್ರವೇಶಕ್ಕೆ ಕರ್ನಾಟಕದ ಅರ್ಹ ಪ್ರತಿಭಾನ್ವಿತಬಡ ವಿದ್ಯಾರ್ಥಿಗಳಿಗೆ ಧನ ಸಹಾಯವನ್ನು ನೀಡಲಿದೆ.

ವಿದ್ಯಾರ್ಥಿಗಳು 2024–25ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿಯುಸಿ ವಿಜ್ಞಾನ ಪರೀಕ್ಷೆಯಲ್ಲಿ ಮೊದಲ ಬಾರಿಗೆ ಶೇ.80ರಷ್ಟು ಅಂಕಗಳನ್ನು ಪಡೆದು ಉತ್ತೀರ್ಣರಾಗಿರುವ ಇಂಜಿನೀಯರಿಂಗ ಮತ್ತು ಮೆಡಿಕಲ್ ಪದವಿಗಳಿಗೆ ಪ್ರವೇಶ ಪಡೆಯ ಬಯಸುವವರು ಅರ್ಜಿ ಹಾಕಲು ಅರ್ಹರಿರುತ್ತಾರೆ.

ಕರ್ನಾಟಕದಲ್ಲಿ ಇಂಜಿನೀಯರಿಂಗ್ ಸೇರ ಬಯಸುವ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆಯಲ್ಲಿ 25000ಕ್ಕಿಂತ ಕಡಿಮೆರ‍್ಯಾಂಕ್ ಹಾಗೂ ಮೆಡಿಕಲ್ ಸೇರ ಬಯಸುವವರು ನೀಟ್ ಪರೀಕ್ಷೆಯಲ್ಲಿ 3000ಕ್ಕಿಂತ ಕಡಿಮೆ ರ‍್ಯಾಂಕ್ ಹಾಗೂ ಅಖಿಲ ಭಾರತ ನೀಟ್ ರ‍್ಯಾಂಕಿಂಗ್‌ದಲ್ಲಿ 60,000ಕ್ಕಿಂತ ಕಡಿಮೆ ರ‍್ಯಾಂಕ್ ಪಡೆದಿರಬೇಕು. ಕುಟುಂಬದ ವರಮಾನ ಮಾಸಿಕ ರೂ.15 ಸಾವಿರಕ್ಕಿಂತ ಕಡಿಮೆ ಇರಬೇಕು ಎಂದು ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಲು ವಿದ್ಯಾಪೋಷಕದ **www.vidyaposhak.** ಟಿಂಡಿ ವೆಬ್‌ಸೈಟ್‌ದಲ್ಲಿರುವ ಅರ್ಜಿಯನ್ನುಆನ್‌ಲೈನದಲ್ಲಿ ಇದೇ ಜೂನ್ 30ರ ಒಳಗಾಗಿ ಸಲ್ಲಿಸಬೇಕು. ಅಧಿಕ ಮಾಹಿತಿಗಾಗಿ ಬೆಳಗಾವಿ ಜಿಲ್ಲಾ ವಿದ್ಯಾಪೋಷಕ ಸಂಸ್ಥೆಯ ಕಾರ್ಯನಿರ್ವಾಹಕಿ ರೇಣುಕಾ ಐರಾಣಿ (ದೂರವಾಣಿ ಸಂಖ್ಯೆ: 0836–2747357/8861201828) ಅವರನ್ನು ಸಂಪರ್ಕಿಸಲು ಮೂಡಲಗಿಯ ವಿದ್ಯಾಪೋಷಕ ಸಂಸ್ಥೆಯ ಹಿರಿಯ ಸ್ವಯಂ ಸೇವಕ ಬಾಲಶೇಖರ ಬಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಯೋಗದ ಸತ್ಸಂಗ ಸಂಸ್ಥೆಯ ಶಾಖೆಗಳಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆ

# ಯೋಗದಿಂದ ಆರೋಗ್ಯ ವೃದ್ಧಿ: ಶಶಿಕಾಂತ ಚುನಮರಿ



ಬೆಳಗಾವಿ: ಬೈಲಹೊಂಗಲದ ವ್ಯಾಪ್ತಿಯ ಸಂಗ್ರೇಶಕೊಪ್ಪದ ಸರಕಾರಿ ಕನ್ನಡ ಮಾಧ್ಯಮ ಹಿರಿಯ ಶಾಲೆಯಲ್ಲಿ 8, 9 ಮತ್ತು 10ನೇ ತರಗತಿಯ ಮಕ್ಕಳಿಗಾಗಿ ಯೋಗದ ಸತ್ಸಂಗ ಸಂಸ್ಥೆಯ ಶಾಖೆಗಳಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಒಂದು ವಿಶೇಷ ಯೋಗ ದಿನಾಚರಣೆಯ ಕರ್ಯಕ್ರಮ ಚಾಲನೆ ನೀಡಿದರು.

ಈ ವೇಳೆ ಬೆಳಗಾವಿಯ ಯೋಗಾ ಹಿರಿಯ ಸಾಧಕರಾದ ಶಶಿಕಾಂತ ಚುನಮರಿ ಅವರು ಮಾತನಾಡಿ, ಆರೋಗ್ಯವಾಗಿ ಇರಬೇಕಾದರೆ ನಿತ್ಯ ಯೋಗ ಮಾಡುವುದನ್ನು ರೂಢಿಸಿಕೊಳ್ಳಬೇಕು. ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುವ ಒಂದು ಅತ್ಯುತ್ತಮ ಅಭ್ಯಾಸವಾಗಿದೆ. ನಿಯಮಿತ ಯೋಗಾಭ್ಯಾಸದಿಂದ, ಹೃದಯರಕ್ತನಾಳದ ಆರೋಗ್ಯ ಸುಧಾರಿಸುತ್ತದೆ, ನೋವು ಕಡಿಮೆಯಾಗುತ್ತದೆ, ಮಾನಸಿಕ ಆರೋಗ್ಯ ಸುಧಾರಿಸುತ್ತದೆ ಮತ್ತು ಉಸಿರಾಟದ ಆರೋಗ್ಯ ವೃದ್ಧಿಯಾಗುತ್ತದೆ ಎಂದು ಶಾಲಾ



ವಿದ್ಯರ್ಥಿಗಳಿಗೆ ಯೋಗ–ಧ್ಯಾನದ ಪರಿಚಯ ಮತ್ತು ಅದರ ಮಹತ್ವವನ್ನು ತಿಳಿಸಿದರು.

ಮಕ್ಕಳಿಗಾಗಿ ಯೋಗದಾ ಸತ್ಸಂಗ ಧ್ಯಾನ ಮಂಡಳಿಯಿಂದ ಯೋಗಾ ಕರ್ಯ ಆಯೋಜಿಸಲಾಗಿದೆ. ಮಕ್ಕಳು ಆಟ– ಪಾಠದೊಂದಿಗೆ ಯೋಗವನ್ನು ಮಾಡಬೇಕು.

ನಮ್ಮ ಅಂಗೈಯಲ್ಲೇ ಆರೋಗ್ಯವಿದ್ದು, ಯೋಗದಿಂದ ಆರೋಗ್ಯವು ವೃದ್ಧಿಯಾಗುತ್ತದೆ. ನಮ್ಮ ನಿತ್ಯ ಕರ್‍ಯವು ಯೋಗಾಸನ ಮತ್ತು ಪ್ರಾಣಾಯಾಮದ ಆಚರಣೆಯಿಂದಲೇ ಆರಂಭಗೊಳ್ಳಬೇಕು ಎಂದು ಹೇಳಿದರು.

ಶಾಲೆಯ ಒಟ್ಟು 330 ಶಾಲಾ ವಿದ್ಯಾರ್ಥಿಗಳು, 15 ಬೋಧಕ ಸಿಬ್ಬಂದಿ ಹಾಗೂ ಪ್ರಾಂಶುಪಾಲರು ಈ ಕರ್‍ಯಕ್ರಮದಲ್ಲಿ ಭಾಗವಹಿಸಿದ್ದರು. ನಂತರ ತಮ್ಮ ಮೆಚ್ಚುಗೆಯನ್ನು ಸೂಚಿಸಿದರು.

ಈ ವೇಳೆ ಮಂಜುಳಾ ಚುನಮರಿ, ಯೋಗದಾ ಸತ್ಸಂಗ ಧ್ಯಾನ ಕೇಂದ್ರ, ಬೈಲಹೊಂಗಲದ ಸಾಧಕರಾದ ಎಮ್ ಎಸ್ ಕುಂಬಾರ, ಪಟ್ಟಿಹಾಳ ಹಾಗೂ ಸುನೀಲ್ ಮೆಟಗುಡ್ ಹಾಗೂ ಇತರರು ಇದ್ದರು.

# ಯುವನಿಧಿ ಯೋಜನೆ: 3 ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಸೂಚನೆ

ಕೊಪ್ಪಳ ಯುವನಿಧಿ ಯೋಜನೆಯ ಫಲಾನುಭವಿಗಳು ಪ್ರಸ್ತುತ ಮಾಸಿಕವಾಗಿ ದಾಖಲಿಸುತ್ತಿರುವ ಸ್ವಯಂ ಘೋಷಣೆಯ ಬದಲಾಗಿ ಇನ್ನುಮುಂದೆ ಮೂರು ತಿಂಗಳಿಗೊಮ್ಮೆ ಸ್ವಯಂ ಘೋಷಣೆ ಸಲ್ಲಿಸಲು ಸೂಚಿಸಲಾಗಿದೆ.

ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಯಾವುದೇ ಅಂತಿಮ ದಿನಾಂಕ ಇರುವುದಿಲ್ಲ. ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಸೇವಾ ಸಿಂಧು ಪೋರ್ಟ್‌ಲ್‌ನಲ್ಲಿ ಚಾಲನೆಯಲ್ಲಿರುತ್ತದೆ. ಆದಕಾರಣ 2023 ಅಥವಾ 2024ನೇ ಸಾಲಿನಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆಯಾಗಿ ಅರ್ಜಿ ಸಲ್ಲಿಸದೇ ಇರುವ ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟ್‌ಲ್ **http://sevasindhugs.karnataka.gov.in** ನಲ್ಲಿ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕೊಪ್ಪಳ ಯುವನಿಧಿ ಸಹಾಯವಾಣಿ ಸಂಖ್ಯೆ: 18005997154 ನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಆರೋಗ್ಯ ಪಡೆಯಲು ಯೋಗಾಭ್ಯಾಸ ಅವಶ್ಯಕ

ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನಗರಸಭೆ ಗದಗ ಬೆಟಗೇರಿ ಇವರುಗಳ ಸಂಯುಕ್ತಾಶ್ರಯದಲ್ಲಿ ಜೂನ್ 21 ರಂದು 11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಜೂನ್ 19 ರಂದು ನಗರದ ಮುನ್ಸಿಪಲ್ ಆವರಣದಿಂದ ಸಾಮೂಹಿಕ ಯೋಗ ನಡಿಗೆಗೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಚಾಲನೆ ನೀಡಿದರು

ನಂತರ ಮಾತನಾಡಿದ ಅವರು ಯೋಗವು ಮನುಷ್ಯನ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯದ ಸರಳ ಸೂತ್ರವಾಗಿದೆ. ಇಡೀ ಮನುಷ್ಯ ಜನಾಂಗದ ಏಳಿಗೆಗೆ , ಸಂತೋಷಕ್ಕೆ, ನೆಮ್ಮದಿಗೆ ತೃಪ್ತಿಗೆ ಬೇಕಾಗುವ ಬಹುದೊಡ್ಡ ಸಾಧನವೇ ಯೋಗವಿದ್ಯೆಯಾಗಿದೆ ಎಂದು ಹೇಳಿದರು

ವಿಧಾನ ಪರಿಷತ್ತ ಎಸ್ ವಿ ಸಂಕನೂರ ಮಾತನಾಡಿ ಜೀವ ಜಗತ್ತಿಗೆ ಭಾರತ ದೇಶವು ನೀಡಿದ ಅತ್ಯದ್ಭುತ ಕೊಡುಗೆಯೆಂದರೆ "ಯೋಗ " ವಾಗಿದೆ. ಯೋಗವು ಪ್ರಾಚೀನ ಭಾರತೀಯ ತತ್ವ ಶಾಸ್ತ್ರವಾಗಿದ್ದು ಸಾವಿರಾರು ವರ್ಷಗಳ ಹಿಂದಿನ ಇತಿಹಾಸ ಹೊಂದಿದೆ. ಯೋಗವು ಋಷಿಮುನಿಗಳ ಕೊಡುಗೆ ಯಾಗಿದೆ ಎಂದು ಹೇಳಿದರು.

2015 ರಿಂದ ಭಾರತ ಸರಕಾರವು



ಯೋಗ ವನ್ನು ಜಗತ್ತಿಗೆ ಪರಿಚಯಿಸಿದೆ. ಪತಂಜಲಿ ಮಹರ್ಷಿಗಳನ್ನು ಯೋಗದ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. ಅವರು ಯೋಗ ಸೂತ್ರಗಳನ್ನು ರಚಿಸಿದರು. ಯೋಗದಿಂದ ಮನಸ್ಸಿನ ಕಲ್ಮಶಗಳನ್ನು,ಪದಗಳಿಂದ ಭಾಷೆಯ ದೋಷಗಳನ್ನು ಮತ್ತು ವೈದ್ಯಕೀಯದಿಂದ ಶರೀರದ ದೋಷಗಳನ್ನು ನಿವಾರಿಸಿದೆ ಎಂದು ಹೇಳಿದರು

ನಗರದ ಮುನ್ಸಿಪಲ್ ಕಾಲೇಜು ಆವರಣದಿಂದ ಸಾಮೂಹಿಕ ಯೋಗ ನಡಿಗೆಯಲ್ಲಿ ಘೋಷವಾಕ್ಯ "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' 'ಉತ್ತಮ ಆರೋಗ್ಯಕ್ಕೆ ಸಂಜೀವಿನಿ ಯೋಗ" ಸದೃಡ ಆರೋಗಕ್ಕೆ ಯೋಗ ರಾಮಭಾಣ" "ಶರೀರ ಮತ್ತು ಮನಸ್ಸನ್ನು ಸದೃಡಗೊಳಿಸುವ ಏಕೈಕ ಸಾಧನವೆ ಯೋಗ" ಎಂಬ ಶ್ಲೋಘನ ಕೂಗುತ್ತಾ ಸಾಗಿದರು ಹಾಗೂ ಯೋಗದ ಕೂ-ರಿತು ಬ್ಯಾನರ ಹಾಗೂ ಶ್ಲೋಘನ ಇಡಿದು ವಿದ್ಯಾರ್ಥಿಗಳು ನಾಗರಿಕರಿಗೆ ಯೋಗದ ಕುರಿತು ಜಾಗೃತಿ ಮುಡಿಸುತ್ತಾ ನಗರಸಭೆ ಕಾಲೇಜು ಮೈದಾನದಿಂದ ಗಾಂಧಿ ವೃತ್ತ, ಶಹಾಪುರ್ ಪೇಟೆ, ಮಹೇಂದ್ರಕರ ವೃತ್ತ, ಹುಯಿಲಗೋಳ ನಾರಾಯಣ ರಾವ್ ವೃತ್ತ, ರೋಟರಿ ವೃತ್ತ, ಗಾಂಧಿ ವೃತ್ತದ ಮೂಲಕ ನಗರಸಭೆ ಕಾಲೇಜು ಮೈದಾನದವರೆಗೆ ಜಾಗೃತಿಗಾಗಿ ಯೋಗ ನಡಿಗೆ ಮುಕ್ತಾಯ ಗೊಂಡಿತು

ಈ ಸಧರ್ಬದಲ್ಲಿ ಜಿಲಾ ್ಲಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಜಿಲ್ಲಾ ಆಯುಷ್ ಅಧಿಕಾ-ರಿಗಳು ಜಿಲ್ಲಾ ಆಯುಷ್ ಇಲಾಖೆ ಜಯಪಾಲಸಿಂಗ ಪಿ ಸಮೋರೆಕರ, ತಾಲೂಕು ಗ್ಯಾರಂಟಿ ಯೊಜನೇಯ ತಾಲೂಕು ಸಮಿತಿ ಅಧ್ಯಕ್ಷರು ಅಶೋಕ ಮಂದಾಲಿ, ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರು ಕೃಷ್ಣಗೌಡ ಪಾಟೀಲ, ಯೋಗ ಪರಿಣಿತರು ಗದಗನ ಡಿ ಜಿ ಎಮ್ ಆಯುರ್ವೇಧಿಕ ಕಾಲೇಜು ವಿದ್ಯಾರ್ಥಿಗಳು ರೋಣದ ಡಿ.ಜಿ.ಎಮ್ ಕಾಲೇಜಿನ ಬಿ.ಎ. ಎಮ್.ಎಸ್ ವಿದ್ಯಾರ್ಥಿಗಳು ನಗರದ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು, ಮತ್ತು ವಿವಿಧ ಹಲವಾರು ಸಂಘ ಸಂಸ್ಥೆ ಗಳು ಶಾಲಾ ಕಾಲೇಜು ಪ್ರಾಧ್ಯಪಕರು ಉಪಸ್ಥಿತರಿದ್ದರು

# ವಿವೇಕ ಜಾಗೃತ ಬಳಗದ ನೇತೃತ್ವದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ



ರಾಮದುರ್ಗ : ಪಟ್ಟಣದ ನವಿಪೇಟೆಯ ಶ್ರೀ ವೀರಭದ್ರೇಶ್ವರ ದೇವಸ್ಥಾದ ಸಭಾಂಗಣದಲ್ಲಿ ವಿವೇಕ ಜಾಗೃತ ಬಳಗದ ನೇತೃತ್ವದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ಜರುಗಿತು.

ನೇತ್ರ ತಪಾಸಕರಾದ ಆತ್ಮಾಂದ ಕಂಬಾರ, ದೀಪಕ ಕಂಬಾರ, ಸುಮಾರು 115ಕ್ಕೂ ಹೆಚ್ಚು ಜನರ ನೇತ್ರ ತಪಾಸನೆ ನಡೆಸಿ, ನೇತ್ರ ಸಂರಕ್ಷಣೆ ಹಾಗೂ ಅರೋಗ್ಯ ಕುರಿತು ಮಾಹಿತಿ ನೀಡಿದರು.

ವಿವೇಕ ಜಾಗೃತಿ ಬಳಗದ ಅಧ್ಯಕ್ಷೆ ಸುಮನ ವಜ್ಜರಮಟ್ಟಿ ಮಾತನಾಡಿ, ಡಿವೈನ್ ಪಾರ್ಕನ ವಿವೇಕ ಜಾಗೃತ ಬಳಗವು ಯುವಕರಲ್ಲಿ ಜಾಗೃತಿ, ಮಹಿಳೆಯರ ಕೌಶಲ್ಯಾಭಿವೃದ್ಧಿ, ಸ್ವಾವ ಲಂಬನೆ, ಅದ್ಯಾತ್ಮಿಕದ ಜೊತೆ ಜೊತೆಗೆ ಸಾಮಾಜಿಕ ಕಾರ್ಯಕ್ರಮ ಆಯೋಜಿಸಿ ಜನರಿಗೆ ಅರೋಗ್ಯ ಮಾಹಿತಿ ಕಾರ್ಯಗಾರಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೀಣಾ ಪಟ್ಟಣ, ಶೋಭಾ ದಾನಪ್ಪನವರ ಸೇರಿದಂತೆ ಜಾಗೃತ ಬಳಗದ ಸದಸ್ಯರು ಹಾಗೂ ಕಾರ್ಯಕರ್ತರು ಇದ್ದರು.

## ಹಡಪದ ಸಮಾಜದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ರವಿವಾರ

ಬೆಳಗಾವಿ : ಕರ್ನಾಟಕ ರಾಜ್ಯ ಹಡಪದ ನೌಕರರ ಸಂಘದ ವತಿಯಿಂದ ಜೂನ್ 22 ರಂದು ಬೆಳಗ್ಗೆ 9 ಕ್ಕೆ ನಗರದ ಕುಮಾರ ಗಂಧರ್ವ ಸಭಾಭವನದಲ್ಲಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇಕಡಾ 80 ಕ್ಕಿಂತ ಹೆಚ್ಚು ಅಂಕ ಪಡೆದ ಬಡ ಪ್ರತಿಭಾವಂತ ಹಡಪದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹುಬ್ಬಳ್ಳಿ-ಧಾರವಾಡ ಸೈಬರ್ ಕ್ರೈಂ ವಿಭಾಗದ ಡಿಸಿಪಿ ರವೀಶ ಚಿಕ್ಕನಾಯಕನಹಳ್ಳಿ, ಅಳ್ನಾವರ ತಹಶೀಲ್ದಾರ್ ಬಸವರಾಜ ಬೆಣ್ಣೆ ಶಿರೂರು, ಶಿವಮೊಗ್ಗ ಲೋಕಾಯುಕ್ತ ಸಿಪಿಐ ಗುರುರಾಜ ಮೈಲಾರ, ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಬಿ.ಎಸ್.ನಾವಿ, ನಗರ ಸೇವಕಿ ವೀಣಾ ಬಿಜಾಪುರ, ಮತ್ತು ಎಸ್ ಎಚ್ ಇ ಎ ರಾಜ್ಯಾಧ್ಯಕ್ಷ ಪ್ರಕಾಶ ಹಡಪದ ಉಪಸ್ಥಿತರಿರುವರು. ಹಡಪದ ಸಮಾಜದ ನೌಕರರು ಮತ್ತು ಸಮಾಜ ಬಾಂಧವರು ತಮ್ಮ ಪ್ರತಿಭಾವಂತ ವಿದ್ಯಾರ್ಥಿಗಳೊಂದಿಗೆ ಕಾರ್ಯಕ್ರಮದಲ್ಲಿ ಹಾಜರಿರುವಂತೆ ಕೋರಲಾಗಿದೆ.

# ಭೂಮಿ ಪೂಜೆ




ಯರಗಟ್ಟಿ: ಸಮೀಪದ ಮೆಳ್ಳಿಕೇರಿ ಗ್ರಾಮದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಡಿ ಮೆಳ್ಳಿಕೇರಿ ಗ್ರಾಮ ಹತ್ತಿರದ ಹಳ್ಳಕ್ಕೆ "ಚೆಕ್ ಡ್ಯಾಮ" (ಸೈಟ-1, 2 & 3) ಅಂದಾಜು ಮೊತ್ತ ರೂ.65 ಲಕ್ಷ ಮತ್ತು ರೂ.70 ಲಕ್ಷ. ನಿರ್ಮಾಣ ಕಾಮಗಾರಿ ಭೂಮಿ ಪೂಜೆ ನೆರವೇರಿಸಿ ಶಾಸಕ ವಿಶ್ವಾಸ ವೈದ್ಯ.

ಮಳ್ಳಿಕೇರಿ ವ್ಯಾಪ್ತಿ ಪ್ರದೇಶಗಳಲ್ಲಿ ಹಳ್ಳಕ್ಕೆ ಚೆಕ್ ಡ್ಯಾಂಗಳನ್ನು ನಿರ್ಮಿಸುವುದರಿಂದ ಮಳೆಗಾಲದಲ್ಲಿ ನೀರು ನಿಂತ ಅಂತರ್ಜಲ ಹೆಚ್ಚಾಗುತ್ತದೆ. ಕಳೆದ ಬಾರಿಯ ಪ್ರವಾಹದಲ್ಲಿ ನೀರು ನಿಲ್ಲದೇ ರಸ್ತೆಯಲ್ಲಿ ನುಗ್ಗಿ ಅವಾಂತರ ಸೃಷ್ಟಿಯಾಗಿತ್ತು. ಮುಂದೆ ಅಂತಹ ಸಮಸ್ಯೆ ಬಾರದಂತೆ ಈಗ ಸರ್ಕಾರದಿಂದ ಅನುದಾನ ತಂದು ಚೆಕ್ ಡ್ಯಾಂಗಳನ್ನು ಪುನಶ್ಚೇತನ ಗೊಳಿಸಲಾಗುತ್ತಿದೆ. ಇದ-ರಿಂದ ಈ ಭಾಗದಲ್ಲಿ ಮಳೆ ನೀರು ನಿಂತ ಪರಿಣಾಮ ರೈತರು ವ್ಯವಸಾಯ ಮಾಡಲು ಅನುಕೂಲವಾಗುತ್ತದೆ' ಎಂದು ತಿಳಿಸಿದರು.

ಈ ವೇಳೆ ಬೆಮೂಲ ನಿರ್ದೇಶಕ ಶಂಕರ ಇಟ್ನಾಳ, ಎಪಿಎಂಸಿ ಅಧ್ಯಕ್ಷ ನೀಲಕಂಠ ಶೀದಬಸನ್ನವರ , ಆರ್ ಕೆ ಪಟಾತ್, ಪಡೆಪ್ಪ ನರಿ, ಎಪಿಎಂಸಿ ಸದಸ್ಯ ಲಕ್ಷ್ಮಣ ದಳವಾಯಿ, ನಾಗರಾಜ ದೇಸಾಯಿ , ಬಸವರಾಜ ಪೂಜೇರಿ, ಭೀಮಶಿ ಕುಲಗೋಡ,ವಿಠ್ಠಲ ದಳವಾಯಿ, ಪಕೀರಪ್ಪ ಕುರಬೇಟ, ಹಣಮಂತ ಇಟ್ನಾಳ, ಗೂಳಪ್ಪ ಭಾವಿಕಟ್ಟಿ, ಮಾರುತಿ ಉಪ್ಪಾರ, ಗ್ರಾಮದ ಗುರು ಹಿರಿಯರು, ಸ್ಥಳೀಯ ಮುಖಂಡರು, ರೈತಬಾಂಧವರು, ಯುವ ಮಿತ್ರರು ಉಪಸ್ಥಿತರಿದ್ದರು.

# ವಿದ್ಯೆಯ ಜೊತೆಗೆ ಕಾನೂನು ಅರಿವು ಮುಖ್ಯ-ಆಶಪ್ಪ

ರಬಕವಿ-ಬನಹಟ್ಟಿ,ಜೂ19: ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ವಿದ್ಯೆ, ಸಂಸ್ಕಾರದ ಜೊತೆಗೆ ಕಾನೂನಿನ ಅರಿವು ಕೂಡಾ ಮುಖ್ಯವಾಗಿದೆ ಎಂದು ಬಾಗಲಕೋಟೆಯ ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ತಿಳಿಸಿದರು.

ಅವರು ಗುರುವಾರ ಇಲ್ಲಿನ ಪೂರ್ಣ ಪ್ರಜ್ಞೆ ಶಿಕ್ಷಣ ಸಂಸ್ಥೆಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಬನಹಟ್ಟಿಯ ಕಾನೂನು ಸೇವಾ ಪ್ರಾಧಿಕಾರದ ಆಶ್ರಯದಲ್ಲಿ ನಡೆದ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಾಲ್ಯ ವಿವಾಹ ಒಂದು ಸಾಮಾಜಿಕ ಪಿಡುಗು ಆಗಿದ್ದು ಇದನ್ನು ತಳದಿಂದಲೇ ತೆಗೆದು




ಹಾಕಬೇಕು. ಬಾಲ್ಯ ವಿವಾಹ ಒಂದು ಅಪರಾಧವಾಗಿದ್ದು, ಬಾಲ್ಯ ವಿವಾಹವನ್ನು ತಡೆಗಟ್ಟುವ ನಿಟ್ಟಿನಲ್ಲಿ ಆಶಾ ಯೋಜನೆಯನ್ನು ಜಾ-ರಿಗೆ ಜಾರಿಗೆ ತರಲಾಗಿದೆ ಎಂದು ಚಂದ್ರಶೇಖರ ದಿಡ್ಡಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಸ್ಥಳೀಯ ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶ ಆಶಪ್ಪ ಸಣಮನಿ ಮಾತನಾಡಿ, ವಿದ್ಯಾರ್ಥಿಗಳು ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು. ವಿದ್ಯಾರ್ಥಿಗಳು ಕಾನೂನಿನ ಬಗ್ಗೆ ಅರಿತುಕೊಂಡು ಅದನ್ನು ಬೇರೆಯವರಿಗೆ ತಿಳಿಸುವ ಅಗತ್ಯವಿದೆ. ಕಾನೂನು ಪ್ರಸಾರ ಮಾಡುವಲ್ಲಿ ವಿದ್ಯಾರ್ಥಿಗಳ ಪಾತ್ರ ಮುಖ್ಯವಾಗಿದೆ ಎಂದು ತಿಳಿಸಿದರು.

ಕಾಲೇಜು ಪ್ರಾಚಾರ್ಯಅದೃಶಯ್ಯ ಕಾಡದೇವರ ಮಾತನಾಡಿ, ಕಾನೂನು ಕಾರ್ಯಾಗಾರದಲ್ಲಿ ಹೇಳಿದ ವಿಷಯಗಳನ್ನು ಪ್ರತಿಯೊಬ್ಬ ವಿದ್ಯಾರ್ಥಿ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಅವಳಿ ನಗರಗಳ ವಿವಿಧ ಶಾಲಾ ಕಾಲೇಜುಗಳಲ್ಲಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಗಳು ನಡೆದವು. ಕಾರ್ಯಕ್ರಮದಲ್ಲಿ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಇದ್ದರು.

***

# ೯ ತಿಂಗಳು ಅಧ್ಯಕ್ಷರಾದಾಗಿನಿಂದ ನಡೆದಿಲ್ಲ ಅನುಮೋದನೆ, ಕಾಮಗಾರಿ..!

**ವರದಿ : ಮಲ್ಲಿಕಾರ್ಜುನ ತುಂಗಳ**

ರಬಕವಿ-ಬನಹಟ್ಟಿ,ಜೂ19: ಇದು ಸ್ಥಳೀಯ ನಗರಸಭೆ ಅಧ್ಯಕ್ಷರ ವ್ಯಥೆ. ಕಳೆದ ಸೆ.19 ರಂದು ನಗರಸಭಾ ಅಧ್ಯಕ್ಷರಾಗಿ ಅಧಿಕಾರ ಸ್ವೀಕ-ರಿಸಿದ ಬನಹಟ್ಟಿಯ ವಿದ್ಯಾ ಪ್ರವೀಣ ದಭಾಡಿ ಇಂದಿಗೂ ಒಂದೇ ಒಂದು ಕಾಮಗಾರಿಗೆ ಅನುಮೋದನೆ ಅಥವಾ ಸಂಬಂಧಿಸಿದ ಶಂಕುಸ್ಥಾಪನೆ ಮಾಡಿಲ್ಲ.

ಹೌದು, ಇದು ಅಕ್ಷರಸಹ ಸತ್ಯ. ಬಿಜೆಪಿಯ ಕೈವಶವಾಗಿರುವ ರಬಕವಿ-ಬನಹಟ್ಟಿ ನಗರಸಭೆಗೆ ದಭಾಡಿ ಅಧ್ಯಕ್ಷ ಸ್ಥಾನಕ್ಕೇರಿದ್ದರು. ಕಳೆದ 9 ತಿಂಗಳಿಂದ ಕಾಮಗಾರಿ ನಡೆಸದಿರುವದು ನಗರಸಭೆಯ ಅಭಿವೃದ್ಧಿಗೆ ಹಿಡಿದ ಕನ್ನಡಿಯಾಗಿದೆ.



ಕಳೆದೊಂದು ವರ್ಷದಿಂದ ಯಾವದೇ ಅನುದಾನ, ವಿಶೇಷ ಯೋಜನೆ ಸೇರಿದಂತೆ ಯಾವೊಂದೂ ಕಾಮಗಾರಿಗಳಿಗೆ ಅವಕಾಶವಿಲ್ಲದ ಕಾರಣ ಎಲ್ಲ 31 ಸದಸ್ಯರೂ ಕೇವಲ ಸಭೆಗಳಿಗೆ ಹಾಗು ಸಾಮಾನ್ಯ ಸಭೆಗಳ ಹಾಜರಾತಿಗೆ ಮಾತ್ರ ಸೀಮಿತವಾಗಿದ್ದಾರೆ.

ಜಿಲ್ಲೆಯಲ್ಲಿಯೇ ಎರಡನೇ ದೊಡ್ಡ ನಗರಸಭೆಯಾಗಿರುವ ರಬಕವಿ-ಬನಹಟ್ಟಿಯು ಮೂಲಭೂತ ಸೌಕರ್ಯಗಳ ಕೊರತೆಯಿಂದ ಬಳಲುತ್ತಿದ್ದರೆ, ಮತ್ತೊಂದೆಡೆ ತಾಲೂಕಾ ಕೇಂದ್ರವಾಗಿ ದಶಕವೇ ಕಳೆದರೂ ಅಭಿವೃದ್ಧಿ ಎನ್ನುವದು ಮರೀಚಿಕೆಯಾಗಿದೆ. ಈಗಷ್ಟೇ 15ನೇ ಹಣಕಾಸು ಯೋಜನೆಯಡಿ ನಗರಸಭೆಗೆ 3.86 ಕೋಟಿ ರೂ. ಅನುದಾನ ಬಿಡುಗಡೆಗೊಳ್ಳುವಲ್ಲಿ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿಯಾದರೂ ಸಾರ್ವಜನಿಕರಿಗೆ ಸಹಕಾರಿಯಾಗಬೇಕಿದೆ.



**'9 ತಿಂಗಳ ನನ್ನ ಅವಧಿಯಲ್ಲಿ ಒಂದೂ ಅನುಮೋದನೆ ನಡೆಯದೆ ಸಾರ್ವಜನಿಕರ ಸಮಸ್ಯೆಗಳ ಸ್ಪಂದನೆಗೆ ತೊಂದರೆಯಾಗಿದೆ. ಅಧ್ಯಕ್ಷ ಹುದ್ದೆಗೆ ಬೆಲೆಯೇ ಇಲ್ಲದಂತಾಗಿದೆ.**
**-ವಿದ್ಯಾ ಪ್ರವೀಣ ದಭಾಡಿ, ನಗರಾಧ್ಯಕ್ಷೆ.**

**'ಹಾಲಿ ನಗರಾಧ್ಯಕ್ಷರ ಅವಧಿಯಲ್ಲಿ ಅಮೃತ-2 ಯೋಜನೆ ಸೇರಿದಂತೆ ಹಲವಾರು ಯೋಜನೆಗಳು ನಡೆದಿವೆ. ಅಧ್ಯಕ್ಷರಾಗಿ ಕಾಮಗರಿ ಅನುಮೋದಿಸುವ ಬದಲು ಶಂಕು ಸ್ಥಾಪನೆ, ಕಾಮಗಾರಿ ನಡೆದಿವೆ.**
**-ಜಗದೀಶ ಈಟಿ, ಪೌರಾಯುಕ್ತ.**

# ಕೃಷ್ಣೆಗಾಗಿ ಒಗ್ಗಟ್ಟಿನ - ನಮ್ಮ ಹಕ್ಕಿನ ಕೂಗು ನಡೆದಿಲ್ಲ : ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿಕೆ




ಇಂಡಿ : ಕಳೆದ 61 ವರ್ಷಗಳಿಂದ ನಮ್ಮನ್ನು ಆಳಿದ ಕೇಂದ್ರ ಮತ್ತು ರಾಜ್ಯ ಸರಕಾರಗಳು ನಮ್ಮ ಪಾಲಿಗೆ ಬರಬೇಕಾದ ಹಕ್ಕು ನಮಗೆ ನೀಡುತ್ತಿಲ್ಲ.ನಾವು ಕೃಷ್ಣಾ ನೀರಿನಿಂದ ವಂಚಿತರಾಗುತ್ತಿದ್ದು ಕಾವೇರಿ ನೀರಿಗಾಗಿ ಕೇಂದ್ರ ಮತ್ತು ವಿಧಾನಸಭೆಯಲ್ಲಿ ಕಾವೇ-ರಿದ ವಾತಾವರಣ ವಾಗುತ್ತಿತ್ತು. ಕೃಷ್ಣೆಗಾಗಿ ಒಗ್ಗಟ್ಟಿನ ಮತ್ತು ನಮ್ಮ ಹಕ್ಕಿನ ಕೂಗು ನಡೆದಿಲ್ಲ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ಪಟ್ಟಣದ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ನಡೆದ ಜು.9 ರಂದು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳು ಇಂಡಿಗೆ ಬಂದು ಸುಮಾರು 4200 ಕೋಟಿ ರೂ ಉದ್ಘಾಟನೆ, ಶಂಕುಸ್ಥಾಪನೆ, ಭೂಮಿಪೂಜೆ ಕಾಮಗಾರಿಗೆ ಕುರಿತು ಬರುವ ಸಮಾರಂಭದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಿದ್ದರು.

ಶ್ರೀ ರೇವಣಸಿದ್ದೇಶ್ವರ ಏತ ನೀರಾವರಿಗೆ ರೂ 3000 ಕೋಟಿ ರೂ, 19 ಕೆರೆ ತುಂಬುವ ಯೋಜನೆಗೆ ರೂ 232 ಕೋಟಿ ರೂ ತಿಡಗುಂದಿ ಕಾಲುವೆಗೆ 534 ಕೋಟಿ ರೂ, ಪಂಡರಪೂರ ಗಾಣಗಾಪುರ ಹೆದ್ದಾರೆಗೆ ಚಡಚಣದಿಂದ ಗಾಣಗಾಪುರ ವರೆಗೆ 540 ಕೋಟಿ ಸೇರಿದಂತೆ ಒಟ್ಟು 4200 ಕೋಟಿ ವೆಚ್ಚದ ಕಾಮಗಾರಿ ಉದ್ಘಾಟನೆ ಮತ್ತು ಶಂಕುಸ್ಥಾಪನೆಗೆ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ಬರುತ್ತಿದ್ದಾರೆ ಎಂದರು.

ಅದಲ್ಲದೆ ರೋಡಗಿ ಬ್ರೀಡ್ಜ 5 ಕೋಟಿ, 8 ಗ್ರಾಮಗಳಿಗೆ ಸಮುದಾಯ ಭವನ, ಮೌಲಾನಾ ಅಬ್ದುಲ್ ವಸತಿ ಶಾಲೆ,ತಾಂತ್ರಿಕ ಶಿಕ್ಷಣ ಮಹಾವಿದ್ಯಾಲಯ, ತಾಲೂಕಿನ 9 ಪಶು ಆಸ್ಪತ್ರೆ, ಉಡಚಾಣ ಮತ್ತು ಪಡನೂರ ಬ್ರೀಡ್ಜ,ಭೀಮಾ ಬ್ಯಾರೇಜು, ಭ್ಯೂಯಾರ ಬ್ಯಾರೇಜು, ಕಾರ್ಮಿಕರ ಮಕ್ಕಳ ವಸತಿ ಶಾಲೆ, ಸೇರಿದಂತೆ ಹಲವಾರು ಕಾಮಗಾ-ರಿಗಳಿಗೆ ಭೂಮಿಪೂಜೆ ಮತ್ತು ಉದ್ಘಾಟನೆ ನಡೆಯಲಿದೆ ಎಂದರು.

ಇಂಡಿಯ ಪೋಲಿಸ ಮೈದಾನದಲ್ಲಿ ಸಭೆ ನಡೆಯಲಿದ್ದು ಕಾರ್ಯಕರ್ತರು ಹೆಚ್ಚು ಜನ ಸೇರಿಸಬೇಕು. ನಮ್ಮ ತಾಲೂಕಿನಲ್ಲಿ 72000 ಮಹಿಳೆಯರು ರೂ 2000 ಗ್ಯಾರಂಟಿ ಯೋಜನೆಯಲ್ಲಿ ಪಡೆಯುತ್ತಿದ್ದು ಹೆಚ್ಚು ಮಹಿಳೆಯರಿಗೆ ತಿಳಿ ಹೇಳಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕೇಳಿಕೊಂಡರು.

ಗ್ಯಾರಂಟಿ ಯೋಜನೆಯ ಜಿಲ್ಲಾಧ್ಯಕ್ಷ ಇಲಿಯಾಸ ಬೋರಾಮಣಿ, ತಾಲೂಕಾ ಅಧ್ಯಕ್ಷ ಪ್ರಶಾಂತ ಕಾಳೆ, ಎಂ.ಆರ್.ಪಾಟೀಲ, ಬಾಬು ಸಾವಕಾರ ಮೇತ್ರಿ, ಗುರನಗೌಡ ಪಾಟೀಲ, ತಮ್ಮಣ್ಣ ಪೂಜಾರಿ, ದುಂಡು ಮುಜಗೊಂಡ, ಅಪ್ಪು ಕಲ್ಲೂರ, ನಿವೃತ್ತ ಪ್ರಾಚಾರ್ಯ ಎ.ಪಿ.ಕಾಗವಾಡಕರ, ಜಟ್ಟೆಪ್ಪ ರವಳಿ, ಜಾವೇದ ಮೋಮಿನ, ನಿರ್ಮಲಾ ತಳಕೇರಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಭೀಮಣ್ಣ ಕವಲಗಿ, ಪುರಸಭೆ ಅಧ್ಯಕ್ಷ ಲಿಂಬಾಜಿ ರಾಠೋಡ, ಮಾಜಿ ಅಧ್ಯಕ್ಷ ಶ್ರೀಕಾಂತ ಕುಡಿಗನೂರ, ಸತೀಶ ಕುಂಬಾರ, ರೈಸ ಅಷ್ಟೇಕರ, ಕಲ್ಲನಗೌಡ ಪಾಟೀಲ,ಭೀಮಾಶಂಕರ ಮೂರಮನ, ಮಲ್ಲನಗೌಡ ಬಿರಾದಾರ, ಸತ್ತಾರ ಬಾಗವಾನ,ಅಣ್ಣಪ್ಪ ಬಿದರಕೋಟಿ,ಶೈಲಜಾ ಜಾಧವ, ಸುನಂದಾ ಬಿರಾದಾರ ಮತ್ತಿತ-ರಿದ್ದರು.


# ರಾಷ್ಟ್ರೀಯ ಶ್ರೇಷ್ಠತಾ ಕೇಂದ್ರದ ತರಬೇತಿಗೆ ಪೃಥ್ವಿ ಆಯ್ಕೆ

**ಶಿವಲಿಂಗ ಸಿದ್ನಾಳ**

**ಮಹಾಲಿಂಗಪುರ :** ಮಾರ್ಗದರ್ಶಕನಾಗಿ ತರಬೇತಿ ನೀಡಿದರೆ, ತರಬೇತಿದಾರರೇ ತಂದೆಯಂತೆ ಕಳಕಳಿಯ ಕಾಳಜಿ ತೋ-ರಿದರೆ ಸಾಧನೆಯ ಉತ್ತುಂಗಕ್ಕೇರಲು ಸಾಧ್ಯ ಎಂಬುದಕ್ಕೆ ರಾಷ್ಟ್ರಮಟ್ಟದ ಸಾಧಕಿಯಾದ ಗ್ರಾಮೀಣ ಬಾಲಕಿ ಪೃಥ್ವಿ ಬ್ಯಾಕೋಡ ಸಾಧನೆತಯೇ ಸಾಕ್ಷಿ.

ಸಮೀಪದ ಕೆಸರಗೊಪ್ಪ ಗ್ರಾಮದ ನಿವಾಸಿ, ಪ್ರೌಢಶಾಲೆಯ ಮುಖ್ಯ ಶಿಕ್ಷಕ ಮತ್ತು ದೈಹಿಕ ನಿರ್ದೇಶಕ ಧರೆಪ್ಪ ಬ್ಯಾಕೋಡ ಅವರ ಪುತ್ರಿ ಪೃಥ್ವಿ ರಾಷ್ಟ್ರೀಯ ಶ್ರೇಷ್ಠತಾ ಕೇಂದ್ರದ ತರಬೇತಿಗೆ ಆಯ್ಕೆಯಾಗಿದ್ದಾಳೆ.

ಒಲಿಂಪಿಕ್ಸ್ ಮತ್ತು ಇತರೆ ಅಂತರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಶ್ರೇಷ್ಠತೆ ಸಾಧಿಸಲು ಕ್ರೀಡಾಪಟುಗಳಿಗೆ ತರಬೇತಿ ನೀಡಲು ಭಾರತೀಯ ಕ್ರೀಡಾ ಪ್ರಾಧಿಕಾರ ರಾಷ್ಟ್ರೀಯ ಶ್ರೇಷ್ಠತಾ ಕೇಂದ್ರದ (ಎನ್‌ಸಿಒಇ) ಸ್ಥಾಪಿಸಿದೆ. ಇದು ಅತ್ಯಾಧುನಿಕ ಮೂಲ ಸೌಕರ್ಯ, ಆಟದ ಸೌಲಭ್ಯ, ಕ್ರೀಡಾ ವಿಜ್ಞಾನದ ಬೆಂಬಲ,



ತರಬೇತಿ ಪಡೆದ ಪೌಷ್ಟಿಕ ತಜ್ಞರು ಸೂಚಿಸಿದ ವೈಯಕ್ತಿಕ ಆಹಾರ ಮತ್ತು ಅತ್ಯುತ್ತಮ ತರಬೇತುದಾರರು, ಅರ್ಹ ಬೆಂಬಲ ಸಿಬ್ಬಂದಿ ಮತ್ತು ಉನ್ನತ ಕಾರ್ಯಕ್ಷಮತೆ ನಿರ್ದೇಶಕರ ಅಡಿಯಲ್ಲಿ ಒಟ್ಟಾರೆ ಮೇಲ್ವಿಚಾರಣೆ ಒದಗಿಸುವ ಮೂಲಕ ಭರವಸೆಯ ಕ್ರೀಡಾಪಟುಗಳಿಗೆ ವಿಶೇಷ ತರಬೇತಿ ನೀಡುತ್ತದೆ.

**ಪುತ್ರಿಯ ಉತ್ಸಾಹಕ್ಕೆ ತಂದೆಯ ಪ್ರೋತ್ಸಾಹ:** ಕ್ರೀಡೆಯನ್ನೇ ಉಸಿರಾಗಿಸಿಕೊಂಡು ಗ್ರಾಮೀಣ ಮಕ್ಕಳಿಗೆ ಉಚಿತ ತರಬೇತಿ ನೀಡುವ ಹವ್ಯಾಸಿ ಕ್ರೀಡಾಪಟು ಧರೆಪ್ಪ ಬ್ಯಾಕೋಡ ದೈಹಿಕ ಶಿಕ್ಷಕನಾಗಿ ಪ್ರೌಢಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಲೇ ತನ್ನ ಮಗಳು ಪೃಥ್ವಿಗೆ ಹಗಲಿರುಳು ತರಬೇತಿ ನೀಡಿದ್ದರ ಪರಿಣಾಮ ಪೃಥ್ವಿ ಕ್ರೀಡೆಯಲ್ಲಿ ಸಾಧನೆ ಮಾಡಿ, ಮಿನಿ ಒಲಿಂಪಿಕ್ಸ್‌ನಲ್ಲಿ ಚಾಂಪಿಯನ್ ಆಗಿ, ಟ್ರಯಥ್ಲಾನ್‌ನಲ್ಲಿ ಕಂಚಿನ ಪದಕ ಪಡೆದು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಯನ್ನೂ ಪಡೆದಿದ್ದಾಳೆ.

ಇದೀಗ ಲಕ್ನೋದ ರಾಷ್ಟ್ರೀಯ ಶ್ರೇಷ್ಠತಾ ಕೇಂದ್ರಕ್ಕೆ (ಎನ್‌ಸಿಒಇ) ನಾನಾ ರಾಜ್ಯಗಳಿಂದ ಆಯ್ಕೆಯಾದ 8 ಜನ ಮಹಿಳಾ ಕ್ರೀಡಾಪಟುಗಳ ಪಟ್ಟಿಯಲ್ಲಿ ಪೃಥ್ವಿ ಬ್ಯಾಕೋಡ ಮೊದಲ ಸಾಲಿನಲ್ಲಿದ್ದು, ಕರ್ನಾಟಕದಿಂದ ಆಯ್ಕೆಯಾದ ಏಕೈಕ ಬಾಲಕಿಯಾಗಿದ್ದಾಳೆ. ಉಳಿದ 7 ಜನ ಕ್ರೀಡಾಪಟುಗಳು ಉತ್ತರಪ್ರದೇಶ, ಮಧ್ಯಪ್ರದೇಶ, ಪಂಜಾಬ, ಮಹಾರಾಷ್ಟ್ರ ರಾಜ್ಯಗಳಿಂದ ಆಯ್ಕೆಯಾಗಿದ್ದಾರೆ.

## ಮಾದಕ ವಸ್ತು ನಿಷೇದ ಕುರಿತು ಜಾಗೃತಿ ಕಾರ್ಯಕ್ರಮ

# ಮಾದಕ ವಸ್ತು ಇಡೀ ಜೀವನವೇ ನಾಶ ಮಾಡುತ್ತದೆ-ಸಿಪಿಐ

ತಾಳಿಕೋಟೆ, ಇಂದಿನ ಆಧುನಿಕ ಭರಾಟೆಯಲ್ಲಿರುವ ಯುವ ಸಮೂಹ ಸಿಗರೇಟ್, ಗುಟಕಾ, ತಂಬಾಕು, ಗಾಂಜಾ, ಅಲ್ಲದೇ ಇನ್ನಿತರ ಮಾದಕ ವಸ್ತುಗಳನ್ನು ತಮ್ಮ ಪ್ಯಾಶನ್ ರೀತಿಯಲ್ಲಿ ಬಳಸಿಕೊಳ್ಳುತ್ತಾ ತಮ್ಮ ಇಡೀ ಜೀವನವನ್ನೇ ಬಲಿ ಕೊಡುತ್ತಾ ಸಾಗಿರುವದು ದುರದೃಷ್ಠಕರವಾದ ಸಂಗತಿಯಾಗಿದೆ ಇಂತಹ ಮಾದಕ ವಸ್ತುಗಳ ಸೇವನೆಯಿಂದ ವಿದ್ಯಾರ್ಥಿಗಳು ದೂರವಿದ್ದು ತಮ್ಮ ಜೀವನವನ್ನು ಸುಂದರಗೊಳಿಸಿಕೊಳ್ಳಬೇಕೆಂದು ಸಿಪಿಐ ಮಹ್ಮದ ಫಶುಉದ್ದೀನ್ ಅವರು ಹೇಳಿದರು.

ಪಟ್ಟಣದ ಶ್ರೀ ಖಾಸ್ಗತೇಶ್ವರ ಪಧವಿ ಪೂರ್ವ ಮಹಾ ವಿದ್ಯಾಲಯದ ಆವರಣದಲ್ಲಿ ಸ್ಥಳೀಯ ಪೊಲೀಸ್ ಠಾಣೆಯವತಿಯಿಂದ ಏರ್ಪಡಿಸಲಾದ ಮಾದಕ ವಸ್ತು ನಿಷೇದ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದ ಅವರು ಮಾದಕ ವಸ್ತುಗಳ ಚಟಕ್ಕೆ ಒಮ್ಮೆ ದಾಸರಾದರೆ ಅದ-ರಿಂದ ಹೊರಬರಲು ಬಹಳೇ ಕಷ್ಟದಾಯಕವಾಗಿದೆ ಕೆಲವು ಕಡೆಗಳಲ್ಲಿ ಯುವಕರು ಒಂದು



ಚಟ ತೇಜಿಸಲು ಮತ್ತೊಂದು ಚಟಕ್ಕೆ ದಾಸರಾಗುತ್ತಾರೆ ನಿಷೇದಿತಗೊಂಡಿರುವ ಯಾವುದೇ ಮಾದಕ ವಸ್ತುಗಳಾದರೂ ಕೂಡಾ ಜೀವಕ್ಕೆ ಕಂಟಕವಾಗಿವೆ ವಿದ್ಯಾರ್ಥಿ ಜೀವನವೆಂಬುದು ಸುಂದರ ಜೀವನವಾಗಿ ಈ ಸಮಯದಲ್ಲಿ ತಮ್ಮ ಜೀವನವನ್ನು ರೂಪಿಸಿಕೊಳ್ಳುವ ಸಮಯವಾಗಿದೆ ಇಂತಹ ಮಾದಕ ವಸ್ತುಗಳ ಚಟಕ್ಕೆ ದಾಸರಾಗದೇ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದ ಅವರು ಇಂದಿನ ದಿನಮಾನದಲ್ಲಿ ಸೈಬರ್ ಕ್ರೈಂ ಎಂಬ ಪೇಡಂಭೂತಕ್ಕೆ ಸಾಕಷ್ಟು ಜನರು ವಂಚನೆಗೊಳಗಾಗುತ್ತಿದ್ದಾರೆ ಸಂಪರ್ಕಕ್ಕೆ ಸಿಗದ ಕರೆಗಳ ಮೂಲಕ ಓಟಿಪಿ ಪಡೆದು ಹಣವನ್ನು ವಂಚಿಸಿರುವ ಪ್ರಕರ್ಣಗಳು ಕಂಡುಬರುತ್ತಿವೆ ಸಾಮಾಜಿಕ ಜಾಲತಾಣಗಳನ್ನು ಬಳಸುವಾಗಲೂ ಎಚ್ಚರವಹಿಸಬೇಕೆಂದು ತಿಳಿ ಹೇಳಿದ ಅಧಿಕಾರಿ ಮಹ್ಮದ ಪಶುಉದ್ದೀನ್ ಅವರು ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಮೊದಲು ರಸ್ತೆ ನಿಯಮಗಳನ್ನು ತಿಳಿದುಕೊಳ್ಳಬೇಕು ಇಂದು ಬೆಳೆಯುತ್ತಿರುವ ನಗರಗಳಲ್ಲಿ ಸಂಚರಿಸುವಾಗ ಎಚ್ಚರವಹಿಸಬೇಕೆಂದು ಅವರು ಇನ್ನೂ ವಯಸ್ಕರಾಗದ ಮಕ್ಕಳನ್ನು ಮಧುವೆ ಮಾಡುವದು ಅಪರಾದವಾಗಿದೆ ಬಾಲ್ಯವಿವಾಹ ನಿಷೇದ ಕಾಯ್ದೆ ಅತ್ಯಂತ ಕಠಿಣವಾದುದ್ದಾಗಿದೆ ಇನ್ನೂ ತಿಳುವಳಿಕೆ ಇಲ್ಲದ ಮಕ್ಕಳಿಗೆ ಮಧುವೆ ಮಾಡುವದರಿಂದ ವಯಸ್ಕರಾದ ಮೇಲೆ ಮನೆಯಲ್ಲಿ ಸಮಸ್ಯೆಗಳ ಸರಮಾಲೆಯಿಂದಲೇ ಸಾಕಷ್ಟು ಕಡೆಗಳಲ್ಲಿ ಬಿಡುಗಡೆ ಹಂತಕ್ಕೆ ಬಂದಿರುವದು ಕಂಡಿದ್ದೇವೆಂದ ಅವರು ಯಾವುದೇ ರೀತಿಯ ಸಮಸ್ಯೆಗಳು ಕಂಡು ಬಂದಲ್ಲಿ ಮಕ್ಕಳ ಸಹಾಯ ವಾಣಿ 1930ಗೆ ಕರೆ ಮಾಡಿ ಮಾಹಿತಿ ನೀಡಬೇಕು ನಿಮ್ಮ ಸಹಾಯಕ್ಕೆ ಪೊಲೀಸ್ ಇಲಾಖೆ ಸದಾ ಕೆಲಸ ಮಾಡುತ್ತದೆ ಎಂದು ಹೇಳಿದ ಅವರು ಲೈಂಗಿಕ ಕಿರುಕುಳ, ಮತ್ತು ಪೋಕ್ಸೋ ಕಾಯ್ದೆ, ಮಹಿಳೆಯರ ರಕ್ಷಣೆ, ಮಾದಕ ವಸ್ತುಗಳ ವೆಸನ ಕುರಿತು ಅಲ್ಲದೇ ಕಾನೂನಿನ ಬಗ್ಗೆ ವಿಧ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಈ ಕಾರ್ಯಕ್ರಮದಲ್ಲಿ ಎಎಸ್‌ಐ ಸಂಜೀವ ಬಾಗೇವಾಡಿ, ಎಸ್.ಕೆ.ಪಿಯು ಕಾಲೇಜ್ ಅಧ್ಯಕ್ಷ ಎಂ.ಆರ್.ಕತ್ತಿ, ಎಸ್.ಕೆ.ಪ್ರೌಢ ಶಾಲೆಯ ಅಧ್ಯಕ್ಷ ಎಂ.ಸಿ.ಕತ್ತಿ, ಪಿಯು ಕಾಲೇಜ್ ಪ್ರಾಚಾರ್ಯ ಕೆ.ಕಿಶೋರಕುಮಾರ, ಪ್ರೌಢ ಶಾಲೆಯ ಉಪ ಪ್ರಾಚಾರ್ಯ ಜಗದೀಶ ಕಟ್ಟಿಮನಿ, ಮಹಿಳಾ ಕಾಲೇಜ್ ಪ್ರಾಚಾರ್ಯ ಶ್ರೀಮತಿ ಜೆ.ಸಿ.ಹಿರೇಮಠ, ಉಪನ್ಯಾಸಕ ಎಸ್.ಎಸ್.ನೆಲ್ಲಗಿ, ಪೊಲೀಸ್ ಸಿಬ್ಬಂದಿಗಳಾದ ಎಂ.ಎಲ್.ಪಟ್ಟೇದ, ಸಿದ್ದನಗೌಡ ದೊಡಮನಿ, ರವಿ ಬಿರಾದಾರ, ಬಸವರಾಜ ಹಡಲಗಿ, ರಾಮನಗೌಡ ಬಿರಾದಾರ, ಹಾಗೂ ಪಿಯು ಕಾಲೇಜ್ ಮತ್ತು ಪ್ರೌಢ ಶಾಲಾ ವಿಭಾಗದ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತ-ರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :116, Postal Reg No. PMG/KA/NK/BM/135/25-27 / POST AT Vantamury Colony Post Office